ಸಂವಿಧಾನದಲ್ಲಿನ ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ ಫ್ರೆಂಚ್ ಕ್ರಾಂತಿಯಿಂದ ಬಂದಿದ್ದಲ್ಲ. ಈ ಪರಿಕಲ್ಪನೆ ಭಾರತದ್ದು. ಇದು ತಥಾಗತ ಬುದ್ಧ ನೀಡಿದ್ದು. ಅಂಬೇಡ್ಕರ್ ಅವರ ಸಂವಿಧಾನ ಸಭೆಯ ಭಾಷಣವನ್ನು ಮತ್ತೊಮ್ಮೆ ಓದಿಕೊಳ್ಳಬೇಕು. ಸಾಮಾಜಿಕ ಸ್ವಾತಂತ್ರ್ಯ ನೆಲೆ ಗೊಳ್ಳದೆ ರಾಜಕೀಯ, ಆರ್ಥಿಕ ಸ್ವಾತಂತ್ರ್ಯ ಸಿಗುವುದಿಲ್ಲ ಎಂದಿದ್ದಾರೆ.

• **ಡಾ. ಮೋಹನ್ ಭಾಗವತ್** ಆರ್.ಎಸ್‌ಎಸ್‌ನ ಸರ ಸಂಘ ಚಾಲಕ

ನಾವು ಮೊದಲು ಜಾತಿ ಮರೆಯಬೇಕು

ಸುವರ್ಣ ಮಹೋತ್ಸವ ಉಪನ್ಯಾಸ ಮಾಲೆಯ ಸಂವಾದದಲ್ಲಿ ಡಾ.ಮೋಹನ್ ಭಾಗವತ್ ಹೇಳಿಕೆ

• **ಕನ್ನಡಪ್ರಭ ವಾರ್ತೆ** ಮೈಸೂರು

ಜಾತಿ ರಾಜಕಾರಣದ ಕುರಿತು ಮಾತನಾಡುವಾಗ ರಾಜಕಾರಣಿಗಳನ್ನು ದೂರದೇ ನಮ್ಮ ಜಾತಿಗಳನ್ನು ಮರೆಯಬೇಕು ಎಂದು ಆರ್.ಎಸ್‌ಎಸ್‌ನ ಸರ ಸಂಘಚಾಲಕ ಡಾ. ಮೋಹನ್ ಭಾಗವತ್ ಹೇಳಿದರು.

ನಗರದ ಸುತ್ತೂರು ಶಾಖಾ ಮಠದಲ್ಲಿ ಗುರುವಾರ ಜೆಎಸ್‌ಎಸ್ ಮಹಾವಿದ್ಯಾಪೀಠ ಆಯೋಜಿಸಿದ್ದ ಸುವರ್ಣ ಮಹೋತ್ಸವ ವಿಶೇಷ ಉಪನ್ಯಾಸದಲ್ಲಿ ಪಾಲ್ಗೊಂಡು ಸಂವಾದದಲ್ಲಿ ಮಾತನಾಡಿದರು.

ಜಾತಿರಾಜಕಾರಣಹಾಸುಹೊಕ್ಕಾಗಲು ನಾವೇ ಕಾರಣ. ನಿಮ್ಮ ಜಾತಿಯನ್ನು ರಾಜಕಾರಣಿಗಳಿಗೆ ಹೇಳಿದರೆ, ಅವರು ಜಾತಿಯ ಮೂಲಕ ನಿಮ್ಮನ್ನು ನೆನಪು ಮಾಡಿಕೊಳ್ಳುತ್ತಾರೆ. ಹೀಗಾಗಿ, ರಾಜಕಾರಣಿಗಳನ್ನು ದೂರದೇ ನಮ್ಮ ಜಾತಿಗಳನ್ನು ಮರೆಯಬೇಕು ಎಂದರು.

ನಾವು ರಾಜಕಾರಣಿಗಳನ್ನು ಆಯ್ಕೆ ಮಾಡುವಾಗ ಅವರ ಕಾರ್ಯವಿಧಾನದ ಆಧಾರದ ಮೇಲೆ ಆಯ್ಕೆ ಮಾಡಬೇಕೇ ಹೊರತು ಜಾತಿಯಿಂದಲ್ಲ. 1942ರಲ್ಲಿ ಅಂತರ್ಜಾತಿ ವಿವಾಹ ನಡೆದಿತ್ತು. ಅಂಬೇಡ್ಕರ್‌ಮತ್ತು ಗೋಳ್ವಲ್ಕರ್‌ಅವರು ಆ ದಂಪತಿಗೆ ಹರಸಿ ಪತ್ರ ಬರೆದಿದ್ದರು. ಜಾತಿ ರಹಿತ ಸಮಾಜ ನಿರ್ಮಾಣಕ್ಕೆ ವೇದಿಕೆ ಎಂದಿದ್ದಾಗಿ ಅವರು ಹೇಳಿದರು.

ಏಕರೂಪ ನಾಗರಿಕ ಸಂಹಿತೆಯು ಉತ್ತರಾಖಂಡದಲ್ಲಿ ಅನುಷ್ಠಾನಗೊಂಡಿದೆ. ನಿಧಾನವಾಗಿ ದೇಶದಲ್ಲೆಲ್ಲ ಅನುಷ್ಠಾನಗೊಳ್ಳಲಿದೆ. ಇದು ಪ್ರಜಾಪ್ರಭುತ್ವ ಕೆಲವೇ ಜನರು ಇದರ ನಿರ್ಧಾರ ಮಾಡಲಾಗದು. 140 ಕೋಟಿ ಜನರು ನಿರ್ಧರಿಸಬೇಕು ಎಂದು ಅವರು ತಿಳಿಸಿದರು.

ಬಳಿಕ ಮಾತನಾಡಿದ ಸುತ್ತೂರು ಮಠದ ಶ್ರೀಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಜಗತ್ತಿನ ಸಂಸ್ಕೃತಿ ರಕ್ಷಿಸುವ ಗಟ್ಟಿತನ ಹಿಂದೂಧರ್ಮಕ್ಕಿದೆ ಎಂದರು.

ಮಾನವೀಯ ನೆಲೆಯಲ್ಲಿ ಪ್ರತಿಯೊಬ್ಬರನ್ನೂ ಪ್ರೀತಿಸುವ ದೇಶ ಯಾವುದಾದರು ಇದ್ದರೆ ಅದು ಭಾರತ ಮಾತ್ರ. ಗಡಿ, ಭಾಷೆ ಮೀರಿ ಎಲ್ಲರನ್ನೂ ಪ್ರೀತಿಸುವ ರಾಷ್ಟ್ರ ನಮ್ಮದು ಎಂದರು.

ಮನುಷ್ಯ ಅಂತರಂಗ ಬಹಿರಂಗದಲ್ಲಿ ಪರಿಶುದ್ಧತೆ ಕಾಪಾಡಿಕೊಳ್ಳಬೇಕು. ಆತ್ಮನಿರೀಕ್ಷೆ ಮೂಲಕ ತನ್ನನ್ನು ತಾನು ಸರಿಪಡಿಸಿಕೊಂಡರೆ ದೇಶ ಸರಿಯಾಗುತ್ತದೆ. ರಾಗ ದ್ವೇಷ ಬದಿಗಿರಿಸಿ, ಸ್ನೇಹ, ಸೌಹಾರ್ದತೆ, ಪ್ರೀತಿ, ವಿಶ್ವಾಸ ಬೆಳೆಸಿಕೊಳ್ಳಬೇಕು. ಜಗತ್ತು ಬದಲಾಗಿದೆ, ದೇಶ ಕೆಟ್ಟು ಹೋಗಿದೆ ಎಂದು ದೂಷಿಸುವ ಬದಲು ತಮ್ಮ ಆಂತರಿಕ ಬದಲಾವಣೆ ಮಾಡಿಕೊಳ್ಳಬೇಕು. ಅಂತರಂಗವಾಗಿ ಪರಿಶುದ್ಧವಾಗಿದ್ದರೆ ದೇವರ ಸಾಕ್ಷಾತ್ಕಾರವಾಗುತ್ತದೆ ಎಂದರು.

ಸಹಸ್ರಮಾನದ ಹಿಂದೆ ಸ್ಥಾಪಿತವಾದ ಶ್ರೀಮಠದ ಎಲ್ಲ ಪೂಜ್ಯರು ಅಂದಿನಿಂದ ಇಂದಿನವರೆಗೆ ಅರ್ಥಪೂರ್ಣವಾಗಿ ಸಾಮಾಜಿಕ ಸೇವೆ ಮಾಡಿದ್ದಾರೆ. ಆ ಸಾಲಿನಲ್ಲಿ ಮಂತ್ರ ಮಹರ್ಷಿಗಳು ಸಮಾಜಕ್ಕೆ ಕಾರುಣ್ಯ ಕರುಣಿಸಿದವರು. ರಾಜೇಂದ್ರ ಶ್ರೀಗಳು ವೈಯಕ್ತಿಕ ಜ್ಞಾನಾರ್ಜನೆ ಬದಿಗಿರಿಸಿ ಸಮಾಜದ ಸೇವೆಗೆ ತಮ್ಮನ್ನು ಸಮರ್ಪಿಸಿಕೊಂಡರು. ಜೆಎಸ್‌ಎಸ್ ವಿದ್ಯಾಪೀಠದ ಸ್ಥಾಪನೆಯಾದ 50ನೇ ವರ್ಷದ ಕಾರ್ಯಕ್ರಮದ ವಿಶೇಷಗಳಲ್ಲಿ ಸುವರ್ಣ ಮಹೋತ್ಸವದ ವಿಶೇಷ ಉಪನ್ಯಾಸವೂ. ಇಂದು ಮೋಹನ್ ಭಾಗವತರು ತಮ್ಮ ಮಹತ್ವಪೂರ್ಣ ಉಪನ್ಯಾಸದ ಮೂಲಕ ಕಾರ್ಯಕ್ರಮದ ಘನತೆಯನ್ನು ಮತ್ತಷ್ಟು ಎತ್ತರಕ್ಕೆ ಕೊಂಡೊಯ್ದಿದ್ದಾರೆ ಎಂದರು.



ಮೈಸೂರಿನ ಸುತ್ತೂರು ಶಾಖಾ ಮಠಕ್ಕೆ ಭೇಟಿ ನೀಡಿದ್ದ ಆರ್.ಎಸ್.ಎಸ್ ಸರ ಸಂಘಚಾಲಕ ಡಾ. ಮೋಹನ್ ಭಾಗವತ್ ಅವರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಅವರೊಡನೆ ಕೆಲಕಾಲ ಸಮಾಲೋಚನೆ ನಡೆಸಿದರು. ಆರ್.ಎಸ್.ಎಸ್ ನ ಸಿ.ಆರ್. ಮುಕುಂದ, ವಿದ್ಯಾಪೀಠದ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ.ಸಿ.ಜಿ. ಬೆಟಸೂರಮಠ, ಕಾರ್ಯದರ್ಶಿ ಪ್ರೊ. ಎಸ್.ಪಿ. ಮಂಜುನಾಥ್, ಮುಕ್ತ ವಿವಿ ಕುಲಪತಿ ಪ್ರೊ. ಶರಣಪ್ಪ ವಿ. ಹಲಸೆ ಇದ್ದಾರೆ.

> **ದೇಶ ಸಮೃದ್ಧವಾಗಿರಬೇಕಾದರೆ ಸಮಗ್ರತೆ ಕಾಪಾಡುವುದು ಎಲ್ಲರ ಕರ್ತವ್ಯ. ಸಾಮಾನ್ಯ ಮನುಷ್ಯನೂ ಸಂತೋಷವಾಗಿ ಬಹುಕಿದಾಗ ಮಾತ್ರ ಅಭಿವೃದ್ಧಿಗೆ ನಿಜವಾದ ಅರ್ಥ ಬರುತ್ತದೆ.**
>
> • **ಡಾ. ಮೋಹನ್ ಭಾಗವತ್** ಆರ್.ಎಸ್‌ಎಸ್‌ನ ಸರ ಸಂಘಚಾಲಕ



ಮೈಸೂರಿನಲ್ಲಿ ನಡೆದ ಐಎಎಸ್ ಅಧಿಕಾರಿ, ಹಾಸನ ಜಿಪಂ ಸಿಇಒ ಬಿ.ಆರ್. ಪೂರ್ಣಿಮಾ- ಕೆ.ಆರ್. ನಗರ ತಾಲೂಕು ಚಂದಗಾಲು ಸಿ.ಎಸ್.ಸುದರ್ಶನ್ ಅವರ ಪುತ್ರಿ ಡಾ.ಎಸ್.ಪಿ.ಸಿರಿ ಗಂಗಡಕಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆ ಶಿಡ್ಲಘಟ್ಟದ ಡಾ.ಎನ್.ಎಸ್.ರೋಹಿಣಿ, ಹಾರೋಬಂಡೆ ಡಾ.ಎಸ್.ಎನ್.ರವಿಶಂಕರ್ ಅವರ ಪುತ್ರ ಡಾ.ಎನ್.ಆರ್.ರಕ್ಷಿತ್ ಅವರ ವಿವಾಹ ಆರತಕ್ಷತೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭಾಗವಹಿಸಿವಧು-ವರನಿಗೆ ಶುಭ ಹಾರೈಸಿದರು. ದಾವಣಗೆರೆ ಐಜಿಪಿ ಡಾ.ಬಿ.ಆರ್.ರವಿಕಾಂತೇಗೌಡ ಮೊದಲಾದವರು ಇದ್ದಾರೆ.

ಬಂಧುಭಾವ ಇಲ್ಲದಿದ್ದರೆ ದೇಶದ ಸ್ವಾತಂತ್ರ್ಯ ಕಾಪಾಡಿಕೊಳ್ಳುವುದು ಕಷ್ಟ

ಅಂಬೇಡ್ಕರ್‌ಸಂವಿಧಾನ ಸಭೆಯ ಭಾಷಣ ಮತ್ತೊಮ್ಮೆ ಓದಿಕೊಳ್ಳಬೇಕು | ಕಟ್ಟಕಡೆಯ ವ್ಯಕ್ತಿಯ ಅಭಿವೃದ್ಧಿಯೇ ದೇಶದ ಸರ್ವಾಂಗೀಣ ಅಭಿವೃದ್ಧಿ: ಆರ್‌ಎಸ್‌ಎಸ್ ಸರ ಸಂಘಚಾಲಕ ಡಾ. ಮೋಹನ್ ಭಾಗವತ್ ಅಭಿಪ್ರಾಯ

• **ಕನ್ನಡಪ್ರಭ ವಾರ್ತೆ** ಮೈಸೂರು

ರಾಜಕೀಯ ಮತ್ತು ಆರ್ಥಿಕ ಸಮಾನತೆಗಿಂತ ಸಾಮಾಜಿಕ ಸಮಾನತೆ ಮುಖ್ಯ ಎಂದು ಅಂಬೇಡ್ಕರ್‌ಪ್ರತಿಪಾದಿಸಿದ್ದಾರೆ. ಸ್ವಾತಂತ್ರ್ಯ ಮತ್ತು ಸಮಾನತೆಯನ್ನು ಬೆಸೆಯುವ ಕೊಂಡಿಯೇ ಬಂಧುಭಾವ . ಈ ಬಂಧುಭಾವ ಇಲ್ಲದಿದ್ದರೆ ದೇಶದ ಸ್ವಾತಂತ್ರ್ಯ ಕಾಪಾಡಿಕೊಳ್ಳುವುದು ಕಷ್ಟ ಎಂದು ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಸರ ಸಂಘಚಾಲಕ ಡಾ. ಮೋಹನ್ ಭಾಗವತ್ ಹೇಳಿದರು.

ನಗರದ ಸುತ್ತೂರು ಶಾಖಾ ಮಠದ ಆವರಣದಲ್ಲಿ ಗುರುವಾರ ಜೆಎಸ್‌ಎಸ್ ಮಹಾವಿದ್ಯಾಪೀಠದ ಸುವರ್ಣ ಮಹೋತ್ಸವ ವಿಶೇಷ ಉಪನ್ಯಾಸ - 15 ರಾಷ್ಟ್ರೀಯ ಅಭಿವೃದ್ಧಿಗೆ ಸಾಮಾಜಿಕ ಸೌಹಾರ್ದತೆ ಪ್ರೇರಕ ವಿಷಯ ಕುರಿತು ಅವರು ಮಾತನಾಡಿದರು.

ಸಹೋದರರನ್ನು ಅಸ್ಪೃಶ್ಯರಾಗಿ ಶತಮಾನಗಳ ಕಾಲ ದೂರವಿಡಲಾಗಿದೆ. ಮೇಲು- ಕೀಳು ಎಂಬ ಮನೋಭಾವ ಕಳೆದು ಸರ್ವರೂ ಒಂದೇ ಎಂಬ ಏಕಭಾವ ಭಾರತೀಯರಲ್ಲಿ ಮೂಡಬೇಕು. ದೇಶದ ಕೆಲವೇ ಕೆಲವು ಶ್ರೀಮಂತ ವ್ಯಕ್ತಿಗಳ ಏಳಿಗೆಯಿಂದ ದೇಶ ಅಭಿವೃದ್ಧಿಯಾಗಿದೆ ಎಂದು ಹೇಳಲಾಗದು. ದೇಹದ ಒಂದು ಭಾಗ ಪಾರ್ಶ್ವವಾಯುವಿಗೆಒಳಗಾಗಿದ್ದರೆ,ಇಡೀದೇಹಆರೋಗ್ಯವಾಗಿದೆ ಎಂದು ಹೇಗೆ ಹೇಳಲು ಆಗುವುದಿಲ್ಲವೋ ಹಾಗೆಯೇ ಸಮಾಜದ ಕಟ್ಟಕಡೆಯ ವ್ಯಕ್ತಿಯ ಅಭಿವೃದ್ಧಿಯೂ ಆಗದಿದ್ದರೆ ಅದು ನಿಜವಾದ ಅಭಿವೃದ್ಧಿಯಲ್ಲ. ಹೀಗಾಗಿ ಕಟ್ಟಕಡೆಯ ವ್ಯಕ್ತಿಯೂ ಸಾಮರಸ್ಯ, ಸೌಹಾರ್ದತೆಯಿಂದ, ನಾವೆಲ್ಲರೂ ಒಂದು ಎಂದು ಸಂತೋಷದಿಂದ ಇದ್ದಾಗ ಮಾತ್ರ ದೇಶದ ನಿಜವಾದ ಅಭಿವೃದ್ಧಿ ಆಗುತ್ತದೆ ಎಂದು ಅವರು ಪ್ರತಿಪಾದಿಸಿದರು.

ಸಮಾಜದಲ್ಲಿ ಸಾಮರಸ್ಯ ಮೂಡಿಸಲು ವಿವಿಧ ಜಾತಿ, ಧರ್ಮ ಮತ್ತು ಭಾಷೆಯ ಜನರ ಮನೆಗಳಿಗೆ ಭೇಟಿ ನೀಡಿ ಸ್ನೇಹ ಬೆಳೆಸಬೇಕು. ದುರ್ಬಲವರ್ಗದವರ ಉದ್ಧಾರಕ್ಕೆ ಎಲ್ಲರೂ ಒಗ್ಗೂಡಿ ಶ್ರಮಿಸಬೇಕು. ಕಟುವಾದ ನುಡಿಗಳನ್ನು ಬಿಟ್ಟು, ಸತ್ಯ ಮತ್ತು ಪ್ರೀತಿಯಿಂದ ಸಂವಹನ ನಡೆಸುವ ಮೂಲಕ ಮನಸ್ಸಿನ ವಿಕಾರಗಳನ್ನು ದೂರ ಮಾಡಬೇಕು ಎಂದು ಅವರು ಹೇಳಿದರು.

ಭಾರತೀಯರು ಭ್ರಾತೃತ್ವ ಮತ್ತು ಪರಸ್ಪರ ಸಹಾಯದೊಂದಿಗೆ ನಾಗರೀಕತೆ ಕಟ್ಟಿದ್ದಾರೆ. ನಮ್ಮ ಸಮಾಜವು ಪರೋಪಕಾರವೇ ಸೇವೆ, ಕರ್ತವ್ಯವೇ ಜೀವನದ ಪರಮ ಗುರಿಯೆಂದು ತಿಳಿದಿದೆ. ಭಾಷೆ, ಜಾತಿ, ಪಂಗಡಗಳನ್ನು ಮೀರಿ ಬಂಧುತ್ವ ನೆಲೆಗೊಳ್ಳಬೇಕು. ಅಸ್ತಿತ್ವಕ್ಕಾಗಿ ಮತ್ತೊಬ್ಬರ ವಿರುದ್ಧ ಹೋರಾಟ ನಡೆಸುವುದು ಪಾಶ್ಚಾತ್ಯ ಪರಿಕಲ್ಪನೆ ಎಂದು ಅವರು ತಿಳಿಸಿದರು.

ಸಂವಿಧಾನದಲ್ಲಿನ ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ ಫ್ರೆಂಚ್ ಕ್ರಾಂತಿಯಿಂದ ಬಂದಿದ್ದಲ್ಲ. ಈ ಪರಿಕಲ್ಪನೆ ಭಾರತದ್ದು. ಇದು ತಥಾಗತ ಬುದ್ಧನೀಡಿದ್ದು. ಅಂಬೇಡ್ಕರ್‌ಅವರ ಸಂವಿಧಾನ ಸಭೆಯ ಭಾಷಣವನ್ನು ಮತ್ತೊಮ್ಮೆ ಓದಿಕೊಳ್ಳಬೇಕು. ಸಾಮಾಜಿಕ ಸ್ವಾತಂತ್ರ್ಯ ನೆಲೆಗೊಳ್ಳದೆ ರಾಜಕೀಯ, ಆರ್ಥಿಕ ಸ್ವಾತಂತ್ರ್ಯ ಸಿಗುವುದಿಲ್ಲ ಎಂದಿದ್ದಾರೆ ಎಂದರು. ಸರ್ವೇ ಭವಂತು ಸುಖಿನಃ ಎಂಬ ತತ್ವದಡಿ, ಕೇವಲ ಬದುಕುವುದಕ್ಕಲ್ಲ, ಬದಲಾಗಿ ಇತರರಿಗಾಗಿ ಬದುಕುವ ಗುಣವೇ ಭಾರತೀಯ ಸಮಾಜದ ಶಕ್ತಿ. ಸಮಾಜ ಎಂದರೆ ಕೇವಲ ಜನರ ಗುಂಪಲ್ಲ, ಅದೊಂದು ಭಾವನಾತ್ಮಕ ಐಕ್ಯತೆ. ಭಾರತೀಯ ಮತ್ತು ಪಾಶ್ಚಿಮಾತ್ಯ ಸಮಾಜದ ನಡುವಿನ ವ್ಯತ್ಯಾಸವೇ ಇದು. ಪಾಶ್ಚಿಮಾತ್ಯ ರಾಷ್ಟ್ರಗಳಲ್ಲಿ ಸಮಾಜ ಎಂಬುದು ಒಂದು ಸಾಮಾಜಿಕ ಒಪ್ಪಂದ. ಅಲ್ಲಿ ವ್ಯಕ್ತಿಗಳ ನಡುವೆ ಪರಸ್ಪರ ಲಾಭ ಇದ್ದರೆ ಮಾತ್ರ ಸಂಬಂಧವಿರುತ್ತದೆ. ಆದರೆ, ಭಾರತೀಯ ದೃಷ್ಟಿಕೋನದಲ್ಲಿ ಸಮಾಜ ಎಂದರೆ ಸಾಯುಜ್ಯ. ಇದು ಸಾವಿರಾರು ವರ್ಷಗಳಿಂದ ಒಟ್ಟಾಗಿ ಬಾಳಿದ ಜನರ ನಡುವೆ ಉಂಟಾದ ಸ್ವಾಭಾವಿಕ ಆತ್ಮೀಯತೆ ಎಂದು ಅವರು ವ್ಯಾಖ್ಯಾನಿಸಿದರು.

ಸಂಘರ್ಷಗಳನ್ನು ಭಾರತೀಯ ಸಂಸ್ಕೃತಿ ಹೇಗೆ ನಿಭಾಯಿಸುತ್ತದೆ ಎಂಬುದಕ್ಕೆ ಶಿಬಿ ಚಕ್ರವರ್ತಿಯ ಕಥೆಯನ್ನು ಅವರು ಉದಾಹರಿಸಿದರು. ದಯೆಯಿದ್ದಲ್ಲಿ ಧರ್ಮವಿರುತ್ತದೆ. ಆಶ್ರಯ ಅರಸಿ ಬಂದ ಹಕ್ಕಿಯನ್ನು ರಕ್ಷಿಸಲು ತನ್ನನ್ನೇ ಅರ್ಪಿಸಿಕೊಂಡ ಶಿಬಿ ಚಕ್ರವರ್ತಿಯ ತ್ಯಾಗ, ದಯೆ ನಮಗೆ ಬರಬೇಕು. ಈ ತ್ಯಾಗ, ಕರುಣೆ, ದಯೆಯಲ್ಲಿಯೇ ಸೌಹಾರ್ದವಿದೆ ಎಂದು ವಿಶ್ಲೇಷಿಸಿದರು.

ಕಾರ್ಯಕ್ರಮದಲ್ಲಿ ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಇದ್ದರು. ಗಾಯಕಿಯರಾದ ಕೆ.ಜಿ. ವಿನುತಾ, ಅಮೂಲ್ಯ ಅವರು ಪುರುಷೋತ್ತಮ್, ಎಸ್. ನಾಗರಾಜ್ ಅವರ ಪಕ್ಕಾವಾದ್ಯದ ಸಾಂಗತ್ಯದಲ್ಲಿ ವಚನಗಳನ್ನು ಪ್ರಸ್ತುತಪಡಿಸಿದರು. ಜೆಎಸ್‌ಎಸ್ ಉನ್ನತ ಶಿಕ್ಷಣ ಸಂಶೋಧನಾ ಅಕಾಡೆಮಿಯ ಸಹ ಕುಲಾಧಿಪತಿ ಪ್ರೊ.ಬಿ. ಸುರೇಶ್ ಸ್ವಾಗತಿಸಿದರು. ಜೆಎಸ್‌ಎಸ್ ಕಾನೂನು ಕಾಲೇಜಿನ ಕಾರ್ಯನಿರ್ವಾಹಕ ಪ್ರೊ. ಕೆ.ಎಸ್. ಸುರೇಶ್ ಉಪನ್ಯಾಸದ ನಂತರ ಸಂವಾದ ನಡೆಸಿಕೊಟ್ಟರು.



ಮೈಸೂರು ವಿವಿ ಸಂಜೆ ಕಾಲೇಜಿಗೆ ಪ್ರವೇಶಾತಿ ಪ್ರಾರಂಭ

• **ಕನ್ನಡಪ್ರಭ ವಾರ್ತೆ** ಮೈಸೂರು

ಮೈಸೂರು ವಿಶ್ವವಿದ್ಯಾನಿಲಯದ ಸಂಜೆ ಕಾಲೇಜಿನಲ್ಲಿ 2026-27ನೇ ಸಾಲಿಗೆ ಬಿಎ, ಬಿಕಾಂ ಮತ್ತು ಬಿಬಿಎ ಪದವಿ ಕೋರ್ಸ್ ಗಳಿಗೆ ಪ್ರವೇಶಾತಿ ಪ್ರಾರಂಭವಾಗಿದೆ. ದ್ವಿತೀಯ ಪಿಯುಸಿ ಹಾಗೂ ಐಟಿಐ ವಿದ್ಯಾರ್ಥಿಗಳು ಸ್ನಾತಕ ಪದವಿ ಪ್ರವೇಶಾತಿ ಪಡೆಯಲು ಹೆಚ್ಚಿನ ಮಾಹಿತಿಗೆ ವಿವಿ ಸಂಜೆ ಕಾಲೇಜು, ಮಾಹಾರಾಜ ಕಾಲೇಜು ಕ್ಯಾಂಪಸ್, ರಾಮಸ್ವಾಮಿ ವೃತ್ತದ ಹತ್ತಿರ, ಮೈಸೂರು ಇಲ್ಲಿಗೆ ಮಧ್ಯಾಹ್ನ 2.30 ರಿಂದ ರಾತ್ರಿ 9 ರವರೆಗೆ ಭೇಟಿ ನೀಡಬಹುದು ಅಥವಾ ಮೊ. 99166 41557, 99012 61106 ಸಂಪರ್ಕಿಸಬಹುದು ಎಂದು ಪ್ರಾಂಶುಪಾಲರು ತಿಳಿಸಿದ್ದಾರೆ.

ಸಾಹಿತ್ಯ-ಶಿಕ್ಷಣ-ಸಮಾಜ ಸೇವೆಯ ಸಮನ್ವಯ ಸಾಧಕ

ಪುತ್ತೂರು ಉಮೇಶ್ ನಾಯಕ್

ಪುತ್ತೂರು ಉಮೇಶ್ ನಾಯಕ್ ಅವರು ಸಾಹಿತ್ಯ, ಶಿಕ್ಷಣ ಹಾಗೂ ಸಮಾಜ ಸೇವಾ ಕ್ಷೇತ್ರಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಬಹುಮುಖ ವ್ಯಕ್ತಿತ್ವ. ಚಿಂತನೆ, ಕ್ರಿಯಾಶೀಲತೆ ಮತ್ತು ಮಾನವೀಯ ಸೇವಾಭಾವದ ಮೂಲಕ ಪುತ್ತೂರು ತಾಲೂಕು ಮಾತ್ರವಲ್ಲದೆ ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ವಿಶಿಷ್ಟ ಗುರುತನ್ನು ನಿರ್ಮಿಸಿಕೊಂಡಿರುವ ಅವರು, ಸಮಾಜದ ವಿವಿಧ ಹಂತಗಳ ಮೇಲೆ ಸ್ಪಷ್ಟವಾದ ಸಕಾರಾತ್ಮಕ ಪ್ರಭಾವ ಬೀರಿರುವ ಸೇವಾ ಸಾಧಕರು.



ಪ್ರಸ್ತುತ ಪುತ್ತೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿರುವ ಅವರು, ಕಳೆದ ನಾಲ್ಕು ವರ್ಷಗಳಿಂದ ತಾಲೂಕಿನ 32 ಗ್ರಾಮಗಳಲ್ಲಿ ಪ್ರತಿಮಾಸವೂ ಮಕ್ಕಳ ಸಾಹಿತ್ಯ ಸಮ್ಮೇಳನದ ಸ್ವರೂಪದ ಗ್ರಾಮ ಸಾಹಿತ್ಯ ಸಂಭ್ರಮ ಎಂಬ ವಿನೂತನ ಕಾರ್ಯಕ್ರಮವನ್ನು ಹಮ್ಮಿಕೊಳ್ಳುತ್ತಿದ್ದಾರೆ. ಗ್ರಾಮ ಸಾಹಿತ್ಯ ಸಂಭ್ರಮದಲ್ಲಿ ವಿದ್ಯಾರ್ಥಿ ಕವಿ ಗೋಷ್ಠಿ ಜೊತೆಗೆ ವಿನೂತನ ಪ್ರಯೋಗಗಳಾದ ಬಾಲಕಥಾಗೋಷ್ಠಿ, ಪ್ರವಾಸ ಕಥನ ಲೇಖನ, ನನ್ನ ಆಪ್ತಮಿತ್ರ ಲೇಖನ, ನನ್ನ ನೆಚ್ಚಿನ ಶಿಕ್ಷಕ ಲೇಖನ ಗೋಷ್ಠಿಗಳನ್ನು ಅಳವಡಿಸಿಕೊಂಡು ಯುವ ಜನತೆಯನ್ನು ಸಾಹಿತ್ಯ ಕ್ಷೇತ್ರದತ್ತ ಬರಮಾಡಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. 250ಕ್ಕೂ ಹೆಚ್ಚು ವಿವಿಧ ಕ್ಷೇತ್ರಗಳ ಸಾಧಕರನ್ನು ಗ್ರಾಮ ಮಟ್ಟದಲ್ಲಿ ಗುರುತಿಸಿ ಗೌರವಿಸಿದ್ದಾರೆ. 100ಕ್ಕೂ ಅಧಿಕ ಹೊಸ ಕೃತಿಗಳ ಪ್ರಕಟಣೆಗೆ ಮಾರ್ಗದರ್ಶನ ನೀಡಿ ಉದಯೋನ್ಮುಖ ಸಾಹಿತಿಗಳಿಗೆ ಬೆಂಬಲ ನೀಡಿದ್ದಾರೆ.

ಪುತ್ತೂರು ತಾಲೂಕಿನಲ್ಲಿ ಸುಮಾರು 20 ವರ್ಷಗಳಿಂದ ನಿಂತುಹೋದ ಕರ್ನಾಟಕ ರಾಜ್ಯೋತ್ಸವದ ಕನ್ನಡ ಭುವನೇಶ್ವರಿಯ ಭವ್ಯ ಮೆರವಣಿಗೆಯನ್ನು ಪುತ್ತೂರಿನ ಶಾಸಕರಾದ ಅಶೋಕ್ ರೈ ಯವರ ಮಾರ್ಗದರ್ಶನದಲ್ಲಿ ಸುಮಾರು 50ಕ್ಕೂ ಹೆಚ್ಚು ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಪುನರಾರಂಭಿಸಿ, ರಾಜ್ಯೋತ್ಸವದ ಅಂಗವಾಗಿ ನಡೆಯುವ ಸನ್ಮಾನವನ್ನು ತಾಲೂಕು ರಾಜ್ಯೋತ್ಸವ ಪ್ರಶಸ್ತಿ ಸ್ವರೂಪಕ್ಕೆ ತಂದ ಪ್ರಮುಖ ವ್ಯಕ್ತಿ. ಜಿಲ್ಲೆಯಲ್ಲಿ ತಾಲೂಕು ಮಟ್ಟದಲ್ಲಿ ರಾಜ್ಯೋತ್ಸವ ಪ್ರಶಸ್ತಿ ವ್ಯವಸ್ಥಿತವಾಗಿ ನಡೆಯುತ್ತಿರುವುದು ಪುತ್ತೂರಿನಲ್ಲಿ ಮಾತ್ರ ಎನ್ನುವುದು ಗಮನಾರ್ಹ.

ಕನ್ನಡದಲ್ಲೂ ಐಎಎಸ್ ಬರೆಯಿರಿ' ಅಭಿಯಾನ

ಶಿಕ್ಷಣ ಕ್ಷೇತ್ರದಲ್ಲಿ ಇವರ ಕೊಡುಗೆ ವಿಶೇಷವಾಗಿದೆ. ಕನ್ನಡ ಮಾಧ್ಯಮ ವಿದ್ಯಾರ್ಥಿಗಳ ಸ್ಪರ್ಧಾತ್ಮಕ ಭವಿಷ್ಯವನ್ನು ಗಮನದಲ್ಲಿರಿಸಿ ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಐಎಎಸ್ ಅಧಿಕಾರಿಗಳಾಗಬೇಕೆಂಬ ಮಹಾದಾಸೆಯಿಂದ ಕನ್ನಡದಲ್ಲೂ ಐಎಎಸ್ ಪರೀಕ್ಷೆ ಬರೆಯಿರಿ ಎಂಬ ಅಭಿಯಾನವನ್ನು ಆರಂಭಿಸಿ, 200ಕ್ಕೂ ಅಧಿಕ ಐಎಎಸ್- ಐಪಿಎಸ್ ಹಾಗೂ ತತ್ಸಮಾನ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಮಾಹಿತಿ ಕಾರ್ಯಗಾರಗಳನ್ನು ಕನ್ನಡದಲ್ಲೇ ನಡೆಸಿ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಅರಿವನ್ನುಂಟು ಮಾಡುವಲ್ಲಿ ಯಶಸ್ವಿಯಾಗಿದ್ದಾರೆ.

ಗ್ರಾಮಮಟ್ಟದಲ್ಲಿ ಸಾಹಿತ್ಯ ಸಂಭ್ರಮ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳ ಜಾಗೃತಿ ಕಾರ್ಯಕ್ರಮಗಳನ್ನು ಸಂಯೋಜಿತವಾಗಿ ನಡೆಸಿರುವುದು ರಾಜ್ಯದ ಕನ್ನಡ ಸಾಹಿತ್ಯ ಪರಿಷತ್ತು ಇತಿಹಾಸದಲ್ಲೇ ವಿನೂತನ ಪ್ರಯತ್ನವಾಗಿದೆ.

ಸಾಹಿತ್ಯ ಕ್ಷೇತ್ರದಲ್ಲಿ ಅವರು ಸಾಧಕ ಲೇಖಕರಾಗಿಯೂ ಗುರುತಿಸಿಕೊಂಡಿದ್ದಾರೆ. ಇತಿಹಾಸ ಪ್ರಸಿದ್ಧ ಪುತ್ತೂರು ಶ್ರೀ ಮಹಾಲಿಂಗೇಶ್ವರ ದೇವಸ್ಥಾನದ ಸಂಕ್ಷಿಪ್ತ ಸ್ಥಳಪುರಾಣವಾದ ಸ್ವಯಂಭೂ ಮಹಾಲಿಂಗೇಶ್ವರ ಕೃತಿಯನ್ನು ರಚಿಸಿದ್ದು, ಈ ಕೃತಿ ಧಾರ್ಮಿಕ ದತ್ತಿ ಇಲಾಖೆಯಿಂದ ಪ್ರಕಟವಾಗಿದೆ. ಇದಲ್ಲದೆ ಇನ್ನೂ ಮೂರು ಕೃತಿಗಳನ್ನು ರಚಿಸಿ ಕನ್ನಡ ಸಾಹಿತ್ಯಕ್ಕೆ ತಮ್ಮ ಕೊಡುಗೆಯನ್ನು ನೀಡಿದ್ದಾರೆ.

ನಿರ್ಗತಿಕರ ಪುನರ್ವಸತಿ ಸೇವೆ: ಪುತ್ತೂರು ಉಮೇಶ್ ನಾಯಕ್ ಅವರ ಸೇವಾ ಬದುಕಿನ ಅತ್ಯಂತ ಸ್ಪರ್ಶಕ ಅಧ್ಯಾಯವೆಂದರೆ ನಿರ್ಗತಿಕರು, ಭಿಕ್ಷುಕರು ಮತ್ತು ಅನಾಥರ ಪುನರ್ವಸತಿ ಕಾರ್ಯ. ಕಳೆದ ಹತ್ತು ವರ್ಷಗಳಲ್ಲಿ 100ಕ್ಕೂ ಅಧಿಕ ನಿರ್ಗತಿಕರನ್ನು ಪುನರ್ವಸತಿ ಕೇಂದ್ರಗಳಿಗೆ ಸೇರಿಸಿ ಸಮಾಜದ ಮುಖ್ಯವಾಹಿನಿಗೆ ತರುವ ಸಂಕಲ್ಪದೊಂದಿಗೆ ಅವರಿಗೆ ಹೊಸ ಬದುಕಿನ ಆಶಾಕಿರಣ ನೀಡಿದ್ದಾರೆ. ವಿಶೇಷವಾಗಿ ಎಚ್‌ಐವಿ ಪೀಡಿತ ಓರ್ವ ಮಹಿಳೆ ಹಾಗೂ ಇಬ್ಬರು ಮಕ್ಕಳನ್ನು ರಕ್ಷಿಸಿ, ಅವರಿಗೆ ವೈದ್ಯಕೀಯ ನೆರವು, ಆಶ್ರಯ ಮತ್ತು ವಿದ್ಯಾಭ್ಯಾಸದ ವ್ಯವಸ್ಥೆ ಕಲ್ಪಿಸಿರುವುದು ಇವರ ಮಾನವೀಯತೆಯ ಮಾದರಿಯಾಗಿದೆ.



ಕನ್ನಡಪ್ರಭ ಮತ್ತು ಸುವರ್ಣ ನ್ಯೂಸ್ ವತಿಯಿಂದ ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಸಮಾರಂಭದಲ್ಲಿ 'ಸುವರ್ಣ ಕನ್ನಡಿಗ' ಪ್ರಶಸ್ತಿ ಪ್ರದಾನ ಮಾಡಲಾಯಿತು.

> **ಗೌರವಗಳು :**
> **ಇವರ ಸಾಹಿತ್ಯಿಕ, ಶೈಕ್ಷಣಿಕ ಹಾಗೂ ಸಮಾಜಮುಖಿ ಸೇವೆಗಳನ್ನು ಗುರುತಿಸಿ 2020ರಲ್ಲಿ ರೋಟರಿ ಅನ್‌ಸಂಗ್ ಹೀರೋ ಪ್ರಶಸ್ತಿ ಹಾಗೂ 2025ರಲ್ಲಿ ಪುತ್ತೂರು ತಾಲೂಕು ಗಣರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಇತ್ತೀಚೆಗೆ ಕನ್ನಡಪ್ರಭ ಏಷಿಯಾನೆಟ್ ಸುವರ್ಣನ್ಯೂಸ್‌ನ ಸುವರ್ಣ ಕನ್ನಡಿಗ' ಪ್ರಶಸ್ತಿಗೆ ಭಾಜನರಾಗಿದ್ದು, ಇವರ ಸಮಾಜಸೇವೆಗೆ ದೊರೆತ ಮುಕುಟವಾಗಿದೆ.**

ತಮ್ಮ ಒಡಹುಟ್ಟಿದ ಡೌನ್ ಸಿಂಡ್ರೋಮ್ ಸಹೋದರ ಸುರೇಶ್ ನಾಯಕ್ ಅವರನ್ನು ಸಮಾಜದ ಮುಖ್ಯ ವಾಹಿನಿಗೆ ತರುವಲ್ಲಿ ಹಾಗೂ ಅವರಿಗೆ ಜಾದೂ ಪ್ರರ್ಶನ ಕಲಿಸಿ ಅವರ ಪ್ರತಿಭೆಯನ್ನು ಪ್ರಪಂಚಕ್ಕೆ ತೋರಿಸಿಕೊಟ್ಟಿದ್ದಾರೆ. ಅವರು ದೇಶದಾದ್ಯಂತ ಇದುವರೆಗೆ 500ಕ್ಕೂ ಅಧಿಕ ಉಚಿತ ಪ್ರದರ್ಶನಗಳ ಮೂಲಕ ಬುದ್ಧಿಮಾಂದ್ಯತಾ ಜನಜಾಗೃತಿಯನ್ನು ಮೂಡಿಸಿದ್ದಾರೆ. ಉಡುಪಿಯ ಡೌನ್ ಸಿಂಡ್ರೋಮ್ ಈಜುಗಾರ್ತಿ ಅರ್ಚನಾ ಜೈ ವಿಠ್ಠಲ್, ಮೈಸೂರಿನ ದಿವ್ಯಾಂಗ ಕೀ ಬೋರ್ಡ್ ಕಲಾವಿದ ಶ್ರೀ ಗಣೇಶ್ ಭಟ್ ಹಾಗೂ ಡೌನ್ ಸಿಂಡ್ರೋಮ್ ಜಾದೂಗಾರ ಸುರೇಶ ನಾಯಕ್ ಇವರಿಗೆ ವಿಶ್ವ ಅಂಗವಿಕಲ ದಿನಾಚರಣೆಯ ರಾಷ್ಟ್ರಪತಿಗಳ ರಾಷ್ಟ್ರ ಪ್ರಶಸ್ತಿ ದೊರಕುವಲ್ಲಿ ಮಹತ್ತರ ಪಾತ್ರ ವಹಿಸಿದ್ದಾರೆ.

ಪ್ರಸ್ತುತ ಅವರು ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲೂಕಿನಲ್ಲಿ ಶ್ರೀರಾಮ್ ಶೇರ್ಸ್ ಅಂಡ್ ಫೈನಾನ್ಷಿಯಲ್ ಕನ್ಸಲ್ಟೆಂಟ್ ಎಂಬ ಸಂಸ್ಥೆಯ ಆಡಳಿತ ನಿರ್ದೇಶಕರಾಗಿದ್ದು, ಈ ಸಂಸ್ಥೆಯ ಮೂಲಕ ಶೇರು ಉದ್ಯಮವನ್ನು ನಡೆಸುತ್ತಿದ್ದಾರೆ. ಪತ್ನಿ ರೂಪಶ್ರೀ ನಾಯಕ್, ಪುತ್ರ ಸಾತ್ವಿಕ್ ನಾಯಕ್ ಹಾಗೂ ಸಹೋದರ ಸುರೇಶ್ ನಾಯಕ್ ಹಾಗೂ ಪೋಷಕರೊಂದಿಗೆ ಪುತ್ತೂರಿನಲ್ಲಿ ವಾಸವಾಗಿದ್ದಾರೆ (ದೂರವಾಣಿ: 9844401295).

ಕನ್ನಡಪ್ರಭ
ಶುಕ್ರವಾರ 8.05.2026

ಗರಿಷ್ಠ 33°C | ಕನಿಷ್ಠ 23°C

ಸುದ್ದಿ ಸಿಂಚನ

ಕುರುಬಾರಹಳ್ಳಿ ವ್ಯಕ್ತಿ ನಾಪತ್ತೆ



ಮೈಸೂರು: ನಗರದ ಕುರುಬಾರಹಳ್ಳಿ ನಿವಾಸಿ ಲೇ. ಮಾಕಯ್ಯ ಎಂಬವರ ಪುತ್ರ ಚಂದ್ರ (36) ಕಳೆದ ಏ.23 ರಿಂದ ನಾಪತ್ತೆಯಾಗಿದ್ದಾರೆ. ಈ ಸಂಬಂಧ ಅವರ ಸಹೋದರ ಸುರೇಶ್ ಪೊಲೀಸರಿಗೆ ದೂರು ನೀಡಿದ್ದಾರೆ. ಚಹರೆ- 6 ಅಡಿ ಎತ್ತರ, ಬಿಳಿ ಮೈಬಣ್ಣ, ಕೋಲು ಮುಖ, ಸದೃಢ ಮೈಕಟ್ಟು, ಕಪ್ಪು ತಲೆ ಕೂದಲು, ಗಡ್ಡ ಮೀಸೆ ಬಿಟ್ಟಿದ್ದಾರೆ. ಕನ್ನಡ ಮಾತನಾಡುತ್ತಾರೆ. ಕಾಣೆಯಾದ ದಿನ ಸಿಮೆಂಟ್ ಕಲರ್‌ಟೋಪಿ, ಲೈಟ್ ಬ್ಲೂ ಕಲರ್‌ಜೀನ್ಸ್ ಪ್ಯಾಂಟ್, ಗ್ರೇ ಕಲರ್‌ಜರ್ಕಿನ್ ಧರಿಸಿದ್ದರು. ಇವರ ಬಗ್ಗೆ ಮಾಹಿತಿ ಸಿಕ್ಕಲ್ಲಿ ದೂ. 0821- 2418308 ಸಂಪರ್ಕಿಸಲು ನಜರ್‌ಬಾದ್ ಠಾಣೆಯ ಎಎಸ್‌ಐ ಕೆ.ಆರ್. ಕುಮಾರಸ್ವಾಮಿ ಕೋರಿದ್ದಾರೆ.

ನಾಳೆ ಕುವೆಂಪು ಶೈಕ್ಷಣಿಕ ಚಿಂತನೆಗಳು ಕುರಿತು ವಿಚಾರ ಗೋಷ್ಠಿ

ಮೈಸೂರು: ಕೇಂದ್ರ ಕನ್ನಡ ಸಾಹಿತ್ಯ ವೇದಿಕೆಯ ಮೈಸೂರು ಜಿಲ್ಲಾ ಘಟಕದ ವತಿಯಿಂದ ಛಾಯಾದೇವಿ ಶಿಕ್ಷಣ ಮಹಾವಿದ್ಯಾಲಯದ ಸಹಯೋಗದೊಂದಿಗೆ ಮೇ 9ರ ಬೆಳಗ್ಗೆ 10.30ಕ್ಕೆ ರಾಜೇಂದ್ರನಗರದದಲ್ಲಿರುವ ಛಾಯಾದೇವಿ ರಂಗಮಂಟಪದಲ್ಲಿ ಕುವೆಂಪು ಶೈಕ್ಷಣಿಕ ಚಿಂತನೆಗಳು ಕುರಿತು ವಿಚಾರ ಗೋಷ್ಠಿ ನಡೆಯಲಿದೆ. ಈ ಕಾರ್ಯಕ್ರಮವನ್ನು ಪತ್ರಕರ್ತ ಕೆ. ನರಸಿಂಹ ಮೂರ್ತಿ ಉದ್ಘಾಟಿಸುವರು. ಕೇಂದ್ರ ಕನ್ನಡ ಸಾಹಿತ್ಯ ವೇದಿಕೆಯ ಸಂಸ್ಥಾಪಕ ರಾಜ್ಯಾಧ್ಯಕ್ಷ ಕೊಟ್ರೇಶ್ ಎಸ್. ಉಪ್ಪಾರ್‌ಅಧ್ಯಕ್ಷತೆ ವಹಿಸುವರು. ರಾಜ್ಯ ಉಪಾಧ್ಯಕ್ಷ ಟಿ. ಸತೀಶ್ ಜವರೇಗೌಡ ಆಶಯ ಭಾಷಣ ಮಾಡು ವರು. ಕುವೆಂಪು ಅವರ ಶೈಕ್ಷಣಿಕ ಚಿಂತನೆಗಳು ಕುರಿತು ನಂಜನಗೂಡು ತಾಲೂಕು ದೇವನೂರು ಸರ್ಕಾರಿ ಪಿಯು ಕಾಲೇಜಿನ ಕನ್ನಡ ಉಪನ್ಯಾಸಕ ಡಾ. ಉಮೇಶ್ ಬೇವಿನಹಳ್ಳಿ ವಿಚಾರ ಮಂಡಿಸುವರು. ಛಾಯಾದೇವಿ ಶಿಕ್ಷಣ ಮಹಾವಿದ್ಯಾಲಯದ ಪ್ರಾಂಶುಪಾಲ ಸಿ. ಅಂತೋಣಿ ಪೌಲ್ ರಾಜ್ ಉಪಸ್ಥಿತರಿರುವರು ಎಂದು ಕೇಂದ್ರ ಕನ್ನಡ ಸಾಹಿತ್ಯ ವೇದಿಕೆಯ ಜಿಲ್ಲಾಧ್ಯಕ್ಷ ಬಸಪ್ಪ ಸಿ. ಸಾಲುಂಡಿ ತಿಳಿಸಿದ್ದಾರೆ.

ನಗರ ಕಾರ್ಯಕ್ರಮ

- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಆರೋಗ್ಯಾಯುಷ್ಯ ಆರೋಗ್ಯ ವರ್ಧಕ ಶಿಬಿರ, ಚರ್ಮ ಆರೈಕೆ, ಮಧುಮೇಹ, ಆರ್ಥರೈಟಿಸ್ ಚಿಕಿತ್ಸಾ ಶಿಬಿರ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9.30 ರಿಂದ ಸಂಜೆ 4.30.
- **ರಾಮಸನ್ಸ್ ಬೊಂಬೆಮನೆ:** ಕ್ರೀಡಾ ಕೌಶಲ್ಯ– ಹಾಸು ಆಟಗಳ ಪ್ರದರ್ಶನ, ಮಾರಾಟ, ನಜರಬಾದ್‌ಮುಖ್ಯ ರಸ್ತೆ, ಬೆಳಗ್ಗೆ 10 ರಿಂದ ಸಂಜೆ 7.
- **ಸುಯೋಗ್ ಆಸ್ಪತ್ರೆ:** ಉಚಿತ ಕೀಲುಮೂಳೆ ತಪಾಸಣೆ, ರಾಮಕೃಷ್ಣನಗರ, ಬೆಳಗ್ಗೆ 10ರಿಂದ ಸಂಜೆ 6.
- **ಸುಯೋಗ್ ಆಸ್ಪತ್ರೆ:** ಡಾ.ಎಸ್.ಪಿ. ಯೋಗಣ್ಣ ಅವರ 72ನೇ ಜನ್ಮದಿನ, ರಾಮಕೃಷ್ಣನಗರ, ಮಧ್ಯಾಹ್ನ 1.
- **ಯುಗಾಸಿಸ್ ಸಾಫ್ಟ್‌ವೇರ್ ಪ್ರೈವೇಟ್ ಲಿ.:** ಸಾಫ್ಟ್ ಲಾಂಚ್, ಮುಖ್ಯ ಅತಿಥಿಗಳು– ಡಿ. ಸುಧನ್ವ. ಸಮೃದ್ಧಿ ಮಂಜುನಾಥ್, ಬಿ. ಮಂಜುನಾಥ್, ಹುಣಸೂರು ರಸ್ತೆ. ಹೋಟೆಲ್ ಲೀ ರುಚಿ, ಸಂಜೆ 6.

ಕಬಿನಿ ಜಲಾಶಯ ನೀರಿನ ಮಟ್ಟ

ಇಂದಿನ ಮಟ್ಟ	2256.42 (6.05)
ಒಳಹರಿವು	175 ಕ್ಯುಸೆಕ್
ಹೊರಹರಿವು	700 ಕ್ಯುಸೆಕ್
ಗರಿಷ್ಠ ಮಟ್ಟ	2284 ಅಡಿ



ಮೈಸೂರಿನ ಸುತ್ತೂರು ಮಠದ ಕಾರ್ಯಕ್ರಮಕ್ಕೆ ಆಗಮಿಸಿದ್ದ ಆರ್.ಎಸ್.ಎಸ್ ಮುಖ್ಯಸ್ಥ ಡಾ. ಮೋಹನ್ ಭಾಗವತ್ ಅವರನ್ನು ಬಿಜೆಪಿ ಮೈಸೂರು ನಗರಾಧ್ಯಕ್ಷ ಎಲ್. ನಾಗೇಂದ್ರ, ಮಾಜಿ ಮೇಯರ್ ಸಂದೇಶ್ ಸ್ವಾಮಿ ಹೂಗುಚ್ಛ ನೀಡಿ ಸ್ವಾಗತಿಸಿದರು.



ಸಂಸದ ಯದುವೀರ್‌ಕೃಷ್ಣದತ್ತ ಚಾಮರಾಜ ಒಡೆಯರ್‌ಅವರು ಮಣಿಪಾಲ್ ಜಂಕ್ಷನ್ ನಲ್ಲಿ ಮರಗಳ ಕಡಿತ/ಸ್ಥಳಾಂತರ ಸಂಬಂಧ ಗುರುವಾರ ಸ್ಥಳ ಪರಿಶೀಲಿಸಿದರು. ಮಾಜಿ ಮೇಯರ್‌ಸಂದೇಶ್ ಸ್ವಾಮಿ, ಡಿಸಿಎಫ್ ಪರಮೇಶ್, ಎನ್‌ಎಚ್‌ಎಐ ಮತ್ತು ಪಾಲಿಕೆ ಅಧಿಕಾರಿಗಳು ಇದ್ದರು.



ಕೇರಳದಲ್ಲಿ ಕಲೆಮನೆ ಕಲಾವಿದರಿಂದ ನೃತ್ಯ

• **ಕನ್ನಡಪ್ರಭ ವಾರ್ತೆ** ಮೈಸೂರು

ಕೇರಳದ ಕಾಸರಗೋಡಿನ ಬೇಕಲ್ ಗೋಕುಲಮ್ ಗೋಶಾಲ ಪರಂಪರ ವಿದ್ಯಾಪೀಠವು ಮೇ 9 ರಂದು ಸಂಜೆ 8.30 ರಿಂದ ರಾತ್ರಿ 10 ನಡೆಸುತ್ತಿರುವ 2026 ರ ವೈಶಾಖ ನಟನಂ ರಾಷ್ಟ್ರೀಯ ನೃತ್ಯ ಉತ್ಸವದಲ್ಲಿ ಡಾ.ಕೆ.ಕುಮಾರ್, ಇವರ ಪುತ್ರಿಯರಾದ ಕಲೆಮನೆ ಸಹೋದರಿ ಕೆ.ಎಂ.ಲೇಖಾ ಮತ್ತು ಕೆ.ಎಂ ನಿಧಿ ಅವರು ಕೃಷ್ಣಾರ್ಪಣಾಮಸ್ತು ನೃತ್ಯ ಕಾರ್ಯಕ್ರಮ ನಡೆಸಿಕೊಡುವರು.

ಪ್ಲಾಸ್ಟಿಕ್ ಬದಲು ಬಟ್ಟೆ ಚೀಲ ಬಳಸಿ

ಗ್ರಾಹಕರು, ವ್ಯಾಪಾರಿಗಳಿಗೆ ಬಟ್ಟೆ ಚೀಲ ವಿತರಿಸಿದ ಎಚ್.ವಿ.ಎಲ್.ಎನ್.ಆಚಾರ್

• **ಕನ್ನಡಪ್ರಭ ವಾರ್ತೆ** ಮೈಸೂರು

ಮರು ಬಳಕೆ ಮಾಡಲು ಸಾಧ್ಯವಿಲ್ಲದ ಪ್ಲಾಸ್ಟಿಕ್ ಪರಿಸರಕ್ಕೆ ಮಾರಕ. ಹೀಗಾಗಿ, ಪ್ಲಾಸ್ಟಿಕ್ ಚೀಲಗಳ ಬದಲು ಬಟ್ಟೆ ಚೀಲಗಳನ್ನು ಬಳಸಲು ಗ್ರಾಹಕರು, ವ್ಯಾಪಾರಿಗಳು ಮುಂದಾಗಬೇಕು ಎಂದು ಕ್ಷೇಮ ಧಾಮ ಟ್ರಸ್ಟ್ ಕಾರ್ಯದರ್ಶಿ ಎಚ್.ವಿ.ಎಲ್.ಎನ್.ಆಚಾರ್ ಕರೆ ನೀಡಿದರು.

ನಗರದಶ್ರೀರಾಂಪುರದಲ್ಲಿಮಾರುಕಟ್ಟೆಯಲ್ಲಿ ಕ್ಷೇಮ ಧಾಮ ಟ್ರಸ್ಟ್ ಹಾಗೂ ಅರಿವು ಸಂಸ್ಥೆ ವತಿಯಿಂದ ತರಕಾರಿ ವ್ಯಾಪಾರಿಗಳಿಗೆ ಹಾಗೂ ಗ್ರಾಹಕರಿಗೆ ಗುರುವಾರ ಬಟ್ಟೆ ಚೀಲಗಳನ್ನು ವಿತರಿಸಿ ಮಾತನಾಡಿದ ಅವರು, ಪ್ಲಾಸ್ಟಿಕ್ ಬಳಕೆಯಿಂದ ಪರಿಸರ, ಮನುಷ್ಯರ ಆರೋಗ್ಯ ಹಾಗೂ ಪ್ರಾಣಿ ಸಂಕುಲದ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುತ್ತದೆ. ಮಣ್ಣಿನ ಫಲವತ್ತತೆಕಡಿಮೆ ಆಗುತ್ತದೆ. ಜಲಮೂಲಗಳು ಕಲುಷಿತಗೊಳ್ಳುತ್ತವೆ. ಪ್ಲಾಸ್ಟಿಕ್ ವಿಷಕಾರಿ ರಾಸಾಯನಿಕ ಬಿಡುಗಡೆ ಮಾಡುವ ಕಾರಣ ಕ್ಯಾನ್ಸರ್ ನಂತಹ ಮಾರಕ ಕಾಯಿಲೆಗಳೂ ಕಾಣಿಸಿಕೊಳ್ಳುತ್ತವೆ ಎಂದರು.



ಪ್ಲಾಸ್ಟಿಕ್ ಬಾಟಲ್ ನಲ್ಲಿನ ನೀರು ಶುದ್ಧವೆಂದು ಭಾವಿಸಿ ಸೇವಿಸುವುದು ಫ್ಯಾಷನ್ ಆಗಿದೆ. ಭವಿಷ್ಯದಲ್ಲಿ ಖಾಲಿ ಬಾಟಲ್ ಗಳನ್ನು ವಿಲೇವಾರಿ ಮಾಡುವುದೇ ಬಹುದೊಡ್ಡ ಸಮಸ್ಯೆ ಆಗಲಿದೆ. ನೀರನ್ನು ರೆಫ್ರಿಜರೇಟರ್ ನಲ್ಲಿಟ್ಟು ತಣ್ಣಗೆ ಮಾಡಿಕೊಂಡು ಕುಡಿಯುವುದು ಆರೋಗ್ಯಕ್ಕೆ ಒಳ್ಳೆಯದಲ್ಲ. ಬದಲಿಗೆ ನೀರನ್ನು ಮಣ್ಣಿನ ಮಡಿಕೆಯಲ್ಲಿ ಹಾಕಿ ಕುಡಿಯುವುದು ಉತ್ತಮ ಎಂದು ಸಲಹೆ ನೀಡಿದರು.

ಕ್ಷೇಮ ಧಾಮ ಟ್ರಸ್ಟ್ ಅಧ್ಯಕ್ಷ ಶೇಖರ್, ಅರಿವು ಸಂಸ್ಥೆಯ ಅಧ್ಯಕ್ಷ ಶ್ರೀಕಾಂತ್ ಕಶ್ಯಪ್, ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಂ ಅಯ್ಯಂಗಾರ್, ಪಾಲಿಕೆಯ ಹಿರಿಯ ಆರೋಗ್ಯ ನಿರೀಕ್ಷಕ ಅಶ್ವಥ್, ನಾಗೇಶ್ ಮೂರ್ತಿ, ದೂರ ರಾಜಣ್ಣ, ಸತೀಶ್, ರಾಮಲಿಂಗ, ಮಂಜುನಾಥ್, ವಿಹ ಎಸ್. ಆಚಾರ್ಯ ಇತರರು ಇದ್ದರು.

ಮಕ್ಕಳು ಪುಸ್ತಕ ದರ್ಶನ ಮಾಡುತ್ತಲೇ ಇರಬೇಕು: ಡಾ.ಎಸ್.ಪಿ.ಯೋಗಣ್ಣ



• **ಕನ್ನಡಪ್ರಭ ವಾರ್ತೆ** ಮೈಸೂರು

ಓದುವ ಪರಿಪಾಠ ಎಲ್ಲರಲ್ಲೂ ಇರಬೇಕು. ಮಕ್ಕಳು ಹೆಚ್ಚಿನದಾಗಿ ಆಗಾಗ್ಗೆ ಪುಸ್ತಕ ದರ್ಶನ ಮಾಡುತ್ತಲೇ ಇರಬೇಕು ಎಂದು ವೈದ್ಯ ಸಾಹಿತಿ ಡಾ.ಎಸ್.ಪಿ. ಯೋಗಣ್ಣ ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಪುಸ್ತಕ ಪ್ರಾಧಿಕಾರದಿಂದ ಮೈಸೂರಿನ ಎಂ.ಬಿ. ಜಯಶಂಕರ್‌ಅವರ ಮನೆಯಲ್ಲಿ ಜರುಗಿದ ಮನೆಗೊಂದು ಗ್ರಂಥಾಲಯ ಅನುಷ್ಠಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮನೆಗೊಂದು, ಮಠಕ್ಕೊಂದು, ಆಸ್ಪತ್ರೆಗೊಂದು, ಕಚೇರಿಗೊಂದು ಹೀಗೆ ಎಲ್ಲೆಲ್ಲಿ ಅವಶ್ಯಕತೆ ಇದೆಯೋ ಅಲ್ಲೆಲ್ಲಾ ಗ್ರಂಥಾಲಯ ಸ್ಥಾಪನೆಯಾಗಬೇಕಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಮಾನಸ ಮಾತನಾಡಿ, ಈ ನಾಡಿನಲ್ಲಿ ಕರ್ಪೂರ, ಗಂದದಕಡ್ಡಿ, ಕುಂಕುಮ, ಅರಿಶಿನ, ಸಾಂಬ್ರಾಣಿ ಮಾರುವವನು ಎಂದೂ ತನಗೆ ನಷ್ಟವಾಯಿತೆಂದು ಸರ್ಕಾರದ ಮೊರೆ ಹೋಗಿಲ್ಲ. ಕಾರಣವಿಷ್ಟೇ, ಜನ ಅದಕ್ಕಾಗಿ ಮುಗಿ ಬೀಳುತ್ತಾರೆ. ಆದರೆ, ಪುಸ್ತಕ ಪ್ರಕಾಶಕರು ಬೀದಿಗೆ ಬಿದ್ದಿದ್ದಾರೆ. ಕೊಂಡು ಓದುವವರಿಲ್ಲ. ಗ್ರಂಥಾಲಯಕ್ಕೆ ಪುಸ್ತಕ ಖರೀದಿಸಿ ಎಂದು ಸರ್ಕಾರದ ಮೊರೆ ಹೋಗಿದ್ದಾರೆ. ಭಕ್ತಿ ಮತ್ತು ಪೂಜೆಗಿಂತ ಓದುವುದು ಶ್ರೇಷ್ಠ ಎಂದರು.

ಕಸಾಪ ಮಾಜಿ ಜಿಲ್ಲಾಧ್ಯಕ್ಷ ಎಂ.ಚಂದ್ರಶೇಖರ್‌ಮಾತನಾಡಿ, ಮೊಬೈಲ್ ಗೀಳು ಈ ಜಗತ್ತಿನಲ್ಲಿ ಚಿಕ್ಕ ಮಕ್ಕಳನ್ನೂ ಬಿಟ್ಟಿಲ್ಲ. ಹೀಗಾಗಿ, ಮಕ್ಕಳಕೈಗೆಪುಸ್ತಕಬರಬೇಕಾದರೆ ಮೊದಲು ನಮ್ಮ ಕೈಯಲ್ಲಿ ಪುಸ್ತಕ ಬರಬೇಕು. ಶಿಕ್ಷಕರು ಹಾಗೂ ಪೋಷಕರು ಮೊದಲು ಮೊಬೈಲ್ ಬಿಟ್ಟು ಪುಸ್ತಕ ಸಂಸ್ಕೃತಿ ಬೆಳೆಸಿಕೊಂಡರೆ ತನ್ನಿಂತಾನೇ ಈ ಗಾಳಿ ಮಕ್ಕಳಿಗೂ ಬೀಸಿ ಧನಾತ್ಮಕ ಬದಲಾವಣೆ ನಮಗೆ ಕಾಣಸಿಗುತ್ತವೆ ಎಂದರು.

ಎಂ.ಬಿ.ಜಯಶಂಕರ್‌ಸ್ವಾಗತಿಸಿದರು. ದೇವರಾಜು ಪಿ. ಚಿಕ್ಕಹಳ್ಳಿ ನಿರೂಪಿಸಿದರು.

ನಾಳೆ ಭಾರತೀಯ ಸಂಗೀತಶಾಸ್ತ್ರ ದಿನಾಚರಣೆ

• **ಕನ್ನಡಪ್ರಭ ವಾರ್ತೆ** ಮೈಸೂರು

ಬ್ರಹ್ಮವಿದ್ಯಾ ಸಂಸ್ಥೆ ವತಿಯಿಂದ ಮೇ 9ರ ಸಂಜೆ 5.30ಕ್ಕೆ ಮೈಸೂರು ವಿವಿ ಮಾನಸ ಗಂಗೋತ್ರಿಯ ಸೆನೆಟ್ ಭವನದಲ್ಲಿಮಹಾಮಹೋಪಾಧ್ಯಾಯ ಡಾ.ರಾ. ಸತ್ಯನಾರಾಯಣರ ಜನ್ಮ ಶತಮಾನೋತ್ಸವ ಶತಮಾನ ರಾಸ ಮತ್ತು ಭಾರತೀಯ ಸಂಗೀತಶಾಸ್ತ್ರ ದಿನಾಚರಣೆಯನ್ನು ಆಯೋಜಿಸಲಾಗಿದೆ ಎಂದು ಸಂಸ್ಥಾಪಕ ಡಾ.ರಾ.ಸ. ನಂದಕುಮಾರ್‌ತಿಳಿಸಿದರು.

ಈ ಕಾರ್ಯಕ್ರಮವನ್ನು ಸಂಸ್ಕೃತ ವಿವಿ ಕುಲಪತಿ ಡಾ. ಅಹಲ್ಯಾ ಶರ್ಮ ಉದ್ಘಾಟಿಸುವರು. ಡಾ. ವಿಜಯ್ ಶಂಕರ್‌ಶುಕ್ಲಾ, ಶ್ರೀಕೃಷ್ಣದೇವರಾಯ, ಸವಿತಾ ಸುಲುಗೋಡು, ಗೋ. ಮಧುಸೂದನ್, ಟಿ.ಎಸ್. ಸುಬ್ರಹ್ಮಣ್ಯ ಅತಿಥಿಯಾಗುವರು. ಡಾ.ರಾ. ವಿಶ್ವೇಶ್ವರನ್ ಅಧ್ಯಕ್ಷತೆ ವಹಿಸುವರು ಎಂದು ಅವರು ಗುರುವಾರ ಸುದ್ದಿಗೋಷ್ಠಿಯಲ್ಲಿ ಹೇಳಿದರು.

ಇದೇ ವೇಳೆ ಶ್ರೀವಿದ್ಯಾಶಾಸ್ತ್ರ ಸೂರಿ ಪ್ರಶಸ್ತಿಯನ್ನು ರಾಜೇಶ್ವರಶಾಸ್ತ್ರಿ ಜೋಶಿ, ಸಂಸ್ಮರಣ ಪ್ರಶಸ್ತಿಯನ್ನು ಡಾ. ವಸುಂಧರ ದೊರೆಸ್ವಾಮಿ, ಆನೂರು ಅನಂತಕೃಷ್ಣ ಶರ್ಮ, ಡಾ. ಗ್ವಿಡೋ ಜಾಂಡರೀಗೋ ಅವರಿಗೆ ಪ್ರದಾನ ಮಾಡಲಾಗುವುದು ಎಂದರು.

ಈ ವೇಳೆ ಗೋಷ್ಠಿ ಗಾಯನ, ಡಿವಿಜಿ ಕೃತಿ ಪ್ರಾರ್ಥನೆ, ಆರೋಗ್ಯ ದಿನಚರಿ, ಡಾ.ರಾ.ಸ. ಸತ್ಯನಾರಾಯಣರು ರಚಿಸಿರುವ, ತಾವು ಸಂಗ್ರಹಿಸಿರುವ ಶ್ರೀವಿದ್ಯೆಯ ಅಪರೂಪದ ರಹಸ್ಯಗಳನ್ನೊಳಗೊಂಡ ತ್ರಯೀ ಚಿತ್ಕಲಾ ಬೃಹದ್ ಗ್ರಂಥ ಸಹಾ ಲೋಕಾರ್ಪಣೆಗೊಳ್ಳಲಿದೆ ಎಂದು ಅವರು ತಿಳಿಸಿದರು. ಶ್ರೀಹರ್ಷ, ಕೌಸ್ತುಭ ಶರ್ಮ, ವಿಜಯ ಸಾರಥಿ ಸೇರಿದಂತೆ ಇತರರು ಇದ್ದರು.

ಆರೋಗ್ಯ ಉಚಿತ ತಪಾಸಣಾ ಶಿಬಿರ

ಮೈಸೂರು: ನಗರದ ಎನ್.ಜೆ.ಎಸ್ ಚಾರಿಟಬಲ್ ಟ್ರಸ್ಟ್ ವಿವಿಧ ಆಸ್ಪತ್ರೆಗಳ ಜತೆಗೂಡಿ ಮೇ 12 ರಂದು ಬೆಳಗ್ಗೆ 9.30 ರಿಂದ ಮಧ್ಯಾಹ್ನ 2 ಗಂಟೆವರೆಗೆ ಉಚಿತವಾಗಿ ಹೃದಯ, ಚರ್ಮ, ಹಲ್ಲು, ವೃದ್ಧಾರೋಗ್ಯ, ಮೂಳೆ ಸಾಂದ್ರತೆ ತಪಾಸಣಾ ಶಿಬಿರವನ್ನು ಮಂಡಿ ಮೊಹಲ್ಲಾದ ಕಂಠಿ ಮಲ್ಲಣ್ಣನವರ ಕಲ್ಯಾಣ ಮಂದಿರದಲ್ಲಿ ಆಯೋಜಿಸಿದೆ. ಹೆಚ್ಚಿನ ಮಾಹಿತಿಗೆ ಎಚ್.ಎಸ್. ಬಸವರಾಜ್ ಮೊ. 94487 53597, ಎಂ.ಎನ್. ಜೈ ಪ್ರಕಾಶ್ ಮೊ. 99161 55453 ಸಂಪರ್ಕಿಸಬಹುದು.

ಸಮನ್ವಯದಿಂದ ಹೊಸ ವೃತ್ತಿ ಬದುಕು ಕಟ್ಟಿಕೊಳ್ಳಲು ಸಾಧ್ಯ: ಡಾ.ರಾಜೇಶ್ವರಿ



• **ಕನ್ನಡಪ್ರಭ ವಾರ್ತೆ** ಮೈಸೂರು

ತಂತ್ರಜ್ಞಾನದೊಂದಿಗೆ ಸಮಕಾಲೀನ ದೃಷ್ಟಿಕೋನ ಸಮನ್ವಯಗೊಳಿಸಿಕೊಂಡರೆ ವಿದ್ಯಾರ್ಥಿಗಳು ಹೊಸ ವೃತ್ತಿ ಬದುಕನ್ನು ಕಟ್ಟಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಕರ್ನಾಟಕ ರಾಜ್ಯ ಮುಕ್ತ ವಿವಿ ಪ್ರಾಧ್ಯಾಪಕಿ ಡಾ.ರಾಜೇಶ್ವರಿ ತಿಳಿಸಿದರು.

ನಗರದ ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜಿನ ಎಂಬಿಎ ವಿಭಾಗ, ಐಕ್ಯೂಎಸಿ ಸಹಯೋಗದಲ್ಲಿ ಏರ್ಪಡಿಸಿದ್ದ ಮಾರ್ಕೆಟಿಂಗ್ ಸ್ಪೆಕ್ಟ್ರಮ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಉತ್ಪನ್ನದ ಕಲ್ಪನೆಯಿಂದ ಗ್ರಾಹಕನ ತೃಪ್ತಿಯವರೆಗೆ ಇರುವ ಎಲ್ಲಾ ಹಂತಗಳನ್ನು ಪೂರ್ಣವಾಗಿ ಪ್ರತಿನಿಧಿಸುವ ಕಾರ್ಯಕ್ರಮ ಇದಾಗಿದ್ದು, ಭವಿಷ್ಯದ ನಿರ್ವಾಹಕರಿಗೆ ಸಮಗ್ರ ವ್ಯವಸ್ಥೆಯ ಅರಿವು ಮೂಡಿಸುವುದು ಅಗತ್ಯ ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಪ್ರೊ. ಶಿವಣ್ಣ ಮಾತನಾಡಿ, ವಿದ್ಯಾರ್ಥಿಗಳು ಮಾರುಕಟ್ಟೆಯ ಪ್ರಚಲಿತ ವಿದ್ಯಮಾನಗಳನ್ನು ತಿಳಿದುಕೊಳ್ಳುವುದರಿಂದ ನಿಮ್ಮ ಕೌಶಲ್ಯ ಇನ್ನಷ್ಟು ವೃದ್ಧಿಗೊಳಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದರು. ವಿಭಾಗದ ಮುಖ್ಯಸ್ಥ ಪ್ರೊ. ರವಿಕುಮಾರ್‌ಮಾತನಾಡಿ, ಈ ಕಾರ್ಯಕ್ರಮವು ಪಠ್ಯಕ್ರಮದ ಹೊರತಾಗಿ ಯೋಚಿಸಲು ಪ್ರೇರೇಪಿಸುವುದರ ಜೊತೆಗೆ ಬೌದ್ಧಿಕ ಬೆಳವಣಿಗೆಗೆ ಪೂರಕವಾಗುತ್ತದೆ ಎಂದರು.

ಪ್ರಥಮ ವರ್ಷದ ಎಂಬಿಎ ವಿದ್ಯಾರ್ಥಿಗಳು ಜಾಗತಿಕ ವಲಯದ ಹಲವು ವಿಷಯಗಳನ್ನು ಪ್ರಸ್ತುತಪಡಿಸಿದರು. ಇದರಲ್ಲಿ ದಿನುಶ್ರೀ, ಕೀರ್ತಿ ಮತ್ತು ಪೃಥ್ವಿ ಗುಂಪುಗಳು ಸ್ಪರ್ಧೆಯಲ್ಲಿ ವಿಜೇತರಾದರು.

ಕಾರ್ಯಕ್ರಮದ ಸಂಯೋಜಕ ಬಸಪ್ಪ ಸಿ.ಸಾಲುಂಡಿ, ವಿದ್ಯಾರ್ಥಿ ಸಂಯೋಜಕರಾದ ಬಿಂದು, ಹರ್ಷಿತಾ, ಡಾ. ಶ್ರುತಿ, ಕುಮಾರ್‌ದೇವ್, ಡಾ. ಸುಗುಣ, ಕಾವೇರಿ ಇದ್ದರು. ಸಂಚನಾ ಪ್ರಾರ್ಥಿಸಿದರು. ಅನುಶ್ರೀ ಸ್ವಾಗತಿಸಿದರು. ಕೀರ್ತಿ ನಿರೂಪಿಸಿದರು. ರುಚಿತಾ ವಂದಿಸಿದರು.

ಚುಚ್ಚು ಮದ್ದಿನಿಂದ ರೋಗಿ ಸಾವು

ಕೆ.ಆರ್.ನಗರದ ಖಾಸಗಿ ಕ್ಲಿನಿಕ್ ವೈದ್ಯನ ವಿರುದ್ಧ ಸಂಬಂಧಿಕರು, ವಿವಿಧ ಸಂಘಟನೆಗಳಿಂದ ಪ್ರತಿಭಟನೆ

• **ಕನ್ನಡಪ್ರಭ ವಾರ್ತೆ** ಕೆ.ಆರ್.ನಗರ

ಪಟ್ಟಣದ ಖಾಸಗಿ ಕ್ಲಿನಿಕ್‌ಗೆ ಚಿಕಿತ್ಸೆ ಪಡೆಯಲು ಬಂದ ವ್ಯಕ್ತಿಯೋರ್ವ ಮೃತಪಟ್ಟಿದ್ದು, ಇದಕ್ಕೆ ವೈದ್ಯರು ನೀಡಿದ ಚುಚ್ಚುಮದ್ದೇ ಕಾರಣ ಎಂದು ಆರೋಪಿಸಿ, ಮೃತರ ಸಂಬಂಧಿಕರು ಮತ್ತು ವಿವಿಧ ಸಂಘಟನೆಗಳ ಪದಾಧಿಕಾರಿಗಳು ಪ್ರತಿಭಟನೆ ನಡೆಸಿದ ಘಟನೆ ಗುರುವಾರ ನಡೆಯಿತು.



ಪಟ್ಟಣದ ಸಿ.ಎಂ. ರಸ್ತೆಯಲ್ಲಿರುವ ರಾಘವೇಂದ್ರ ಕ್ಲಿನಿಕ್ ನಲ್ಲಿ ರಾಮಯ್ಯ ಎಂಬವರು ಮೃತಪಟ್ಟಿದ್ದು, ಇಲ್ಲಿನ ವೈದ್ಯ ಡಾ.ಎಚ್.ಜಿ. ಶಂಕರ್‌ಅವರು ನೀಡಿದ ಚುಚ್ಚುಮದ್ದು ಇದಕ್ಕೆ ಕಾರಣ ಎಂದು ಆರೋಪಿಸಲಾಗಿದೆ.



ಮೃತರು ಪಟ್ಟಣದ ಸಮೀಪವಿರುವ ಕಾಳೇನಹಳ್ಳಿ ಗ್ರಾಮದ ಪೌರಕಾರ್ಮಿಕರ ಕಾಲೋನಿಯ ನಿವಾಸಿಯಾಗಿದ್ದು, ರಾಮಯ್ಯನ ಪತ್ನಿ ಪಾಪಮ್ಮ ಬೆಳಗ್ಗೆ 10 ರಲ್ಲಿ ಕ್ಲಿನಿಕ್ ಗೆ ಬಂದು ನನ್ನ ಪತಿಗೆ ತುಂಬಾ ಹೊಟ್ಟೆನೋವು ಇರುವುದರಿಂದ ಚಿಕಿತ್ಸೆ ನೀಡುವಂತೆ ಕೋರಿದ್ದಾರೆ.

ರಾಮಯ್ಯನಿಗೆ ಮೊದಲೇ ಪಾರ್ಶ್ವವಾಯು ಹೊಡೆದಿದೆ ಎಂದು ಹೇಳಿ ಈ ಹಿಂದೆ ಪಡೆದಿದ್ದ ಚಿಕಿತ್ಸೆಯ ಔಷಧಿ ಚೀಟಿ ಮತ್ತು ಮಾತ್ರೆಗಳನ್ನು ಪರಿಶೀಲಿಸಿ ಚಿಕಿತ್ಸೆ ನೀಡುವಂತೆ ಮನವಿ ಮಾಡಿರುವುದಾಗಿ ಹೇಳಿದರೂ ವೈದ್ಯರು ಯಾವುದನ್ನು ಪರಿಶೀಲಿಸದೆ ಏಕಾಏಕಿ ಚುಚ್ಚು ಮದ್ದು ನೀಡಿದ್ದರಿಂದ ಮೃತಪಟ್ಟಿದ್ದಾರೆಂದು ರಾಮಯ್ಯನ ಸಂಬಂಧಿಕರು ಮತ್ತು ಅವರ ಪುತ್ರ, ಪುತ್ರಿ ಸೇರಿದಂತೆ ಗ್ರಾಮಸ್ಥರು ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಸ್ಥಳಕ್ಕೆ ಆಗಮಿಸಿ ವೈದ್ಯರ ವಿರುದ್ಧ ದೂರು ದಾಖಲಿಸಿಕೊಂಡು ಶಿಕ್ಷೆಗೆ ಗುರಿಪಡಿಸಬೇಕೆಂದು ಒತ್ತಾಯಿಸಿದರು.

ಆದಿಜಾಂಬವ ಸಂಘದ ಅಧ್ಯಕ್ಷ ಎಂ. ಲೋಕೇಶ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಎಂ.ಎಸ್. ಮಹದೇವ್, ಪುರಸಭೆ ಮಾಜಿ ಅಧ್ಯಕ್ಷ ಡಿ. ಕಾಂತರಾಜು, ದಲಿತಮುಖಂಡರಾದ ಸಿ. ಶಂಕರ್, ಸುರೇಶ್, ರಮೇಶ್, ಮುರುಗೇಶ್, ಕುಮಾರ್, ಮಂಜುನಾಥ್, ಸಿದ್ದಯ್ಯ, ವಜ್ರೇಶ್, ನಂಜಯ್ಯ, ನೂರಾರು ಮಂದಿ ಸಂಘಟನೆಯವರು ಕ್ಲಿನಿಕ್ ಮುಂದೆ ಡಾ.ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರ ಇಟ್ಟು ಪ್ರತಿಭಟಿಸಿದರು. ಮೃತ ರಾಮಯ್ಯ ಸಫಾಯಿ ಕರ್ಮಚಾರಿಯಾಗಿದ್ದು ತುಂಬಾ ಕಡು ಬಡವರಾಗಿರುವುದರಿಂದ ಈತನ ಅಂತ್ಯಕ್ರಿಯೆ ನಡೆಸಲು ಇತರರ ಸಹಾಯ ಪಡೆಯಬೇಕಾಗಿದೆ, ಆದ್ದರಿಂದ ಇವರ ಕುಟುಂಬಕ್ಕೆ ಸೂಕ್ತ ಪರಿಹಾರ ಕೊಡಿಸಬೇಕು ಜತೆಗೆ ಚಿಕಿತ್ಸೆ ವೇಳೆ ನಿರ್ಲಕ್ಷ್ಯ ವಹಿಸಿದ ವೈದ್ಯರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಬೇಕೆಂದು ಆಗ್ರಹಿಸಿದರು.

ಮೌಲಾನಾ ಆಜಾದ್ ಪ್ರೌಢಶಾಲೆ ವಿದ್ಯಾರ್ಥಿಗಳಿಗೆ ಅಭಿನಂದನೆ



• **ಕನ್ನಡಪ್ರಭ ವಾರ್ತೆ** ಮೈಸೂರು

ನಗರದ ಟೀಚರ್ಸ್ ಲೇಔಟ್ ನಲ್ಲಿರುವ ಆಜಾದ್ ನ್ಯಾಷನಲ್ ನರ್ಸರಿ, ಪ್ರಾಥಮಿಕ ಶಾಲೆ ಮತ್ತು ಮೌಲಾನಾ ಆಜಾದ್ ಪ್ರೌಢಶಾಲೆಯು (ಆಂಗ್ಲ ಮಾಧ್ಯಮ) ಎಸ್‌ಎಸ್‌ಎಲ್ಸಿ ಪರೀಕ್ಷೆಯಲ್ಲಿ ಶೇ.99 ಫಲಿತಾಂಶ ಪಡೆದಿದೆ. ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಜಿಲ್ಲಾ ಪತ್ರಕರ್ತರ ಭವನದಲ್ಲಿ ಗುರುವಾರ ಅಭಿನಂದಿಸಲಾಯಿತು.

ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣರಾದ ಶಾಲೆಯ ಸಾಯಿ ಭರತ್ (572), ನಿತಿನ್ ನಾರಾಯಣ್ (530) ಹಾಗೂ ಸಿಂಧುಶ್ರೀ (513) ಅವರನ್ನು ಸನ್ಮಾನಿಸಲಾಯಿತು.

ರಾಜ್ಯ ಸಂಗೀತ ವಿವಿ ಹುಬ್ಬಳ್ಳಿಯ ಕಾತ್ಯಾಯಿನಿ ಯಶೋಮತಿ ಮತ್ತು ಹಿರಿಯ ಪತ್ರಕರ್ತ ಟಿ.ಆರ್. ಸತೀಶ್ ಕುಮಾರ್, ಸಂಸ್ಥೆಯ ಅಧ್ಯಕ್ಷ ಜಾಕೀರ್‌ಹುಸೇನ್, ಕಾರ್ಯದರ್ಶಿ ಫಾಹೀನ್ ಹುಸೇನ್, ಮುಖ್ಯೋಪಾಧ್ಯಾಯರಾದ ಸಾದಿಕ್ ಉರ್ ರೆಹನಾ, ಆಡಳಿತಾಧಿಕಾರಿ ಮನ್ಸೂರ್‌ಅಹಮದ್ ಖಾನ್, ಶಿಕ್ಷಕರಾದ ಭವ್ಯ, ಶಿವಮ್ಮ, ತನುಶ್ರೀ, ಸಮಾಜ ಸೇವಕ ಮೈಕ್ ಪ್ರಕಾಶ್ ಇದ್ದರು.

ಸಾಂಸ್ಕೃತಿಕ ಉತ್ಸವ | ಮೈಸೂರಿನ ವಿದ್ಯಾವರ್ಧಕ ಎಂಜಿನಿಯರಿಂಗ್ ಕಾಲೇಜು

10ರಂದು ಕಾಲೇಜು ಓಪನ್ ಡೇ

• **ಕನ್ನಡಪ್ರಭ ವಾರ್ತೆ** ಮೈಸೂರು

ನಗರದ ವಿದ್ಯಾವರ್ಧಕ ಎಂಜಿನಿಯರಿಂಗ್ ಕಾಲೇಜು ವತಿಯಿಂದ ಪಿಯುಸಿ ಪಾಸಾದ ವಿದ್ಯಾರ್ಥಿಗಳಿಗೆ ಮೇ 10ರ ಬೆಳಗ್ಗೆ 10.30ಕ್ಕೆ ಓಪನ್ ಡೇ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಪ್ರಾಂಶುಪಾಲ ಡಾ.ಬಿ. ಸದಾಶಿವೇಗೌಡ ತಿಳಿಸಿದರು.



ಈ ಕಾರ್ಯಕ್ರಮವನ್ನು ಇನ್ಫೋಸಿಸ್ ಸಹ ಉಪಾಧ್ಯಕ್ಷ ಕೆ.ಎಸ್. ಸುಂದರ್‌ಉದ್ಘಾಟಿಸುವರು. ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪಗೌಡ ಅಧ್ಯಕ್ಷತೆ ವಹಿಸುವರು. ಕಾರ್ಯದರ್ಶಿ ಪಿ. ವಿಶ್ವನಾಥ್, ಡಿಸೈನಿಂಗ್ ಎಂಜಿನಿಯರ್‌ವಿ. ರವೀಂದ್ರ, ಸಿಇಟಿ ಎಕ್ಸ್ ಪರ್ಟ್ ಉದಯ್ ಶಂಕರ್‌ಅತಿಥಿಯಾಗುವರು ಎಂದು ಅವರು ಗುರುವಾರ ಸುದ್ದಿಗೋಷ್ಠಿಯಲ್ಲಿ ಹೇಳಿದರು.


ಸುಮಾರು 3 ಲಕ್ಷ ವಿದ್ಯಾರ್ಥಿಗಳು ಸಿಇಟಿ ಬರೆದಿದ್ದಾರೆ. ಆದರೆ, ಯಾವ ಕೋರ್ಸ್ ಆಯ್ಕೆ ಮಾಡಿಕೊಳ್ಳಬೇಕೆಂಬ ಗೊಂದಲದಲ್ಲಿದ್ದಾರೆ. ಇದನ್ನು ಹೋಗಲಾಡಿಸುವ ನಿಟ್ಟಿನಲ್ಲಿ ಈ ಕಾರ್ಯಕ್ರಮ ನಡೆಯಲಿದೆ. ಈ ವೇಳೆ ಸಂವಾದ, ಉದ್ಯಮ ಕ್ಷೇತ್ರದ ಒಳನೋಟ, ತಾಂತ್ರಿಕ ಪ್ರದರ್ಶನ ಇರಲಿವೆ ಎಂದರು.

ಇಂದಿನಿಂದ ವಿದ್ಯುತ್: ಮೇ 8 ರಿಂದ 10 ರವರೆಗೆ ಕಾಲೇಜು ಕ್ಯಾಂಪಸ್ ನಲ್ಲಿ ವಿದ್ಯುತ್ ಶೀರ್ಷಿಕೆಯ ಸಾಂಸ್ಕೃತಿಕ ಉತ್ಸವ, ಕಲಾತ್ಮಕ ಕಾರ್ಯಕ್ರಮಗಳು ಆಯೋಜನೆಗೊಳ್ಳಲಿವೆ. ವಿವಿಧ ಕಾಲೇಜುಗಳು ಮತ್ತು ವಿವಿಗಳ ವಿದ್ಯಾರ್ಥಿಗಳನ್ನು ಒಂದೇ ವೇದಿಕೆಗೆ ತರುವ ಯತ್ನ ಇದಾಗಿದೆ. ಡಾಗ್ ಶೋ, ಆಟೋ ಎಕ್ಸ್ಪೋ, ರಂಗೋಲಿ, ಬ್ಯಾಟಲ್ ಆಫ್ ಬ್ಯಾಂಡ್ಸ್, ಗೋಲ್ಡನ್ ಮೈಕ್, ಮೆಹೆಂದಿ ಸ್ಪರ್ಧೆ, ಟ್ರೆಷರ್‌ಹಂಟ್ ಮೊದಲಾದವುಗಳು ಆಕರ್ಷಣೆಯಾಗಿವೆ. ಬಾಲಿವುಡ್ ನೈಟ್, ಡಿಜೆಗಳು ಸಹ ವಿದ್ಯಾರ್ಥಿಗಳನ್ನು ರಂಜಿಸಲಿವೆ ಎಂದು ಅವರು ವಿವರಿಸಿದರು. ಕಾಲೇಜಿನ ಡಾ. ನವೀನ್ ಪ್ರಕಾಶ್, ಡಾ. ಗೌರಿಶಂಕರ್, ಡಾ. ಮಂಜು ಮೊದಲಾದವರು ಇದ್ದರು.

ಭವನ ಉದ್ಘಾಟನೆ | ಸಮಾನತೆ, ಮಾನವೀಯತೆ ಮಹತ್ವ ಸಾರಿದ ಕನಕದಾಸರು

ಕನಕದಾಸರ ಪ್ರತಿಮೆ ಅನಾವರಣ

• **ಕನ್ನಡಪ್ರಭ ವಾರ್ತೆ** ಟಿ.ನರಸೀಪುರ



ಕನಕದಾಸರು ಸಮಾಜದಲ್ಲಿ ಸಮಾನತೆ ಮತ್ತು ಮಾನವೀಯತೆಯ ಮಹತ್ವವನ್ನು ಸಾರಿದ ಮಹಾನ್ ದಾರ್ಶನಿಕರು, ಕುಲ ಕುಲವೆಂದು ಹೊಡೆದಾಡದಿರಿ ಎಂಬ ಅವರ ಸಂದೇಶ ಇಂದಿಗೂ ಪ್ರಸ್ತುತವಾಗಿದೆ ಎಂದು ಕನಕ ಗುರುಪೀಠ ಕೆ.ಆರ್. ನಗರ ಶಾಖಾ ಮಠದ ಶ್ರೀ ಶಿವಾನಂದ ಪುರಿ ಸ್ವಾಮೀಜಿ ಹೇಳಿದರು.


ತಾಲೂಕಿನ ಕರೋಹಟ್ಟಿ ಗ್ರಾಮದಲ್ಲಿ ನಿರ್ಮಿಸಿರುವ ಕನಕ ಸಮುದಾಯ ಭವನ ಉದ್ಘಾಟನೆ ಹಾಗೂ ಶ್ರೀ ಭಕ್ತ ಕನಕದಾಸರ ಪ್ರತಿಮೆ ಅನಾವರಣ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿ, ಗ್ರಾಮದಲ್ಲಿ ನಡೆದಿರುವ ಕನಕ ಭವನ ಉದ್ಘಾಟನೆ ಹಾಗೂ ಸಂಗೊಳ್ಳಿರಾಯಣ್ಣ ಅವರ ಪ್ರತಿಮೆ ಅನಾವರಣ ಕಾರ್ಯಕ್ರಮವು ಇತಿಹಾಸ ಮತ್ತು ಸಂಸ್ಕೃತಿಯ ಮಹತ್ವವನ್ನು ನೆನಪಿಸುವ ಪವಿತ್ರ ಕ್ಷಣವಾಗಿದೆ. ಇಂತಹ ಕಾರ್ಯಕ್ರಮಗಳು ಕೇವಲ ಆಚರಣೆಯಾಗದೆ, ಮುಂದಿನ ಪೀಳಿಗೆಗೆ ಆದರ್ಶ ಮತ್ತು ಪ್ರೇರಣೆಯ ದೀಪವಾಗಬೇಕು ಎಂದರು.

ಕರೋಹಟ್ಟಿ ಮಠದ ಶ್ರೀ ಬಸವಲಿಂಗ ದೇಶಕೇಂದ್ರ ಸ್ವಾಮೀಜಿ, ಜಿಪಂ ಮಾಜಿ ಸದಸ್ಯ ಎಂ.ಆರ್. ಸೋಮಣ್ಣ, ಕುರುಬರ ಸಂಘದ ತಾಲೂಕು ಅಧ್ಯಕ್ಷ ಮಹೇಶ್, ಕಾರ್ಯದರ್ಶಿ ಬಸವರಾಜು, ಗ್ರಾಪಂ ಮಾಜಿ ಸದಸ್ಯ ವಾಟಾಳ್ ನಾಗೇಶ್, ಕೆ.ಎನ್. ಪ್ರಭುಸ್ವಾಮಿ, ಪುಟ್ಟಸ್ವಾಮಿ, ನಾಗರಾಜು, ಶಿವಮೂರ್ತಿ, ಮಲ್ಲೇಶ್ ಗೌಡ, ಬಸವರಾಜು, ಮಲ್ಲಯ್ಯ, ಭಕ್ತ ಕನಕದಾಸ ಯುವಕ ಸಂಘದ ಪದಾಧಿಕಾರಿಗಳು, ಗ್ರಾಮಸ್ಥರು ಸೇರಿದಂತೆ ಇತರರು ಇದ್ದರು.

ಸುದ್ದಿ ಸಿಂಚನ

ನಾಳೆ ಎನ್.ನಂಜೇಗೌಡ ಸ್ಮರಣಾರ್ಥ ದತ್ತಿ ಉಪನ್ಯಾಸ

ಮೈಸೂರು: ನಗರದ ಶೇಷಾದ್ರಿ ಅಯ್ಯರ್ ರಸ್ತೆಯ ವಿದ್ಯಾವರ್ಧಕ ಕಾನೂನು ಕಾಲೇಜಿನಲ್ಲಿ ಮೇ 9ರ ಬೆಳಗ್ಗೆ 10ಕ್ಕೆ ರೈತ ನಾಯಕ ದಿವಂಗತ ಎನ್.ನಂಜೇಗೌಡ ಸ್ಮರಣಾರ್ಥ ದತ್ತಿ ಉಪನ್ಯಾಸ ನಡೆಯಲಿದೆ. ಬೆಂಗಳೂರಿನ ರಾಷ್ಟ್ರೀಯ ಕಾನೂನು ಶಾಲೆಯ ಐಪಿಆರ್ ಕುರಿತ



ಪೀಠದ ಮಾಜಿ ನಿರ್ದೇಶಕ ಪ್ರೊ.ಟಿ. ರಾಮಕೃಷ್ಣ ಉದ್ಘಾಟಿಸಿ, ಪೇಟೆಂಟ್, ತಾಂತ್ರಿಕ ಗುಣಮಟ್ಟಗಳು ಮತ್ತು ಸ್ಪರ್ಧಾತ್ಮಕ ಕಾನೂನುಃ ವಿಮರ್ಶಾತ್ಮಕ ಅಂತರ್ ಸಂಬಂಧ ಕುರಿತು ಉಪನ್ಯಾಸ ನೀಡುವರು. ಮೈಸೂರು ವಿವಿ ವಿಶ್ರಾಂತ ಕುಲಪತಿ ಪ್ರೊ. ಕೆ.ಎಸ್. ರಂಗಪ್ಪ, ಮುಖ್ಯ ಅತಿಥಿಯಾಗಿರುವರು. ಸಂಸ್ಥೆಯ ಅಧ್ಯಕ್ಷ ಗುಂಡಪ್ಪಗೌಡ ಅಧ್ಯಕ್ಷತೆ ವಹಿಸುವರು. ಗೌರವ ಕಾರ್ಯದರ್ಶಿ ಪಿ. ವಿಶ್ವನಾಥ್, ಖಜಾಂಚಿ ಶ್ರೀಶೈಲ ರಾಮಣ್ಣನವರ್, ಎಸ್. ಶಿವಲಿಂಗಯ್ಯ ಅತಿಥಿಗಳಾಗಿ ರುವರು. ಪ್ರಾಂಶುಪಾಲೆ ಡಾ.ದೀಪು, ಸಂಯೋಜಕ ಎಂ.ಸಿ. ರಾಜೇಶ್, ಎನ್.ನಂಜೇಗೌಡರ ಪುತ್ರರಾದ ಪ್ರೊ.ಎನ್.ಸತೀಶ್ ಗೌಡ, ಡಾ.ಎನ್.ಆನಂದಗೌಡ ಉಪಸ್ಥಿತರಿರುವರು.

ಶ್ರೀರಂಗಪಟ್ಟಣ: ರೈಲಿಗೆ ಸಿಕ್ಕಿ ಅಪರಿಚಿತ ವ್ಯಕ್ತಿ ಸಾವು

ಮೈಸೂರು: ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣ ರೈಲು ನಿಲ್ದಾಣದ ವೇದಿಕೆ ನಂ.2 ರಲ್ಲಿ 70 ವರ್ಷದ ಅಪರಿಚಿತ ವ್ಯಕ್ತಿ ರೈಲಿಗೆ ಸಿಕ್ಕಿ ಮೃತಪಟ್ಟಿರುವ ಘಟನೆ ಸೋಮವಾರ ನಡೆದಿದೆ. ಮೃತದೇಹವನ್ನು ಮಂಡ್ಯ ಜಿಲ್ಲಾ ಸರ್ಕಾರಿ ಆಸ್ಪತ್ರೆಯ ಶವಾಗಾರದಲ್ಲಿ ಇರಿಸಲಾಗಿದೆ. ಮೃತರ ಚಹರೆ- 5 ಅಡಿ ಎತ್ತರ, ಸಾಧಾರಣ ಶರೀರ, ಗೋಧಿ ಮೈಬಣ್ಣ, ಕೋಲು ಮುಖ, ಉದ್ದ ಮೂಗು, ತಲೆ ಮುಂಭಾಗ ಬೋಳಾಗಿದ್ದು, ತಲೆಯಲ್ಲಿ 1 ಇಂಚು ಬಿಳಿ ಕೂದಲಿದೆ. ಗಡ್ಡ ಮೀಸೆ ಬಿಟ್ಟಿದ್ದಾರೆ. ಬಲ ತೊಡೆಯಲ್ಲಿ ಕಪ್ಪು ಮಚ್ಚೆ ಇದೆ. ಬಿಳಿ ಶರ್ಟ್, ಬನಿಯನ್, ಅಂಡರ್‌ವೇರ್‌ಧರಿಸಿದ್ದಾರೆ. ಮೃತರ ವಾರಸುದಾರರು ಇದ್ದಲ್ಲಿ ದೂ. 0821- 2516579, 94808 02122 ಸಂಪರ್ಕಿಸಲು ಮೈಸೂರು ರೈಲ್ವೆ ಠಾಣೆಯ ಪೊಲೀಸರು ಕೋರಿದ್ದಾರೆ.

ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಮೈಸೂರು: ಮೈಸೂರು ಜಿಲ್ಲಾ ಪತ್ರಕರ್ತರ ಸಂಘವು 2025-26ನೇ ಸಾಲಿನ ಎಸ್ಸೆಸ್ಸೆಲ್ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ತೇರ್ಗಡೆಯಾದ ಪತ್ರಕರ್ತರ ಮಕ್ಕಳನ್ನು ಪುರಸ್ಕರಿಸಲು ಅರ್ಜಿ ಆಹ್ವಾನಿಸಿದೆ. ಅರ್ಜಿ ಸಲ್ಲಿಸುವವರು ಪತ್ರಕರ್ತರ ಸಂಘದ ಸದಸ್ಯತ್ವ ಹೊಂದಿರುವ ಪತ್ರಕರ್ತರ ಮಕ್ಕಳಾಗಿರಬೇಕು, ಲಿಖಿತ ಅರ್ಜಿಯೊಂದಿಗೆ ಪತ್ರಕರ್ತರ ಕೆ.ಯು.ಡಬ್ಲ್ಯು.ಜೆ ಗುರುತಿನ ಕಾರ್ಡ್ ನಕಲು, ಆಧಾರ್‌ಕಾರ್ಡ್ ನಕಲು, ವಿದ್ಯಾರ್ಥಿಗಳ ಅಂಕಪಟ್ಟಿ ನಕಲು, ಇತ್ತೀಚಿನ 2 ಭಾವ ಚಿತ್ರ ಹಾಗೂ ಆಧಾರ್‌ಕಾರ್ಡ್ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಮೇ 20 ಕೊನೆಯ ದಿನಾಂಕ. ಅನಂತರದಲ್ಲಿ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಸಂಘದ ಅಧ್ಯಕ್ಷ ಕೆ. ದೀಪಕ್ ಅವರ ಮೊ. 97415 11340, ಪ್ರಧಾನ ಕಾರ್ಯದರ್ಶಿ ಧರ್ಮಾಪುರ ನಾರಾಯಣ್ ಮೊ. 98456 53548 ಸಂಪರ್ಕಿಸಬಹುದು.

ಶುಲ್ಕ ಮರುಪಾವತಿಗೆ ಅರ್ಜಿ ದಿನಾಂಕ ವಿಸ್ತರಣೆ

ಮೈಸೂರು: ಮೆಟ್ರಿಕ್ ನಂತರದ ಕೋರ್ಸ್ ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ರ ಅಲೆಮಾರಿ/ ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ 2025- 26ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ ಶುಲ್ಕ ಮರುಪಾವತಿ ಕಾರ್ಯಕ್ರಮದ ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ಪೋಷಕರು/ ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳ ಮನವಿಯ ಮೇರೆಗೆ ವಿಸ್ತರಿಸಲಾಗಿದೆ. ಅರ್ಹ ವಿದ್ಯಾರ್ಥಿಗಳು ಮೇ 16ರ ಒಳಗೆ https:ssp.postmatric.karnataka.gov.in/ ವೆಬ್ ಸೈಟ್ ನಲ್ಲಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಟಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ https://bcwd.karnataka.gov.in ವೆಬ್ ಸೈಟ್ ವಿಳಾಸಕ್ಕೆ ಭೇಟಿ ನೀಡಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊ. 80507 70004, 1902 ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

ಸೀಳು ತುಟಿ, ಅಂಗುಳ ಸಮಸ್ಯೆಗೆ ಚಿಕಿತ್ಸೆ ಅಗತ್ಯ

ಇಂಡೋಕ್ಲೆಫ್ ಟ್ಯಾನ್ 2026ರ 24ನೇ ವಾರ್ಷಿಕ ಸಮ್ಮೇಳನದಲ್ಲಿ ಸಚಿವ ದಿನೇಶ್ ಗುಂಡೂರಾವ್ ಅಭಿಪ್ರಾಯ

• **ಕನ್ನಡಪ್ರಭ ವಾರ್ತೆ** ಮೈಸೂರು

ಸೀಳು ತುಟಿ ಮತ್ತು ಸೀಳು ಅಂಗುಳ ಸಮಸ್ಯೆ ಹೊಂದಿರುವ ಮಕ್ಕಳಿಗೆ ಸೂಕ್ತ ಸಮಯದಲ್ಲಿ ಸಮಗ್ರವಾದ ಚಿಕಿತ್ಸೆ ನೀಡುವುದು ಅತ್ಯಗತ್ಯವಾಗಿದ್ದು ಈ ನಿಟ್ಟಿನಲ್ಲಿ ಸರ್ಕಾರ ಕಾರ್ಯ ನಿರ್ವಹಿಸುತ್ತಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಭಾರತೀಯ ಕ್ಲೆಫ್ಟ್ ತುಟಿ ಅಂಗುಳ ಮತ್ತು ಕ್ರೇನಿಯೊಫೇಶಿಯಲ್ ಅನೋಮಲಿಗಳ ಸಂಘದಿಂದ ಇಂಡೋಕ್ಲೆಫ್‌ಟ್ಯಾನ್ 2026ರ 24ನೇ ವಾರ್ಷಿಕ ಸಮ್ಮೇಳನವನ್ನು ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆಯ ನೈಮಿಷಂ ಕ್ಯಾಂಪಸ್‌ನ ನಾಲೆಡ್ಜ್ ಪಾರ್ಕ್‌ನಲ್ಲಿ ಉದ್ಘಾಟಿಸಿ ಮಾತನಾಡಿದರು.

ಅರಿವಿನ ಕೊರತೆ ಮತ್ತು ಸಮಯೋಚಿತ ಚಿಕಿತ್ಸೆ ನೀಡದೆ ಇರುವುದರಿಂದ ಸೀಳು ತುಟಿ ಮತ್ತು ಸೀಳು ಅಂಗುಳ ಸಮಸ್ಯೆ ಜನನದಿಂದಲೇ ಬರುವಂತದ್ದಾಗಿದೆ. ಆದರೆ ಸರಿಯಾದ ಸಮಯದಲ್ಲಿ ತಜ್ಞರ ಸಲಹೆ ಮತ್ತು ಸಮಸ್ಯೆಯ ಗುರುತಿಸುವಿಕೆ ಆಗದಿದ್ದರೆ ಮುಂದಿನ ದಿನಗಳಲ್ಲಿ ಮಕ್ಕಳು ಹೆಚ್ಚಿನ ತೊಂದರೆ ಅನುಭವಿಸಬೇಕಾಗುತ್ತದೆ ಎಂದರು.

ಗ್ರಾಮೀಣ ಭಾಗದಲ್ಲಿ ಮತ್ತು ಸಣ್ಣ ಪಟ್ಟಣಗಳಲ್ಲಿ ವಾಸಿಸುವಜನರಲ್ಲಿಈಬಗ್ಗೆಅರಿವುಮೂಡಿಸಬೇಕಿದೆ. ನಮ್ಮ ಆರೋಗ್ಯ ಕಾರ್ಯಕರ್ತರು ಮನೆ ಮನೆಗೆ ಭೇಟಿ ನೀಡಿದಾಗ ಇಂತಹ ಸಮಸ್ಯೆ ಇರುವ ಮಕ್ಕಳನ್ನು ಗುರುತಿಸಿ, ಅವರಿಗೆ ಎಲ್ಲಿ ಮತ್ತು ಹೇಗೆ ಚಿಕಿತ್ಸೆ ಪಡೆಯಬೇಕೆಂದು ಮಾರ್ಗದರ್ಶನ ನೀಡಬೇಕು. ಸಮಗ್ರ ಚಿಕಿತ್ಸಾ ವಿಧಾನ ಈ ಸಮಸ್ಯೆಯ ಚಿಕಿತ್ಸೆಯು ಕೇವಲ ಒಂದು ಬಾರಿಯ ಶಸ್ತ್ರ ಚಿಕಿತ್ಸೆಯಿಂದ ಸಾಧ್ಯವಿಲ್ಲ. ಇದಕ್ಕೆ ಹಲವು ತಜ್ಞರ ಅವಶ್ಯಕತೆ ಇರುತ್ತದೆ.

ನುರಿತ ಶಸ್ತ್ರಚಿಕಿತ್ಸಕರು ಆರ್ಥೋಡಾಂಟಿಸ್ಟ್‌ಗಳು



ಮೈಸೂರಿನ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆಯ ನೈಮಿಷಂ ಕ್ಯಾಂಪಸ್ ನ ನಾಲೆಡ್ಜ್ ಪಾರ್ಕ್ ನಲ್ಲಿ ಇಂಡೋಕ್ಲೆಫ್‌ಟ್ಯಾನ್ 2026 ರ 24ನೇ ವಾರ್ಷಿಕ ಸಮ್ಮೇಳನವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಉದ್ಘಾಟಿಸಿದರು. ರೇಣು ಮೆಹ್ತಾ, ಡಾ.ಎಂ.ಪುಷ್ಪಾವತಿ ಡಾ.ಪ್ರೀತಮ್ ಶೆಟ್ಟಿ ಇದ್ದಾರೆ.

ಸರ್ಜನ್ಗಳು, ವಾಕ್ ಚಿಕಿತ್ಸಕರು ಇವರೆಲ್ಲರೂ ಒಗ್ಗೂಡಿ ಚಿಕಿತ್ಸೆ ನೀಡಿದಾಗ ಮಾತ್ರ ಮಗುವಿನ ಬೆಳವಣಿಗೆ ಸರಿಯಾಗಿ ಆಗಲು ಸಾಧ್ಯ. ಸರ್ಕಾರದ ಸಹಕಾರ ಮತ್ತು ಕಳೆದ 20 ವರ್ಷಗಳಿಂದ ಸ್ಮೈಲ್ ಟ್ರೈನ್ ಸಂಸ್ಥೆಯು ಮಾಡುತ್ತಿರುವ ಸೇವೆಯನ್ನು ಶ್ಲಾಘಿಸಿದರು. ಈವರೆಗೆ ಸಂಸ್ಥೆಯು 7 ಲಕ್ಷಕ್ಕೂ ಹೆಚ್ಚು ಶಸ್ತ್ರಚಿಕಿತ್ಸೆಗಳನ್ನು ಯಶಸ್ವಿಯಾಗಿ ಪೂರೈಸಿರುವುದು ಸಾಮಾನ್ಯ ಸಾಧನೆಯಲ್ಲ ಎಂದರು.

ಬಡ ಜನರಿಗೆ ಚಿಕಿತ್ಸೆ ಪಡೆಯಲು ಬೆಂಗಳೂರಿನಂತಹ ದೊಡ್ಡ ನಗರಗಳಿಗೆ ಬರಲು ಸಮಯ ಪ್ರಯಾಣ ಮತ್ತು ಇತರ ವೆಚ್ಚಗಳ ಸಮಸ್ಯೆ ಇರುತ್ತದೆ. ಇದನ್ನು ಸರಿದೂಗಿಸಲು ಮತ್ತು ಅತ್ಯುತ್ತಮ ಚಿಕಿತ್ಸೆ ನೀಡಲು ಸರ್ಕಾರ ಮತ್ತು ಖಾಸಗಿ ಸಂಸ್ಥೆಗಳು ಒಟ್ಟಾಗಿ ಕೆಲಸ ಮಾಡುತ್ತಿದ್ದು ಮೈಸೂರಿನಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಸಮ್ಮೇಳನದ ಘೋಷವಾಕ್ಯವಾದ ಸಂಪರ್ಕಿಸಿ, ಸಂವಹನ ನಡೆಸಿ, ಮತ್ತು ಸಹಕರಿಸಿ ಎಂಬುದು ಅತ್ಯಂತ ಸೂಕ್ತವಾಗಿದೆ. ಸರ್ಕಾರ ಮತ್ತು ಸ್ವಯಂಸೇವಾ ಸಂಸ್ಥೆಗಳು ಒಟ್ಟಾಗಿ ಕೆಲಸ ಮಾಡಿದರೆ ಮಾತ್ರ ಇಂತಹ ಸಮಸ್ಯೆಗಳನ್ನು ಸಮರ್ಥವಾಗಿ ನಿವಾರಿಸಲು ಸಾಧ್ಯ ಎಂದು ಹೇಳಿದರು.

ಆಧುನಿಕ ತಂತ್ರಜ್ಞಾನದ ಬಳಕೆ ವೈದ್ಯಕೀಯ ಕ್ಷೇತ್ರದಲ್ಲಿ ನಡೆಯುತ್ತಿರುವ ಹೊಸ ಸಂಶೋಧನೆಗಳು ಆಧುನಿಕ ಶಸ್ತ್ರಚಿಕಿತ್ಸಾ ವಿಧಾನಗಳು ಮತ್ತು ಹೊಸ ಸಾಮಗ್ರಿಗಳನ್ನು ಬಳಸಿಕೊಳ್ಳುವ ಮೂಲಕ ಚಿಕಿತ್ಸೆಯ ಗುಣಮಟ್ಟವನ್ನು ಹೆಚ್ಚಿಸಬೇಕು ಎಂದರು.

ದಕ್ಷಿಣ ಏಷ್ಯಾದ ಸ್ಮೈಲ್ ಟ್ರೈನ್ ನ ಪ್ರಾದೇಶಿಕ ನಿರ್ದೇಶಕ ರೇಣು ಮೆಹ್ತಾ ಮಾತನಾಡಿ, ಸೀಳು ತುಟಿ ಮತ್ತು ಸೀಳು ಅಂಗುಳಿನ ಸಮಸ್ಯೆಯೊಂದಿಗೆ ಜನಿಸಿದ ಪ್ರತಿಯೊಂದು ಮಗುವಿನ ಬಗ್ಗೆಸ್ಮೈಲ್ ಟ್ರೈನ್ ಸ್ಥಳೀಯವಾಗಿ ಕಾಳಜಿ ವಹಿಸುತ್ತದೆ ಎಂದರು.

> ಇಂಡೋಕ್ಲೆಫ್‌ಟ್ಯಾನ್ 2026 ಅನ್ನು ಕೇವಲ ವೈಜ್ಞಾನಿಕ ಸಮ್ಮೇಳನವಾಗಿ ನೋಡದೆ ಹೊಸತನವನ್ನು ಅನ್ವೇಷಿಸಲು ಮತ್ತು ಉದಾರವಾಗಿ ಶಿಕ್ಷಣ ನೀಡಲು ಇರುವ ಹಂಚಿಕೆಯ ಜವಾಬ್ದಾರಿ. ಸರ್ಕಾರದ ಬೆಂಬಲದೊಂದಿಗೆ ಭಾರತದ ಕಟ್ಟಕಡೆಯ ಸಮುದಾಯಗಳಿಗೂ ಸಮಗ್ರ ಚಿಕಿತ್ಸೆ ವಿಸ್ತರಿಸುವ ಭರವಸೆ ನೀಡುತ್ತೇವೆ.
> • **ದಿನೇಶ್ ಗುಂಡೂರಾವ್** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ

1999ರಿಂದ ಜಾಗತಿಕವಾಗಿ 20 ಲಕ್ಷಕ್ಕೂ ಹೆಚ್ಚು ಶಸ್ತ್ರಚಿಕಿತ್ಸೆಗಳಿಗೆಸ್ಮೈಲ್ ಟ್ರೈನ್ ಸಂಸ್ಥೆಯು ಬೆಂಬಲ ನೀಡುತ್ತಿದೆ. ಕಳೆದ 26 ವರ್ಷಗಳಲ್ಲಿ ಭಾರತದಲ್ಲಿ 7,50,000ಕ್ಕೂ ಹೆಚ್ಚು ಶಸ್ತ್ರಚಿಕಿತ್ಸೆಗಳನ್ನು ಮಾಡಲಾಗಿದೆ. ಸ್ಮೈಲ್ ಟ್ರೈನ್ ಸ್ಥಳೀಯ ಆಸ್ಪತ್ರೆಗಳು, ವೈದ್ಯರು ಮತ್ತು ಶಸ್ತ್ರಚಿಕಿತ್ಸಕರೊಂದಿಗೆ ಕೆಲಸ ಮಾಡುತ್ತದೆ ಹಾಗೂ ಗುಣಮಟ್ಟದ ಚಿಕಿತ್ಸೆಯನ್ನು ಎಲ್ಲರಿಗೂ ತಲುಪಿಸಲು ಭಾರತದ 13 ರಾಜ್ಯಗಳೊಂದಿಗೆ ಅಧಿಕೃತ ಒಪ್ಪಂದಗಳನ್ನು ಮಾಡಿಕೊಂಡಿದೆ ಎಂದರು.

ತರಬೇತಿ ಮಾರ್ಗದರ್ಶನ ಮತ್ತು ನಿರಂತರ ಶಿಕ್ಷಣದ ಮೂಲಕ ಪರಿಣತಿಯನ್ನು ಕೇವಲ ಕೆಲವು ಕೇಂದ್ರಗಳಿಗೆ ಸೀಮಿತಗೊಳಿಸದೆ, ಸಂಪೂರ್ಣ ಜಾಲಕ್ಕೆ ಹಂಚುವುದು ನಮ್ಮ ಗುರಿ. ಇತ್ತೀಚೆಗೆ ನಡೆದ ಕಾರ್ಯಾಗಾರದಲ್ಲಿ 30 ಯುವ ಶಸ್ತ್ರಚಿಕಿತ್ಸಕರಿಗೆ ಅಲ್ವಿಯೋಲರ್‌ಬೋನ್ ಗ್ರಾಫ್ಟ್ ಶಸ್ತ್ರಚಿಕಿತ್ಸೆಯ ಬಗ್ಗೆ ಪ್ರಾಯೋಗಿಕ ತರಬೇತಿ ನೀಡಲಾಗಿದೆ ಎಂದರು.

ಐ.ಎಸ್.ಸಿ.ಎಲ್.ಪಿ.ಸಿ.ಎ ಕಾರ್ಯದರ್ಶಿ ಡಾ. ಪ್ರೀತಮ್ ಶೆಟ್ಟಿ ಮಾತನಾಡಿ, ತಮ್ಮ ಸಂಘವು ಒಂದು ಉತ್ತಮ ತಂಡವಾಗಿದ್ದು, ಇದರಲ್ಲಿ ಶಸ್ತ್ರಚಿಕಿತ್ಸಕರು, ಸ್ಪೀಚ್ ಪ್ಯಾಥೋಲಜಿಸ್ಟ್‌ಗಳು, ಆರ್ಥೋಡಾಂಟಿಸ್ಟ್‌ಗಳು, ಪೀಡಿಯಾಟ್ರಿಶಿಯನ್ಸ್, ಅರಿವಳಿಕೆ ತಜ್ಞರು ಮತ್ತು ನ್ಯೂರೋ ಸರ್ಜನ್ ಗಳನ್ನು ಹೊಂದಿದೆ.

ಈ ಸಂಘವು 25 ವರ್ಷಗಳ ಹಿಂದೆ 5 ಮಂದಿ ಸಂಸ್ಥಾಪಕ ಸದಸ್ಯರೊಂದಿಗೆ ಪ್ರಾರಂಭವಾಯಿತು. ಇಂದು ಇದು 650 ವೃತ್ತಿಪರರನ್ನು ಹೊಂದಿರುವ ಬಲಿಷ್ಠ ಸಂಘಟನೆಯಾಗಿ ಬೆಳೆದಿದೆ. ಪ್ರತಿ ವರ್ಷ ವಾರ್ಷಿಕ ಸಭೆಗಳನ್ನು ನಡೆಸುವ ಮೂಲಕ ಜ್ಞಾನ ಹಂಚಿಕೊಳ್ಳಲಾಗುತ್ತದೆ ಮತ್ತು ಸೀಳು ತುಟಿ ಹಾಗೂ ಅಂಗುಳಿನ ಸಮಸ್ಯೆಯೊಂದಿಗೆ ಜನಿಸಿದ ಮಕ್ಕಳಿಗೆ ಸಮಗ್ರ ಆರೈಕೆ ನೀಡುವತ್ತ ಕೆಲಸ ಮಾಡಲಾಗುತ್ತದೆ ಎಂದರು.

ಸದಸ್ಯರಿಗಾಗಿ ಫೆಲೋಶಿಪ್ ಮತ್ತು ಅಬ್ಸರ್ವರ್‌ಶಿಪ್ ಕಾರ್ಯಕ್ರಮ ನಡೆಸಲಾಗುತ್ತದೆ. ಅಲ್ಲದೆ ವರ್ಷಕ್ಕೆ ಎರಡು ಬಾರಿ ಪ್ರಕಟವಾಗುವ ಉನ್ನತ ಗುಣಮಟ್ಟದ ಜರ್ನಲ್ ಅನ್ನು ಸಂಘವು ಹೊಂದಿದೆ. 25ನೇ ವರ್ಷದ ಅಂಗವಾಗಿ, ಸುಮಾರು 25 ಲಕ್ಷ ರೂ. ವೆಚ್ಚದಲ್ಲಿ ಸೀಳು ತುಟಿ ಮತ್ತು ಅಂಗುಳಿನ ಚಿಕಿತ್ಸೆಗೆ ಸಂಬಂಧಿಸಿದಂತೆ ಒಂದು ಓಪನ್ ಆಕ್ಸೆಸ್ ಪಠ್ಯಪುಸ್ತಕ ಹೊರತರಲಾಗುತ್ತಿದೆ ಎಂದರು.

ಈ ಪುಸ್ತಕಕ್ಕೆ ಭಾರತದ ಮತ್ತು ವಿದೇಶದ ಪರಿಣಿತರು ಕೊಡುಗೆ ನೀಡುತ್ತಿದ್ದಾರೆ, ಇದನ್ನು ಸ್ಪ್ರಿಂಗರ್‌ಸಂಸ್ಥೆಯು ಪ್ರಕಟಿಸಲಿದ್ದು, ಇದು ಜಾಗತಿಕ ಮಟ್ಟದಲ್ಲಿ ಭಾರತೀಯ ಸಂಘದ ಹೆಸರನ್ನು ಗುರುತಿಸುವಂತೆ ಮಾಡುತ್ತದೆ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಐಎಸ್‌ಸಿಎಲ್‌ಪಿಸಿಎ ಅಧ್ಯಕ್ಷ ಡಾ.ಎಂ.ಪುಷ್ಪಾವತಿ, ಸಿಬ್ಬಂದಿ ಸೇರಿದಂತೆ ಇತರರು ಇದ್ದರು.

56,432 ಹುದ್ದೆಗೆ ಕೂಡಲೇ ಅಧಿಸೂಚನೆ ಹೊರಡಿಸಿ

ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿ ಜಿಲ್ಲಾ ಘಟಕದಿಂದ ಹೆಚ್ಚುವರಿ ಜಿಲ್ಲಾಧಿಕಾರಿ ಆರ್.ಐಶ್ವರ್ಯರಿಗೆ ಮನವಿ

• **ಕನ್ನಡಪ್ರಭ ವಾರ್ತೆ** ಮೈಸೂರು

56432 ಹುದ್ದೆಗಳಿಗೆ ಕೂಡಲೇ ಅಧಿಸೂಚನೆ ಹೊರಡಿಸಿ ಹಾಗೂ ಕೆಪಿಎಸ್ಸಿ ಸ್ವಚ್ಛಗೊಳಿಸಲು ಪಿ.ಸಿ. ಹೋಟಾ ಸಮಿತಿ ವರದಿ ಜಾರಿಗೊಳಿಸಬೇಕು ಎಂದು ಆಗ್ರಹಿಸಿ ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿ ಜಿಲ್ಲಾ ಸಮಿತಿಯವರು ಹೆಚ್ಚುವರಿ ಜಿಲ್ಲಾಧಿಕಾರಿ ಆರ್. ಐಶ್ವರ್ಯ ಅವರಿಗೆ ಗುರುವಾರ ಮನವಿ ಪತ್ರ ಸಲ್ಲಿಸಿದರು.



ಎಲ್ಲಾ ಹೋರಾಟಗಳ ಪ್ರತಿಫಲವಾಗಿ ರಾಜ್ಯ ಸರ್ಕಾರವು ಬೆಳಗಾವಿಯಲ್ಲಿ ನಡೆದ ಚಳಿಗಾಲದ ಅಧಿವೇಶನದಲ್ಲಿ 56432 ಹುದ್ದೆಗಳನ್ನು ಭರ್ತಿ ಮಾಡುವುದಾಗಿ ಘೋಷಿಸಿತ್ತು. ನಂತರವೂ ವಿವಿಧ ಇಲಾಖೆಗಳ ಸಚಿವರು ಅತೀ ಶೀಘ್ರದಲ್ಲಿ ನೇಮಕಾತಿ ಮಾಡುತ್ತೇವೆ ಎಂದು ದಿನಕ್ಕೊಂದು ಹೇಳಿಕೆಗಳನ್ನು ನೀಡುತ್ತಿರುವುದು ಉದ್ಯೋಗಾಕಾಂಕ್ಷಿಗಳಿಗೆ ಭ್ರಮನಿರಸನ ಉಂಟು ಮಾಡಿದೆ. 5 ತಿಂಗಳು ಕಳೆದಿದ್ದರೂ ಇದುವರೆಗೂ ಯಾವುದೇ ನೇಮಕಾತಿಗಳಿಗೆ ಅಧಿಸೂಚನೆ ಹೊರಡಿಸಿಲ್ಲ ಎಂದು ಅವರು ಕಿಡಿಕಾರಿದರು.

ರಾಜ್ಯ ಸರ್ಕಾರ ತೀರ್ಮಾನಿಸಿದಂತೆ 56432 ಹುದ್ದೆಗಳಿಗೆ ಕೂಡಲೇ ನೇಮಕಾತಿ ಅಧಿಸೂಚನೆ ಹೊರಡಿಸಬೇಕು. ಎಲ್ಲಾ ರೀತಿಯ ಪರೀಕ್ಷಾ ಅಕ್ರಮಗಳನ್ನು ತಡೆಗಟ್ಟಲು ಹಾಗೂ ಪಾರದರ್ಶಕ ನೇಮಕಾತಿಗಾಗಿ ಕೆಪಿಎಸ್ಸಿ ಸಂಪೂರ್ಣವಾಗಿ ಸ್ವಚ್ಛಗೊಳಿಸಲು ಪಿ.ಸಿ. ಹೋಟಾ ಸಮಿತಿಯ ವರದಿಯನ್ನು ತಕ್ಷಣವೇ ಜಾರಿಗೊಳಿಸಬೇಕು. ಎಲ್ಲಾ ನೇಮಕಾತಿಗಳ ದುಬಾರಿ ಅರ್ಜಿ ಶುಲ್ಕವನ್ನು ಕೈಬಿಡಬೇಕು ಹಾಗೂ ನೇಮಕಾತಿ ಪರೀಕ್ಷೆ ಸಂದರ್ಭದಲ್ಲಿ ಅಭ್ಯರ್ಥಿಗಳಿಗೆ ಉಚಿತ ಸಾರಿಗೆ ಒದಗಿಸಬೇಕು ಎಂದು ಅವರು ಒತ್ತಾಯಿಸಿದರು.

ರಾಜ್ಯದಲ್ಲಿ ಎಲ್ಲಾ ನೇಮಕಾತಿ ಪ್ರಾಧಿಕಾರಗಳು ಪ್ರತಿ ವರ್ಷ ನೇಮಕಾತಿ ಪ್ರಕ್ರಿಯೆಯ ವಾರ್ಷಿಕ ಕ್ಯಾಲೆಂಡರ್ ಬಿಡುಗಡೆ ಮಾಡಬೇಕು. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಲ್ಲಿ ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡಬೇಕು.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಸರ್ಕಾರಿ ಉದ್ಯೋಗಗಳ ಮೇಲಿನ ಅನುದಾನ ಕಡಿಮೆ ಮಾಡಲು, ತನ್ಮೂಲಕ ಉದ್ಯೋಗ ಕಡಿತಗೊಳಿಸಲು ಪ್ರಮುಖ ಕಾರಣವಾಗಿರುವ ಎಫ್‌ಆರ್‌ಬಿಎಂ ಕಾಯ್ದೆ- 2003 ಅನ್ನು ರದ್ದುಗೊಳಿಸಬೇಕು ಎಂದು ಅವರು ಆಗ್ರಹಿಸಿದರು.

ಈ ವೇಳೆ ಉದ್ಯೋಗ ಆಕಾಂಕ್ಷಿಗಳ ಹೋರಾಟದ ಸಮಿತಿ ಜಿಲ್ಲಾ ಸಂಚಾಲಕಿ ಎಸ್.ವಿ.ನೀತುಶ್ರೀ, ಸದಸ್ಯರಾದ ಎಸ್. ಸುಮಾ, ರಣಜಿತ್ ಧೂಪತ್, ಪೂರ್ಣಿಮಾ ಇದ್ದರು.


ಒಂದು ಬ್ಯಾಂಕ್ ಸ್ಪೆಷಲ್ ಊಟ: ನಕ್ಕು ನಲಿಸುವ ಹಾಸ್ಯ ಪ್ರಸಂಗಗಳು!

ಸಿಂಡಿಕೇಟ್ ಬ್ಯಾಂಕ್ ನಿವೃತ್ತ ಅಧಿಕಾರಿ ಅನಂತ ಎನ್. ತಾಮ್ಹನ್ಕರ್ ವೃತ್ತಿ ಅನುಭವಗಳು ಒಂದು ಕೃತಿಯ ಮೂಲಕಗಳ ಹೊರಕ್ಕೆ

• **ಕನ್ನಡಪ್ರಭ ವಾರ್ತೆ** ಮೈಸೂರು

ಸಿಂಡಿಕೇಟ್ ಬ್ಯಾಂಕ್‌ನ ನಿವೃತ್ತ ಅಧಿಕಾರಿ ಅನಂತ ಎಮ್.ತಾಮ್ಹನ್ಕರ್ ಅವರು ತಮ್ಮ ವೃತ್ತಿ ಜೀವನದಲ್ಲಿ ಕಂಡ ಹಾಸ್ಯ ಪ್ರಸಂಗಗಳನ್ನು 'ಒಂದು ಬ್ಯಾಂಕ್ ಸ್ಪೆಷಲ್ ಊಟ' ಕೃತಿಯ ಮೂಲಕ ಕಟ್ಟಿಕೊಟ್ಟಿದ್ದಾರೆ. ಅವರ ಮೂವತ್ತೇಳು ಕಾಲು ವರ್ಷ ಬ್ಯಾಂಕ್ ಸೇವೆಯಲ್ಲಿ ಇಪ್ಪತ್ತೇಳು ವರ್ಷಗಳಷ್ಟು ಸುದೀರ್ಘ ಕಾಲ ಉತ್ತರ ಕರ್ನಾಟಕದಲ್ಲಿಯೇ ಸೇವೆ ಸಲ್ಲಿಸಿದ್ದಾರೆ.

ಗ್ರಾಮೀಣ ಪ್ರದೇಶಗಳಲ್ಲಿ ಬ್ಯಾಂಕ್ ಸೇವೆಯಲ್ಲಿ ಇದ್ದಾಗ ಅನುಭವಿಸಿದ ರಸನಿಮಿಷಗಳು, ಹಾಸ್ಯ ಪ್ರಸಂಗಗಳು, ಪೇಚಿನ ಸನ್ನಿವೇಶಗಳನ್ನು ಅವರಿಲ್ಲಿ ದಾಖಲಿಸಿದ್ದಾರೆ. ಬಾಲ್ಯದ ಕೆಲವು ವಿಶೇಷ ನೆನಪುಗಳು ಇವೆ. ಉತ್ತರ ಕರ್ನಾಟಕದಲ್ಲಿ ಖಾನಾವಳಿಗಳೇ ಹೆಚ್ಚು. ಸ್ವಲ್ಪ ಖಾರ ಹೆಚ್ಚು. ದಕ್ಷಿಣ ಕನ್ನಡಕ್ಕೆ ಸೇರಿದ ತಾಮ್ಹನ್ಕರ್‌ಗೆ ಅದು ಹೊಂದಾಣಿಕೆ ಆಗುತ್ತಿರಲಿಲ್ಲ. ಮೊದಲ ದಿನದ ಖಾರ ಅನುಭವದಿಂದ ಹೋಟೆಲ್‌ನವರ ಬಳಿ ಮನವಿ ಮಾಡಿಕೊಂಡು ಹೀಗಾಗಿ ಎರಡು ಕಪ್ ಅನ್ನ, ಎರಡು ಕಪ್ ಮೊಸರು, ಸ್ವಲ್ಪ ಉಪ್ಪು ಹಾಗೂ ಉಪ್ಪಿನಕಾಯಿ ಮಾತ್ರ ತೆಗೆದುಕೊಳ್ಳುತ್ತಿದ್ದರು. ಮುಂದೆ ಇದೇ ಬ್ಯಾಂಕ್ ಸ್ಪೆಷಲ್ ಊಟ ಎಂದು ಆ ಹೋಟೆಲ್‌ನಲ್ಲಿ ಫೇಮಸ್ ಆಯ್ತು. ಅದೇ ಶೀರ್ಷಿಕೆಯನ್ನು ಈ ಹಾಸ್ಯ ಸಂಕಲನಕ್ಕೆ ಇಟ್ಟಿದ್ದಾರೆ.



ಇಲ್ಲಿ ಒಟ್ಟು 72 ಪ್ರಸಂಗಗಳಿವೆ. ಒಂದಕ್ಕಿಂತ ಒಂದು ಚೆನ್ನಾಗಿವೆ. ಓದಿದಾಗ ಮುಖದಲ್ಲಿ ನಗೆ ಮೂಡಿಸುತ್ತವೆ.

ಈ ಕೃತಿಯನ್ನು ಅನನ್ಯ ಪ್ರಕಾಶನ ಪ್ರಕಟಿಸಿದ್ದು, ಸುಬ್ರಹ್ಮಣ್ಯ ಬರ್ವೆ ಮುನ್ನುಡಿ, ತ್ರಿವಿಕ್ರಮ ಹೆಬ್ಬಾರ್ ಬೆನ್ನುಡಿ, ವ್ಯಂಗ್ಯ ಚಿತ್ರಕಾರ ಎನ್.ಆರ್. ಬೊಮ್ನಳ್ಳಿ ಅವರು ಸನ್ನಿವೇಶಕ್ಕೆ ತಕ್ಕ ಚಿತ್ರಗಳನ್ನು ಬರೆದಿದ್ದಾರೆ. ಆಸಕ್ತರು ಸಂಸ್ಕೃತಿ ಸುಬ್ರಹ್ಮಣ್ಯ, ಮೊ. 94480 37762 ಸಂಪರ್ಕಿಸಬಹುದು.

ಮುಕ್ತಕ ಮಂಜರಿ



ಅನಂತ ಎಮ್. ತಾಮ್ಹನ್ಕರ್ 'ಮುಕ್ತಕ ಮಂಜರಿ' ಎಂಬ ಮುಕ್ತಕಗಳ ಸಂಕಲನವನ್ನು ಸಹ ಹೊರತಂದಿದ್ದಾರೆ. ಇದರಲ್ಲಿ 660ಕ್ಕೂ ಹೆಚ್ಚು ಮುಕ್ತಕಗಳು ಅರ್ಥಸಹಿತ ಇವೆ. ಸಿಂಹ ಪ್ರಾಸ, ಗಜ ಪ್ರಾಸ, ಹಯ ಪ್ರಾಸ, ಶರಭ ಪ್ರಾಸ, ವೃಷಭ ಪ್ರಾಸ, ಅಜ ಪ್ರಾಸಗಳಿವೆ. ಇದನ್ನು ಸಂಸ್ಕೃತಿ ಬುಕ್ ಏಜನ್ಸೀಸ್ ಪ್ರಕಟಿಸಿದೆ. ಕೆ.ಟಿ.ಶ್ರೀಮತಿ ಮುನ್ನುಡಿ, ಮಹೇಶಕುಮಾರ ಹನಕೆರೆ ಬೆನ್ನುಡಿ, ಶೋಭಾ ಭಟ್ಟ, ಪಿ.ಸಿ. ದಾಕ್ಷಾಯಿಣಿ, ಕೃಷ್ಣ ದತ್ತಾತ್ರೇಯ ಪದಕಿ, ಡಿ. ಹೃಷಿಕೇಶ ಹೆಬ್ಬಾರ್ ಆಶಯ ನುಡಿ ಬರೆದಿದ್ದಾರೆ. ಆಸಕ್ತರು ಅನಂತ ಎಮ್. ತಾಮನ್ಕರ್, ಮೊ. 94488 99321, ಸಂಸ್ಕೃತಿ ಬುಕ್ ಏಜೆನ್ಸೀಸ್, ಮೊ. 99459 66979

ನೂತನ ಪತ್ರಿಕಾ ಭವನ ನಿರ್ಮಾಣಕ್ಕೆ ₹3 ಕೋಟಿ ಮಂಜೂರು

ಸಿಎಂ ಸಿದ್ದರಾಮಯ್ಯಗೆ ಎಂಡಿಜೆವಯಿಂದ ಕೃತಜ್ಞತೆ



• **ಕನ್ನಡಪ್ರಭ ವಾರ್ತೆ** ಮೈಸೂರು

ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ನೂತನ ಭವನ ನಿರ್ಮಾಣಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 3 ಕೋಟಿ ರೂ. ಬಿಡುಗಡೆ ಮಾಡಲು ಶಿಫಾರಸು ಮಾಡಿದ್ದು ಮೊದಲ ಕಂತಿನ ಅನುದಾನವನ್ನು ಬಿಡುಗಡೆಗೊಳಿಸಿದ್ದಾರೆ .ಈ ಹಿನ್ನೆಲೆಯಲ್ಲಿ ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ. ದೀಪಕ್, ಉಪಾಧ್ಯಕ್ಷ ರವಿ ಪಾಂಡವಪುರ, ಖಜಾಂಚಿ ಎನ್. ಸುರೇಶ್ ಅವರು ಗುರುವಾರ ಮೈಸೂರಿನ ಸಿಎಂ ನಿವಾಸಕ್ಕೆ ತೆರಳಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕೃತಜ್ಞತೆ ಸಲ್ಲಿಸಿದರು. ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್, ಜಿಲ್ಲಾಧಿಕಾರಿ ಲಕ್ಷ್ಮೀಕಾಂತ ರೆಡ್ಡಿ ಇದ್ದರು.

ಅತೀ ಶೀಘ್ರದಲ್ಲಿ ಭವನ ನಿರ್ಮಾಣದ ಕಾಮಗಾರಿ ಆರಂಭವಾಗಲಿದೆ ಎಂದು ಪ್ರಧಾನ ಕಾರ್ಯದರ್ಶಿ ಧರ್ಮಾಪುರ ನಾರಾಯಣ್ ತಿಳಿಸಿದ್ದಾರೆ.

ಗೌರವ ಡಾಕ್ಟರೇಟ್: ನಿವೃತ್ತ ಡಿಜಿಪಿ ರೇವಣಸಿದ್ದಯ್ಯರಿಗೆ ಅಭಿನಂದನೆ



• **ಕನ್ನಡಪ್ರಭ ವಾರ್ತೆ** ಮೈಸೂರು

ಜೆಎಸ್‌ಎಸ್ ಹಿರಿಯ ಪ್ರಸಾದ ನಿಲಯ ವಿದ್ಯಾರ್ಥಿಗಳ ಗೃಹ ನಿರ್ಮಾಣ ಸಹಕಾರ ಸಂಘ, ಜೆಎಸ್‌ಎಸ್ ಹಿರಿಯವಿದ್ಯಾರ್ಥಿಗಳ ಸಂಘ ಮತ್ತು ಮೈಸೂರು - ಚಾಮರಾಜನಗರ ಜಿಲ್ಲಾ ಗುಬ್ಬಿ ತೋಟದಪ್ಪನವರ ವಿದ್ಯಾರ್ಥಿ ನಿಲಯಗಳ ಸಂಯುಕ್ತ ಆಶ್ರಯದಲ್ಲಿ ನಿವೃತ್ತ ಡಿಜಿಪಿ ಎಲ್. ರೇವಣ್ಣ ಸಿದ್ದಯ್ಯ ಅವರಿಗೆ ಅಭಿನಂದನೆ ಸಲ್ಲಿಸಲಾಯಿತು.

ದಾವಣಗೆರೆ ವಿವಿಯಿಂದ ಗೌರವ ಡಾಕ್ಟರೇಟ್ ಪದವಿಗೆ ಭಾಜನರಾದ ಎಲ್. ರೇವಣಸಿದ್ದಯ್ಯ ಅವರಿಗೆ ವರುಣದ ಶ್ರೀ ಶಿವರಾತ್ರಿ ರಾಜೇಂದ್ರನಗರದ ಶ್ರೀ ಶಿವರಾತ್ರಿ ರಾಜೇಂದ್ರ ಅನುಭವ ಮಂಟಪದಲ್ಲಿ ಸನ್ಮಾನಿಸಲಾಯಿತು.

ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಜೆಎಸ್‌ಎಸ್ ಹಿರಿಯ ವಿದ್ಯಾರ್ಥಿಗಳ ಗೃಹ ನಿರ್ಮಾಣ ಸಹಕಾರ ಸಂಘದ ಅಧ್ಯಕ್ಷ ಎ.ಎಸ್. ಚನ್ನಬಸಪ್ಪ ಅಧ್ಯಕ್ಷತೆವಹಿಸಿದ್ದರು. ಹೈಕೋರ್ಟ್ ಹಿರಿಯ ನ್ಯಾಯವಾದಿ ಚಂದ್ರಮೌಳಿ, ಹಿರಿಯ ಪತ್ರಕರ್ತ ಡಿ.ಪಿ. ಸತೀಶ್, ನಿವೃತ್ತ ಪೊಲೀಸ್ ಉಪ ಅಧೀಕ್ಷಕ ಜೆ.ಬಿ. ರಂಗಸ್ವಾಮಿ, ಪ್ರೊ.ಸುಬ್ಬಪ್ಪ, ವಾಟಾಳ್ ಆನಂದ ಎ.ಎಸ್. ಗುರುಸ್ವಾಮಿ, ರಾಜಶೇಖರಮೂರ್ತಿ ಸೇರಿದಂತೆ ಮೊದಲಾದವರು ಇದ್ದರು.

ರೈಲ್ವೆ ಸಿಗ್ನಲ್ ಕೇಬಲ್ ಕಳವು: ಇಬ್ಬರು ಆರೋಪಿಗಳ ಬಂಧನ

• **ಕನ್ನಡಪ್ರಭ ವಾರ್ತೆ** ಮೈಸೂರು

ರೈಲ್ವೆ ಸಿಗ್ನಲ್ ಕೇಬಲ್ ಕಳವು ಮಾಡಿದ್ದ ಇಬ್ಬರು ಆರೋಪಿಗಳನ್ನು ಬಂಧಿಸಿರುವ ರೈಲ್ವೆ ಸಂರಕ್ಷಣಾ ಪಡೆ (ಆರ್.ಪಿ.ಎಫ್) ಮೈಸೂರು ಘಟಕದ ಸಿಬ್ಬಂದಿ, ಕಳವಾದ ರೈಲ್ವೆ ಆಸ್ತಿಯನ್ನು ವಶಪಡಿಸಿಕೊಂಡಿದ್ದಾರೆ.



ಚಿತ್ರದುರ್ಗ ಜಿಲ್ಲೆಯ ನಿವಾಸಿಗಳಾದ ರಘು (23) ಮತ್ತು ತಿಪ್ಪಣ್ಣ (55) ಎಂಬವರೇ ಬಂಧಿತ ಆರೋಪಿಗಳು. ಖಚಿತ ಮಾಹಿತಿ ಮೇರೆಗೆ ಆರ್.ಪಿ.ಎಫ್ ಸಿಬ್ಬಂದಿ ಅಶೋಕಪುರಂ ಮತ್ತು ಕಡಕೊಳ ರೈಲು ನಿಲ್ದಾಣಗಳ ಮಧ್ಯೆ ನಿಗಾವಹಿಸಿ ಮಂಗಳವಾರ ಕಾರ್ಯಾಚರಣೆ ನಡೆಸಿದರು. ಈ ವೇಳೆ ಅನುಮಾನಾಸ್ಪದವಾಗಿ ಸಂಚರಿಸುತ್ತಿದ್ದ ಇಬ್ಬರನ್ನು ತಡೆದು ವಿಚಾರಣೆಗೆ ಒಳಪಡಿಸಿದ್ದರು.

ಆರೋಪಿಗಳು ಸುಮಾರು ಒಂದು ತಿಂಗಳ ಹಿಂದೆ ರೈಲ್ವೆ ಸಿಗ್ನಲ್ ಕೇಬಲ್ ಸುಮಾರು 15 ಮೀಟರ್‌ಕಳವು ಮಾಡಿರುವುದಾಗಿ ಒಪ್ಪಿಕೊಂಡರು. ಘಟನೆಯ ಸಂದರ್ಭದಲ್ಲಿ ಆರೋಪಿಗಳು ರಾಜ್ಯ ನೀರಿನ ಪೈಪ್ ಲೈನ್ ಕಾಮಗಾರಿಯಲ್ಲಿ ದಿನಗೂಲಿ ಕಾರ್ಮಿಕರಾಗಿ ಕೆಲಸ ಮಾಡುತ್ತಿದ್ದರು ಹಾಗೂ ಗುಂಡಿ ಅಗೆಯುವ ವೇಳೆ ಹೊರಬಿದ್ದ ರೈಲ್ವೆ ಕೇಬಲ್ ಗಳನ್ನು ಗಮನಿಸಿ, ಮುಂಜಾನೆ ಸಮಯದಲ್ಲಿ ಕೇಬಲ್ ಕಳವು ಮಾಡಿ, ಶ್ರೀನಗರ ಲೇಔಟ್ ಪ್ರದೇಶಕ್ಕೆ ಸಾಗಿಸಿ, ತಾಮ್ರವನ್ನು ಪಡೆಯಲು ಅದನ್ನು ಸುಟ್ಟು ಮಾರಾಟ ಮಾಡಿರುವುದಾಗಿ ಆರೋಪಿಗಳು ಒಪ್ಪಿಕೊಂಡಿದ್ದಾರೆ.

ಆರೋಪಿಗಳ ಸ್ವಯಂ ಹೇಳಿಕೆ ಆಧಾರದ ಮೇಲೆ ಸ್ಥಳ ಪರಿಶೀಲಿಸಿದಾಗ ಸುಟ್ಟ ಕೇಬಲ್ ಅವಶೇಷಗಳು ಮತ್ತು ಪ್ಲಾಸ್ಟಿಕ್ ಚೀಲದಲ್ಲಿ ಮರೆಮಾಡಿದ್ದ ಸುಮಾರು 5 ಕೆ.ಜಿ. ತಾಮ್ರ ತಂತಿಯನ್ನು ವಶಪಡಿಸಿಕೊಳ್ಳಲಾಗಿದೆ ಎಂದು ನೈಋತ್ಯ ರೈಲ್ವೆ ಮೈಸೂರು ವಿಭಾಗದ ವಿಭಾಗೀಯ ಹಣಕಾಸು ವ್ಯವಸ್ಥಾಪಕ ಪೃಥ್ವಿ ಎಸ್. ಹುಲ್ಲತ್ತಿ ತಿಳಿಸಿದ್ದಾರೆ.

ಸಾಮಾನ್ಯ ವ್ಯಕ್ತಿಗೆ ಅಸಾಧ್ಯ | ಎಂಎಲ್‌ಸಿ ಎಚ್.ವಿಶ್ವನಾಥ್ ಘೋಷಣೆ | ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸಲು ಕನಿಷ್ಠ 50 ಕೋಟಿ ರು. ಬೇಕು


ರಾಜಕೀಯದಲ್ಲಿ ಸಕ್ರಿಯ, ಚುನಾವಣೆಗೆ ಸ್ಪರ್ಧಿಸಲ್ಲ

• **ಕನ್ನಡಪ್ರಭ ವಾರ್ತೆ** ಮೈಸೂರು

ನಾನು ರಾಜಕೀಯ ಚಟುವಟಿಕೆಯಲ್ಲಿ ಸಕ್ರಿಯವಾಗಿರುತ್ತೇನೆ. ಆದರೆ, ಚುನಾವಣೆಗೆ ಮಾತ್ರ ಸ್ಪರ್ಧಿಸುವುದಿಲ್ಲ ಎಂದು ವಿಧಾನ ಪರಿಷತ್ ಸದಸ್ಯ ಎಚ್.ವಿಶ್ವನಾಥ್ ಘೋಷಿಸಿದರು.

ನಗರದ ಜಲದರ್ಶಿನಿ ಅತಿಥಿಗೃಹದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾನು ಈ ಹಿಂದೆ ಚುನಾವಣೆಗಳಲ್ಲಿ ಸ್ಪರ್ಧಿಸಿದಾಗ ಜನರೇ ಖರ್ಚಿಗೆ ಹಣ ನೀಡಿ ಆಶೀರ್ವದಿಸುತ್ತಿದ್ದರು. ಆದರೆ, ಈಗ ಪರಿಸ್ಥಿತಿ ಬದಲಾಗಿದೆ. ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸಲು ಕನಿಷ್ಠ 50 ಕೋಟಿ ರು. ಬೇಕು. ರಿಯಲ್ ಎಸ್ಟೇಟ್ ವ್ಯವಹಾರದಲ್ಲಿ ತೊಡಗಿದವರು ತಮ್ಮ ಜಮೀನು, ಮನೆ ಮಾರಿ ಸ್ಪರ್ಧಿಸಬಹುದು. ಆದರೆ, ನಮ್ಮಿಂದ ಅದು ಸಾಧ್ಯವಿಲ್ಲ ಎಂದರು.

ನನ್ನ ಬಳಿ ಒಂದು ಮನೆ ಮತ್ತು ಒಂದು ನಿವೇಶನ ಮಾತ್ರ ಇದೆ. ಹೀಗಿರುವಾಗ ಸ್ಪರ್ಧೆ ಹೇಗೆ ಸಾಧ್ಯ?. ಇಂದಿನ ರಾಜಕೀಯ ಪರಿಸ್ಥಿತಿಯಲ್ಲಿ ಚುನಾವಣೆ ಎದುರಿಸುವುದು ಸಾಮಾನ್ಯ ವ್ಯಕ್ತಿಗೆ ಅಸಾಧ್ಯ. ಈ ಹಿನ್ನೆಲೆಯಲ್ಲಿ ಮುಂದಿನ ಯಾವುದೇ ಚುನಾವಣೆಯಲ್ಲಿ ತಾವು ಸ್ಪರ್ಧಿಸುವುದಿಲ್ಲ. ಸದ್ಯದ ಪರಿಸ್ಥಿತಿ ಗಮನಿಸಿದರೆ, ಚುನಾವಣೆಯಲ್ಲಿ ಸ್ಪರ್ಧಿಸಲು ಅಪಾರ ಹಣದ ಅವಶ್ಯಕತೆ ಇದೆ. ಅಷ್ಟೊಂದು ದೊಡ್ಡ ಮೊತ್ತ ಖರ್ಚು ಮಾಡುವ ಶಕ್ತಿ ನನ್ನಲ್ಲಿಲ್ಲ. ಅಲ್ಲದೇ, ನನ್ನ ಮಕ್ಕಳು ಕೂಡ ಯಾವುದೇ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ. ಅವರು ತಮ್ಮ ಶಕ್ತಿ ಅನುಸಾರ ರಾಜಕೀಯದಲ್ಲಿ ಮುಂದುವರಿಯುತ್ತಾರೆ. ನಾನು ರಾಜಕೀಯ ಚಟುವಟಿಕೆಯಲ್ಲಿ ಸಕ್ರಿಯವಾಗಿರುತ್ತೇನೆ. ಆದರೆ, ಚುನಾವಣೆಗೆ ಮಾತ್ರ ಸ್ಪರ್ಧಿಸುವುದಿಲ್ಲ ಎಂದರು.



> ■ ರಿಯಲ್ ಎಸ್ಟೇಟ್ ವ್ಯವಹಾರದಲ್ಲಿ ತೊಡಗಿದವರು ಮನೆ ಮಾರಿ ಸ್ಪರ್ಧಿಸಬಹುದು. ಆದರೆ, ನಮ್ಮಿಂದ ಅದು ಸಾಧ್ಯವಿಲ್ಲ
> ■ ನನ್ನ ಮಕ್ಕಳು ಕೂಡ ಇನ್ನು ಮುಂದೆ ಯಾವುದೇ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ. ಅವರು ತಮ್ಮ ಶಕ್ತಿ ಅನುಸಾರ ರಾಜಕೀಯದಲ್ಲಿ ಮುಂದುವರಿಯುತ್ತಾರೆ

ಹಿರಿಯ ಪೊಲೀಸ್ ಅಧಿಕಾರಿ ರಾಮಚಂದ್ರ ರಾವ್ ಅಮಾನತು ಆದೇಶವನ್ನು ರಾಜ್ಯ ಸರ್ಕಾರ ಹಿಂಪಡೆದಿರುವ ಕ್ರಮಕ್ಕೆ ಸರಿಯಲ್ಲ. ಹಿರಿಯ ಅಧಿಕಾರಿ ರಾಮಚಂದ್ರರಾವ್ ಅವರ ವಿರುದ್ಧ ಗಂಭೀರ ಆರೋಪಗಳು ಕೇಳಿಬಂದ ಹಿನ್ನೆಲೆಯಲ್ಲಿ ಸರ್ಕಾರ ಅವರನ್ನು ಅಮಾನತು ಮಾಡಿತ್ತು. ಇದೀಗ ಏಕಾಏಕಿ ಅವರ ಮೇಲಿನ ಅಮಾನತು ಆದೇಶ ಹಿಂಪಡೆದು ಕರ್ತವ್ಯಕ್ಕೆ ಮರು ನಿಯೋಜಿಸಿರುವುದು ಸರಿಯಲ್ಲ.

ಈ ಹಿಂದೆ ಕೇರಳ ಬಸ್‌ನಲ್ಲಿ ಸಿಕ್ಕಿದ್ದ 2 ಕೋಟಿ ಹಣವನ್ನು ಕೊಂಡೊಯ್ದ ಇನ್ ಸ್ಪೆಕ್ಟರ್ ವಿರುದ್ಧ ಪ್ರಕರಣ ದಾಖಲಿಸಿದ್ದ ರಾಮಚಂದ್ರ ರಾವ್. ಅವರ ಸಾಕು ಮಗಳು ರನ್ಯಾರಾವ್ ಚಿನ್ನ ಸಾಗಣೆ ಪ್ರಕರಣದಲ್ಲಿ ಸಿಕ್ಕಿಬಿದ್ದ ಪರಿಣಾಮ ರಾಮಚಂದ್ರ ರಾವ್ ಅವರನ್ನು ಅಮಾನತು ಮಾಡಲಾಗಿತ್ತು. ಅಲ್ಲದೇ, ಅವರ ವಿರುದ್ಧ ಲೈಂಗಿಕ ದೌರ್ಜನ್ಯದ ಆರೋಪ ಕೂಡ ಕೇಳಿಬಂದಿತ್ತು. ನ್ಯಾಯ ಕೇಳಲು ಬಂದಿದ್ದ ಮಹಿಳೆಯ ಮೇಲೆ ರಾಮಚಂದ್ರ ರಾವ್ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ. ಈ ಬಗ್ಗೆ ಮಾಧ್ಯಮಗಳಲ್ಲಿ ವರದಿಯಾದ ವಿಡಿಯೋ ನನ್ನದಲ್ಲ ಎಂದು ವಾದಿಸಿದ್ದರು.

ಆನಂತರ ವಿಧಿವಿಜ್ಞಾನ ಪ್ರಯೋಗಾಲಯ ನೀಡಿದ ವರದಿಯಲ್ಲಿ ಆ ವಿಡಿಯೋ ರಾಮಚಂದ್ರ ರಾವ್ ಅವರದ್ದೇ ಎಂಬುದು ಸಾಬೀತಾದ ಕಾರಣ ಅವರನ್ನು ಸರ್ಕಾರ ಅಮಾನತು ಮಾಡಿತ್ತು. ಇದೀಗ ಏಕಾಏಕಿ ಅವರ ಮೇಲಿನ ಅಮಾನತು ಆದೇಶ ಹಿಂಪಡೆದು ಮತ್ತೆ ಕರ್ತವ್ಯಕ್ಕೆ ನಿಯೋಜಿಸಿರುವುದು ಸರಿಯಲ್ಲ.

ಈ ಸರ್ಕಾರದಲ್ಲಿ ನ್ಯಾಯಕ್ಕೆ ಬೆಲೆ ಇಲ್ಲದಂತಾಗಿದೆ ಎಂದು ಕಿಡಿಕಾರಿದ ಅವರು, ರಾಜ್ಯದಲ್ಲಿ ಯಾವ ಸೀಮೆಯ ಅಧಿಕಾರ ನಡೆಯುತ್ತಿದೆ ಎಂದು ಪ್ರಶ್ನಿಸಿದರು.

ರುಡ್ ಸೆಟ್‌ನಿಂದ ವಿವಿಧ ಕೌಶಲ್ಯ ತರಬೇತಿಗೆ ಅರ್ಜಿ

ಮೈಸೂರು: ರುಡ್ ಸೆಟ್ ಸಂಸ್ಥೆ ಮೈಸೂರಿನಲ್ಲಿ ಎನ್‌ಆರ್‌ಎಲ್‌ಎಂ ಯೋಜನೆಯಲ್ಲಿ ಗ್ರಾಮೀಣ ಪ್ರದೇಶದ ಯುವಕ, ಯುವತಿಯರಿಗಾಗಿ ಸ್ವಉದ್ಯೋಗ ಮಾಡಲು ವಿವಿಧ ರೀತಿಯ ಕೌಶಲ್ಯ ತರಬೇತಿ ಆಯೋಜಿಸಿದೆ.

ಫೋಟೋಗ್ರಫಿ ಮತ್ತು ವೀಡಿಯೋಗ್ರಫಿ ಮೇ 20 ರಿಂದ ಜೂ.19 (31 ದಿನಗಳು), ಕೋಳಿ ಸಾಕಾಣಿಕೆ ಮೇ 7 ರಿಂದ 16 ರವರೆಗೆ (10 ದಿನಗಳು) ಆಯೋಜಿಸಿದ್ದು, 18 ರಿಂದ 50 ವಯೋಮಿತಿಯನ್ನು ಹೊಂದಿರಬೇಕು. ಕನ್ನಡ ಓದು ಬರಹ ಬಲ್ಲವರಾಗಿರಬೇಕು. ಸ್ವಉದ್ಯೋಗವನ್ನು ಮಾಡಬೇಕೆಂಬ ಆಸಕ್ತಿ ಹೊಂದಿರಬೇಕು. ತರಬೇತಿಯು ಊಟ ಮತ್ತು ವಸತಿ ಸಹಿತವಾಗಿ ಸಂಪೂರ್ಣ ಉಚಿತವಾಗಿರುತ್ತದೆ. ತರಬೇತಿಗೆ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಯನ್ನು ನೇರ ಸಂದರ್ಶನ ಮೂಲಕ ನಡೆಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ದೂ. 0821-2519663, ಮೊ. 98440 13948, 94498 60466, 63610 19245, 97404 30061, 98801 96581, 87468 03006 ಸಂಪರ್ಕಿಸಬಹುದು.

ಕನ್ನಡಪ್ರಭ
ಶುಕ್ರವಾರ 8.05.2026

ಸುದ್ದಿ ಸಿಂಚನ

ಉದ್ಯೋಗಾಧಾರಿತ ಡಿಪ್ಲೊಮಾ ಕೋರ್ಸ್ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮೈಸೂರು: ಸಿಪೆಟ್ ವತಿಯಿಂದ 2026- 27ನೇ ಸಾಲಿನ ಉದ್ಯೋಗಾರಿತ ಮತ್ತು ಉದ್ಯೋಗ ಖಚಿತ ಡಿಪ್ಲೊಮಾ, ಕೋರ್ಸ್ ಗಳ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಡಿಪ್ಲೊಮಾ ಇನ್ ಪ್ಲಾಸ್ಟಿಕ್ಸ್ ಟೆಕ್ನಾಲಜಿ, ಡಿಪ್ಲೊಮಾ ಇನ್ ಪ್ಲಾಸ್ಟಿಕ್ಸ್ ಮೌಲ್ಡ್ ಟೆಕ್ನಾಲಜಿ- 3 ವರ್ಷದ ಕೋರ್ಸ್ ಗಳಿಗೆ ಅರ್ಜಿ ಸಲ್ಲಿಸಬಹುದಾಗಿದ್ದು, ಎಸ್ಎಸ್ಎಲ್ಸಿ, ಪಿಯುಸಿ ಮತ್ತು ಐಟಿಐ ಪರೀಕ್ಷೆಯಲ್ಲಿ ತೇರ್ಗಡೆಯಾದವರು/ ಹಾಜರಾದವರು ಆನ್ ಲೈನ್/ ಆಫ್ ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹಾಗೂ ಪಿಯುಸಿ (ವಿಜ್ಞಾನ), ಐಟಿಐ ತೇರ್ಗಡೆಯಾದವರು ಡಿಪ್ಲೊಮಾ 2ನೇ ವರ್ಷಕ್ಕೆ ಪ್ರವೇಶ ಪಡೆಯಬಹುದಾಗಿದೆ. ಆಸಕ್ತ ವಿದ್ಯಾರ್ಥಿಗಳು ಮೇ 28 ರೊಳಗೆ https://cipet26.onlineregistrationform.org/CIPET/ ಹಾಗೂ www.cipet.gov.in ಆನ್ ಲೈನ್ ರಿಜಿಸ್ಟ್ರೇಷನ್ ಲಿಂಕ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಮೊ. 94802 53024, 97914 31827 ಸಂಪರ್ಕಿಸಬಹುದು ಎಂದು ಸಿಪೆಟ್ ಸಂಸ್ಥೆಯ ಮುಖ್ಯಸ್ಥರು ತಿಳಿಸಿದ್ದಾರೆ.

ಕಲಾವಿದರ ಮಾಸಾಶನ ನವೀಕರಣಕ್ಕೆ ಜೀವಿತಾವಧಿ ಪ್ರಮಾಣಪತ್ರ ಸಲ್ಲಿಸಿ

ಮೈಸೂರು: ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಮಾಸಾಶನ ಪಡೆಯುತ್ತಿರುವ ಜಿಲ್ಲೆಯ ಕಲಾವಿದರು, ಸಾಹಿತಿಗಳು ಹಾಗೂ ವಿಧವಾ ಮಾಸಾಶನ ಪಡೆಯುತ್ತಿರುವವರು 2026- 27ನೇ ಸಾಲಿಗೆ ಜೀವಿತಾವಧಿ ಪ್ರಮಾಣ ಪತ್ರ ಸಲ್ಲಿಸಲು ಸೂಚಿಸಲಾಗಿದೆ. ಮಾಸಾಶನ ಪಡೆಯುತ್ತಿರುವವರು ತಮ್ಮ ಪಿಂಚಣಿ ಪುಸ್ತಕದ ಪಿಪಿಓ ಪ್ರತಿ, ಬ್ಯಾಂಕ್ ಪಾಸ್ ಪುಸ್ತಕ ಪ್ರತಿ ಮೂಲ ದಾಖಲೆಗಳೊಂದಿಗೆ ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕರ್ನಾಟಕ ಕಲಾಮಂದಿರ, ವಿನೋಬಾ ರಸ್ತೆ, ಮೈಸೂರು ಇಲ್ಲಿ ಜೀವಿತಾವಧಿ ಪ್ರಮಾಣ ಪತ್ರದ ಪ್ರತಿಯನ್ನು ಪಡೆದು, ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿ ಮೇ 30ರ ಸಂಜೆ 5.30ರ ಒಳಗೆ ಮರು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ. 0821- 2513225 ಸಂಪರ್ಕಿಸಬಹುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಎಂ.ಡಿ. ಸುದರ್ಶನ್ ತಿಳಿಸಿದ್ದಾರೆ.

ಮೈಮುಲ್‌ಗೆ ಆಡಳಿತಾಧಿಕಾರಿ ನೇಮಕ

ಮೈಸೂರು: ಮೈಸೂರು ಜಿಲ್ಲಾ ಹಾಲು ಉತ್ಪಾದಕರ



ಸಹಕಾರ ಸಂಘಗಳ ಒಕ್ಕೂಟ ನಿಯಮಿತ (ಮೈಮುಲ್) ಆಡಳಿತ ಮಂಡಳಿ ಅವಧಿ ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ ಸರ್ಕಾರದ ಆದೇಶದ ಮೇರೆಗೆ ಒಕ್ಕೂಟದ ಆಡಳಿತಾಧಿಕಾರಿಯಾಗಿ ಸಹಕಾರ ಸಂಘಗಳ ಜಂಟಿ ನಿಬಂಧಕರಾದ ಸಿ. ಪ್ರಸಾದ್ ರೆಡ್ಡಿ ಅವರು ಅಧಿಕಾರ ವಹಿಸಿಕೊಂಡಿದ್ದಾರೆ.

ನಗರ ಪುನರ್ವಸತಿ ಕಾರ್ಯಕರ್ತರ ನೇಮಕಾತಿಗಾಗಿ ಅರ್ಜಿ

• **ಕನ್ನಡಪ್ರಭ ವಾರ್ತೆ** ಮೈಸೂರು

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಗ್ರಾಮೀಣ ಪುನರ್ವಸತಿ ಯೋಜನೆಯಡಿ ನಗರ ಪುನರ್ವಸತಿ ಕಾರ್ಯಕರ್ತರನ್ನು ಗೌರವಧನದ ಆಧಾರದ ಮೇಲೆ ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ವಲಯ ಕಚೇರಿ-1 ಮತ್ತು ಕಚೇರಿ-7 ರಲ್ಲಿ ಖಾಲಿಯಿರುವ ನಗರ ಪುನರ್ವಸತಿ ಕಾರ್ಯಕರ್ತರ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಎಸ್ಎಸ್ಎಲ್ಸಿ ಉತ್ತೀರ್ಣರಾಗಿರಬೇಕು (ಅಂಕಪಟ್ಟಿ ಕಡ್ಡಾಯ), ವಯೋಮಿತಿ 18 ರಿಂದ 45 ವರ್ಷದ ಒಳಗಿರಬೇಕು. ಸದರಿ ಹುದ್ದೆಯು ಗೌರವಧನ ಆಧಾರಿತ ಹುದ್ದೆಯಾಗಿದ್ದು, ಕಾಯಂ ಹುದ್ದೆಯಾಗಿರುವುದಿಲ್ಲ. ಆಸಕ್ತ ಅರ್ಹ ವಿಕಲಚೇತನರು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ಪುಲಿಕೇಶಿ ರಸ್ತೆ ತಿಲಕ್ ನಗರ, ಮೈಸೂರು ಇಲ್ಲಿ ಮೇ 22 ರವರೆಗೆ ನಿಗದಿತ ಅರ್ಜಿ ನಮೂನೆಯನ್ನು ಪಡೆದು, ಭರ್ತಿ ಮಾಡಿ ಅಗತ್ಯ ದಾಖಲಾತಿಗಳೊಂದಿಗೆ ಮೇ 25ರ ಸಂಜೆ 5 ಗಂಟೆಯೊಳಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ. 0821- 2490333 ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

ಜಿಆರ್‌ಎಸ್ ಫ್ಯಾಂಟಸಿ ಪಾರ್ಕ್‌ನಲ್ಲಿ ₹5 ಕೋಟಿ ರು. ವೆಚ್ಚದಲ್ಲಿ ರೈಡ್‌ಗಳ ನಿರ್ಮಾಣ

ಫ್ಯಾಮಿಲಿ ಪೂಲ್, 5 ಹೊಸ ರೈಡ್‌ಗಳ ಉದ್ಘಾಟನೆ

ಮೈಸೂರಿನಲ್ಲಿ ಮೂರು ತಲೆಮಾರುಗಳ ಕುಟುಂಬ ಸದಸ್ಯರು ಒಂದೇ ಸ್ಥಳದಲ್ಲಿ ಮನರಂಜನೆ ಅನುಭವಿಸುವಂತೆ ವಿಸ್ತರಣೆ

• **ಕನ್ನಡಪ್ರಭ ವಾರ್ತೆ** ಮೈಸೂರು

ಜಿಆರ್‌ಎಸ್ ಫ್ಯಾಂಟಸಿ ಪಾರ್ಕ್ 5 ಕೋಟಿ ರು. ವೆಚ್ಚದಲ್ಲಿ ನಿರ್ಮಿಸಿರುವ 5 ಸಾವಿರ ಚದರ ಅಡಿ ವಿಸ್ತೀರ್ಣದ ಶೂನ್ಯ ಆಳದ ಫ್ಯಾಮಿಲಿ ಪೂಲ್ ಹಾಗೂ ಮಕ್ಕಳಿಗಾಗಿ ಐದು ಹೊಸ ರೈಡ್ ಗಳನ್ನು ಆರಂಭಿಸಿದೆ.

ಮೂರು ತಲೆಮಾರುಗಳ ಕುಟುಂಬ ಸದಸ್ಯರು ಒಂದೇ ಸ್ಥಳದಲ್ಲಿ ಮನರಂಜನೆ ಅನುಭವಿಸುವಂತೆ ಈ ವಿಸ್ತರಣೆಯನ್ನು ರೂಪಿಸಲಾಗಿದೆ ಎಂದು ಸಂಸ್ಥೆ ತಿಳಿಸಿದೆ. ಈ ಹೊಸ ಆಕರ್ಷಣೆಗಳನ್ನು ಏಪ್ರಿಲ್ ಮಧ್ಯಭಾಗದಲ್ಲಿ ಸಾಫ್ಟ್ ಲಾಂಚ್ ಮಾಡಲಾಗಿದ್ದು, ಏಪ್ರಿಲ್‌ನಿಂದ ಜೂನ್‌ವರೆಗೆ ಇರುವ ಬೇಸಿಗೆ ರಜೆ ಅವಧಿಯಲ್ಲಿ ಸುಮಾರು 2 ಲಕ್ಷದಿಂದ 2.5 ಲಕ್ಷ ಮಂದಿ ಭೇಟಿ ನೀಡುವ ನಿರೀಕ್ಷೆಯಿದೆ.

ಮ್ಯಾಜಿಕಲ್ ಪೂಲ್ ಎಂದು ಹೆಸರಿಸಲಾದ ಈ ಪೂಲ್ 2 ಸಾವಿರ ಚದರ ಅಡಿ ವಿಸ್ತೀರ್ಣದ ಅರ್ಧ ವೃತ್ತಾಕಾರದ ಕೇಂದ್ರ ಭಾಗವನ್ನು ಹೊಂದಿದ್ದು, ಇದರ ಆಳ ಕೇವಲ 10 ಇಂಚುಗಳಷ್ಟಿದೆ. ಜಾರಿ ಬೀಳದ ಆಂಟಿ-ಸ್ಕಿಡ್ ಗ್ಲಾಸ್ ಟೈಲ್ಸ್ ಅಳವಡಿಸಿದೆ. ಈ ಪೂಲ್ ಈಜಲು ವಿನ್ಯಾಸಗೊಳಿಸಲ್ಪಟ್ಟದ್ದಲ್ಲ; ಬದಲಾಗಿ





ಚಿಕ್ಕ ಮಕ್ಕಳಿರುವ ಕುಟುಂಬಗಳು ಸುರಕ್ಷಿತವಾಗಿ ಒಟ್ಟಿಗೆ ನೀರಿನ ಆಟವನ್ನು ಅನುಭವಿಸಲು ಅನುಕೂಲವಾಗುವಂತೆ ನಿರ್ಮಿಸಲಾಗಿದೆ.

ಮುಖ್ಯ ಪೂಲ್ ಸುತ್ತಮುತ್ತ ವಾಟರ್‌ಮಶ್ರೂಮ್‌ಗಳು, ವಾಟರ್‌ಗನ್‌ಗಳು, ಹೂಲಾ ಹೂಪ್ಸ್, ಫ್ಲೋರ್‌ಫೌಂಟನ್‌ಗಳು, ಡಿಪ್ಪಿಂಗ್ ಕೋನ್ಸ್ ಹಾಗೂ ಟಿಪ್ಪಿಂಗ್ ಬಕೆಟ್‌ಗಳಂತಹ ಇಂಟರಾಕ್ಟಿವ್ ವೈಶಿಷ್ಟ್ಯಗಳನ್ನು ಅಳವಡಿಸಲಾಗಿದೆ. ಕೋಟೆ ಮಾದರಿಯ ಹಿನ್ನೆಲೆಯನ್ನು ಕೇರಳ ಮೂಲದ ಕಲಾವಿದ ಮಾಸ್ಟರ್ ಸಾಮುಲ್ ಮತ್ತು ಅವರ ತಂಡವು ಎರಡು ತಿಂಗಳಿಗೂ ಹೆಚ್ಚು ಕಾಲ ಜಿಆರ್‌ಎಸ್‌ನಲ್ಲಿ ಕಾರ್ಯನಿರ್ವಹಿಸಿ ನಿರ್ಮಿಸಿದ್ದಾರೆ.

ಪೂಲ್ ಉಪಕರಣಗಳನ್ನು ಅಂತಾರಾಷ್ಟ್ರೀಯ ಮಟ್ಟದಲ್ಲಿ ವಾಟರ್‌ಪಾರ್ಕ್ ಸಾಧನಗಳನ್ನು ರಫ್ತು ಮಾಡುವ ಮುಂಬೈ ಮೂಲದ ಘಟಕದಲ್ಲಿ ಜಿಆರ್‌ಎಸ್ ಫ್ಯಾಂಟಸಿ ಪಾರ್ಕ್‌ಗಾಗಿ ತಯಾರಿಸಲಾಗಿದೆ. ನೆಲದ ಭಾಗದಲ್ಲಿ 50 ಮಿಮೀ ಇಪಿಡಿಎಂ ಆಂಟಿ-ಸ್ಕಿಡ್ ರಬ್ಬರ್‌ಫ್ಲೋರಿಂಗ್ ಅಳವಡಿಸಲಾಗಿದ್ದು, ಇದು ಬೀಳುವ ಸಂದರ್ಭಗಳಲ್ಲಿ ಸುರಕ್ಷತೆಯನ್ನು ಒದಗಿಸುತ್ತದೆ. ಗ್ಲಾಸ್ ಮೀಡಿಯಾ ಫಿಲ್ಟ್ರೇಷನ್ ವ್ಯವಸ್ಥೆಯ ಮೂಲಕ ಪ್ರತಿ 45 ನಿಮಿಷಕ್ಕೊಮ್ಮೆ ನೀರನ್ನು ಮರುಬಳಕೆ ಮಾಡಲಾಗುತ್ತದೆ. ಕಾರ್ಯಾಚರಣೆ ಸಮಯದಲ್ಲಿ ಇಬ್ಬರು ತರಬೇತಿ ಪಡೆದ ಲೈಫ್ ಗಾರ್ಡ್‌ಗಳು ಹಾಗೂ ಇಬ್ಬರು ಸಹಾಯಕ ಸಿಬ್ಬಂದಿ ಪೂಲ್‌ನಲ್ಲಿ ನಿಯೋಜಿತರಾಗಿರುತ್ತಾರೆ.

ಪೂಲ್ ಜೊತೆಗೆ ಜಂಪಿಂಗ್ ಕ್ಲೌಡ್, ಮ್ಯಾಜಿಕ್ ಸೈಕಲ್, ರೋಟೇಟಿಂಗ್ ಬೀ, ಕ್ರೇಜಿ ಕಾರ್ ಮತ್ತು ಸಫಾರಿ ಕಿಂಗ್ ಎಂಬ ಐದು ಹೊಸ ರೈಡ್ ಗಳನ್ನೂ ಆರಂಭಿಸಿದೆ. ಇವುಗಳಲ್ಲಿ ನಾಲ್ಕು ರೈಡ್ ಗಳು 3 ರಿಂದ 9 ವರ್ಷದ ಮಕ್ಕಳಿಗಾಗಿ ವಿನ್ಯಾಸಗೊಳಿಸಲ್ಪಟ್ಟಿದ್ದು, ಜಂಪಿಂಗ್ ಕ್ಲೌಡ್ ಎಲ್ಲ ವಯಸ್ಸಿನವರಿಗೂ ಮುಕ್ತವಾಗಿದೆ. ಈ ರೈಡ್‌ಗಳನ್ನು ವಿದೇಶಗಳಿಂದ ಆಮದು ಮಾಡಲಾಗಿದೆ. ಪ್ರತಿಯೊಂದು ರೈಡ್ ನಲ್ಲೂ ಸೇಫ್ಟಿ ಬೆಲ್ಟ್ ಹಾಗೂ ಸ್ವಯಂಚಾಲಿತ ಸುರಕ್ಷತಾ ವ್ಯವಸ್ಥೆ ಅಳವಡಿಸಲಾಗಿದ್ದು, ಕಾರ್ಯಾಚರಣೆ ಸಮಯದಲ್ಲಿ ತರಬೇತಿ ಪಡೆದ ಸಿಬ್ಬಂದಿಯನ್ನು ನಿಯೋಜಿಸಿದೆ. ಒಂದು ವರ್ಷದ ಮಗು, ಅದರ ಪೋಷಕರು ಮತ್ತು ಅಜ್ಜ-ಅಜ್ಜಿ-ಎಲ್ಲರೂ ಒಂದೇ ಮಧ್ಯಾಹ್ನದಲ್ಲಿ ತಮ್ಮದೇ ರೀತಿಯಲ್ಲಿ ಆನಂದಿಸುವಂತಹ ಸ್ಥಳವಾಗಿರ ಬೇಕು ಎಂಬುದು ಜಿಆರ್‌ಎಸ್‌ನ ಉದ್ದೇಶ ಎಂದು ಜಿಆರ್‌ಎಸ್ ಫ್ಯಾಂಟಸಿ ಪಾರ್ಕ್‌ನ ನಿರ್ದೇಶಕ ಅಶ್ವಿನ್ ಡಾಂಗೆ ಹೇಳಿದರು.

ಪೂಲ್ ನ ಆಳ, ರೈಡ್‌ಗಳ ವಯೋಮಿತಿ ಹಾಗೂ ಸಿಬ್ಬಂದಿ ತರಬೇತಿ-ಎಲ್ಲವನ್ನೂ ಅದನ್ನು ಗಮನದಲ್ಲಿಟ್ಟುಕೊಂಡೇ ರೂಪಿಸಲಾಗಿದೆ. ಅತಿ ಚಿಕ್ಕ ಮಕ್ಕಳಿಗೂ ಸಂಪೂರ್ಣ ಸುರಕ್ಷತೆಯನ್ನು ಒದಗಿಸುತ್ತಾ, ಇತರರಿಗೂ ಮನರಂಜನೆಯನ್ನು ಕಾಪಾಡುವುದು ನಮ್ಮ ಪ್ರಮುಖ ಉದ್ದೇಶವಾಗಿತ್ತು ಎಂದು ಹೇಳಿದರು.

ಜಿಆರ್‌ಎಸ್ ಫ್ಯಾಂಟಸಿ ಪಾರ್ಕ್ ಅನ್ನು ಬಾಲಿಗಾ ಇನ್ವೆಸ್ಟ್‌ಮೆಂಟ್ಸ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆ ನಿರ್ವಹಿಸುತ್ತಿದ್ದು, ಮೈಸೂರಿನ ಜಿಆರ್‌ಎಸ್ ಆಕರ್ಷಣೆಗಳ ಸಮೂಹದ ಭಾಗವಾಗಿದೆ.

ಇದರಲ್ಲಿ ಜಿಆರ್‌ಎಸ್ ಅಪ್‌ಡೌನ್, ಜಿಆರ್‌ಎಸ್ ಸ್ನೋ ಪಾರ್ಕ್ ಹಾಗೂ ಜಿಆರ್‌ಎಸ್ ಸೆಲ್ಫಿ ಫ್ಯಾಕ್ಟರಿ ಕೂಡ ಸೇರಿವೆ. ಟಿಕೆಟ್‌ಗಳು https://grs.fun/ ನಲ್ಲಿ ಲಭ್ಯವಿವೆ.

ವಿದ್ಯಾರ್ಥಿನಿಯರು ಆರ್ಥಿಕವಾಗಿ ಸ್ವಾವಲಂಬಿಗಳಾಗಬೇಕು

ಸಿದ್ದರಾಮಯ್ಯ ಮಹಿಳಾ ವಿದ್ಯಾರ್ಥಿನಿಲಯಕ್ಕೆ ಭೇಟಿ ನೀಡಿದ ವಿಧಾನ ಪರಿಷತ್ ಸದಸ್ಯ ಡಾ. ಯತೀಂದ್ರ ಅಭಿಪ್ರಾಯ

• **ಕನ್ನಡಪ್ರಭ ವಾರ್ತೆ** ಮೈಸೂರು

ವಿದ್ಯಾರ್ಥಿನಿಯರುಚೆನ್ನಾಗಿಓದಿಕೊಂಡು ಉನ್ನತ ಹುದ್ದೆಗಳನ್ನು ಅವಲಂಬಿಸಿ ಆರ್ಥಿಕವಾಗಿ ಸ್ವಾವಲಂಬಿಗಳಾಗಬೇಕು ಎಂದು ವಿಧಾನ ಪರಿಷತ್ ಸದಸ್ಯ ಡಾ. ಯತೀಂದ್ರ ಸಿದ್ದರಾಮಯ್ಯ ತಿಳಿಸಿದರು.

ವಿಜಯನಗರ 3ನೇ ಹಂತದಲ್ಲಿರುವ ಶ್ರೀ ಸಿದ್ದರಾಮಯ್ಯ ಮಹಿಳಾ ವಿದ್ಯಾರ್ಥಿನಿಲಯಕ್ಕೆ ಬುಧವಾರ ಸಂಜೆ ಭೇಟಿ ನೀಡಿ ಪರಿಶೀಲಿಸಿ ವಿದ್ಯಾರ್ಥಿನಿಯರೊಂದಿಗೆ ಅವರು ಮಾತನಾಡಿದರು.

ನಮ್ಮ ಉದ್ದೇಶವೇನೆಂದರೆ ಗ್ರಾಮೀಣ ಪ್ರದೇಶಗಳಿಂದ ಬರುವ ಮಧ್ಯಮ ವರ್ಗದ ಬಡ ವಿದ್ಯಾರ್ಥಿನಿಯರಿಗೆ ಯಾವುದೇ ತೊಂದರೆ ಆಗಬಾರದೆಂದು ರಿಯಾಯಿತಿ



ದರದಲ್ಲಿ ಗುಣಮಟ್ಟದ ಆಹಾರ ವಸತಿ ಸೌಲಭ್ಯಗಳನ್ನು ಎಂ. ರಾಮಯ್ಯ ಹಾಗೂ ಪುಟ್ಟಬಸವೇಗೌಡರ ನೇತೃತ್ವದಲ್ಲಿ ವ್ಯವಸ್ಥೆ ಮಾಡಲಾಗುತ್ತಿದೆ. ಆದ್ದರಿಂದ ವಿದ್ಯಾರ್ಥಿನಿಯರು ಈ ಸದಾವಕಾಶವನ್ನು ಉಪಯೋಗಿಸಿಕೊಂಡು ಜೀವನದಲ್ಲಿ ಯಶಸ್ಸನ್ನು ಗಳಿಸಬೇಕು ಎಂದರು.

ಮುಖ್ಯಮಂತ್ರಿಗಳ ಜಂಟಿ ಕಾರ್ಯದರ್ಶಿ ಎಂ.ರಾಮಯ್ಯ ಮಾತನಾಡಿ, ಡಾ.ಯತೀಂದ್ರ ಸಿದ್ದರಾಮಯ್ಯ ಅವರು ಎಸ್ಸೆಸ್ಸೆಲ್ಸಿಯಲ್ಲಿ ರ್‍ಯಾಂಕ್ ಪಡೆದಿದ್ದರು. ನೀವು ಸಹ ಚೆನ್ನಾಗಿ ಓದಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಡಾ. ಯತೀಂದ್ರ ಅವರು ಬಡ ವಿದ್ಯಾರ್ಥಿಗಳಿಗೆ ಸಹಾಯ ಮಾಡುತ್ತಿದ್ದಾರೆ. ಆದ್ದರಿಂದ ನೀವು ಒಳ್ಳೆಯ ವೈದ್ಯರಾಗಬೇಕು, ಎಂಜಿನಿಯರ್ ಗಳಾಗಬೇಕು, ಪ್ರೊಫೆಸರ್‌ಗಳಾಗಬೇಕು, ಕೆಎಎಸ್, ಐಎಎಸ್ ಪಾಸ್ ಮಾಡಿ ಉನ್ನತ ಹುದ್ದೆಗಳನ್ನು ಅಲಂಕರಿಸಬೇಕು. ಈ ಹಾಸ್ಟೆಲ್ ಗೆ, ನಿಮ್ಮ ತಂದೆ ತಾಯಿಯರಿಗೆ ಒಳ್ಳೆಯ ಹೆಸರು ತರಬೇಕು ಎಂದರು. ಸಂಸ್ಥೆಯ ಕಾರ್ಯದರ್ಶಿ ಎಂ. ಪುಟ್ಟಬಸವೇಗೌಡ, ಶ್ರೀನಿವಾಸರಾವ್, ಕುಮಾರಸ್ವಾಮಿ, ನಾಗರಾಜ್, ರೇಣುಕ, ಶೇಷಮೂರ್ತಿ, ಲೀಲಾವತಿ, ಪಲ್ಲವಿ, ಮಂಜುನಾಥ್, ಶಿವಸ್ವಾಮಿ, ನಾಗರಾಜ್, ಮಹೇಶ್ ಇದ್ದರು.

ಆಸ್ತಿಗಾಗಿ ಸಹೋದರರನ್ನು ಕೊಚ್ಚಿ ಬರ್ಬರವಾಗಿ ಹತ್ಯೆ

• **ಕನ್ನಡಪ್ರಭ ವಾರ್ತೆ** ಕೆ.ಆರ್. ನಗರ

ಆಸ್ತಿಗಾಗಿ ಸಹೋದರರನ್ನು ದಾರುಣವಾಗಿ ಸಿನಿಮಾ ಶೈಲಿಯಲ್ಲಿ ಮಚ್ಚಿನಿಂದ ನಿಂದ ಬರ್ಬರವಾಗಿ ಕೊಚ್ಚಿ ಹತ್ಯೆ ಮಾಡಿರುವ ಘಟನೆ ತಾಲೂಕಿನ ಅರ್ಜುನಹಳ್ಳಿಯಲ್ಲಿ ನಡೆದಿದೆ.

ಮೂಲತಃ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣದಲ್ಲಿ ವಾಸವಾಗಿದ್ದ ಡಿಸ್ಕವರಿ ರಾಘು (35), ಹರ್ಷವರ್ಧನ್ (30) ಹತ್ಯೆಯಾದ ಸಹೋದರರು. ಕೊಲೆಯಾದ ಇಬ್ಬರು ಯುವಕರು ಅರ್ಜುನಹಳ್ಳಿ ಗ್ರಾಮದ ರಮೇಶ್ ರಾಜು ಅವರ ಕಿರಿಯ ಹೆಂಡತಿಯ ಮಕ್ಕಳಾಗಿದ್ದು, ತಂದೆಯ ಆಸ್ತಿಗಾಗಿ ಮತ್ತು ಹಳೆಯ ವೈಷಮ್ಯಕ್ಕೆ ಸಂಬಂಧಿಸಿದಂತೆ ಜೋಡಿ ಕೊಲೆ ನಡೆದಿದೆ.

ಅರ್ಜುನಹಳ್ಳಿ ಗ್ರಾಮದ ರಮೇಶ್ ರಾಜು ಎಂಬವರಿಗೆ ಇಬ್ಬರು ಹೆಂಡತಿಯರು ಮೊದಲನೇ ಹೆಂಡತಿ ಸುಧಾ ಎಂಬುವರು ಇನ್ನೊರ್ವ ಹೆಂಡತಿ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ಮೂಲದ ಶಿಕ್ಷಕಿ ಕಾಮಾಕ್ಷಿ ಎನ್ನಲಾಗಿದೆ.

ಈಗ್ಗೆ ಎರಡ್ಮೂರು ವರ್ಷಗಳ ಹಿಂದೆ ರಮೇಶ್ ರಾಜು ಅವರ ಎರಡನೇ ಹೆಂಡತಿ ಕಾಮಾಕ್ಷಿ ಶಿಕ್ಷಕಿಯಾಗಿ ನಿವೃತ್ತಿ ಹೊಂದಿ ಶ್ರೀ ರಂಗಪಟ್ಟಣದಲ್ಲಿ ನೆಲಸಿದ್ದರು ಎನ್ನಲಾಗಿದ್ದು, ನಿವೃತ್ತ ಶಿಕ್ಷಕಿ ಕಾಮಾಕ್ಷಿ ಅವರಿಗೆ ಹಿರಿಯ ಮಗ ಡಿಸ್ಕವರಿ ರಾಘು, ದ್ವಿತೀಯ ಪುತ್ರ ಹರ್ಷವರ್ಧನ ಎಂಬ ಮಕ್ಕಳಿದ್ದಾರೆ. ಈ ಪೈಕಿ ಡಿಸ್ಕವರಿ ರಾಘು ತಂದೆಯ ಆಸ್ತಿಗಾಗಿ ಅರ್ಜುನಹಳ್ಳಿ ತೋಟದ ಮನೆಯಲ್ಲಿ ತಂದೆ ರಮೇಶ್ ರಾಜ್ ಅವರನ್ನು ಮೂರು ವರ್ಷಗಳ ಹಿಂದೆ ಬರ್ಬರ ಹತ್ಯೆ ಮಾಡಿ ಜೈಲು ಸೇರಿದ್ದ ಎನ್ನಲಾಗಿದೆ.

ಲೇಟ್ ರಮೇಶ್ ರಾಜು ಅವರ ಮೊದಲನೇ ಪತ್ನಿ ಸುಧಾ ಅವರ ಮಗ ರೋಹಿತ್ ಆಸ್ತಿಯ ವಿಚಾರವಾಗಿ ರಾಜಿ ಪಂಚಾಯ್ತಿಗಾಗಿ ತನ್ನ ತಂದೆಯ ಕಿರಿ ಹೆಂಡತಿ ಕಾಮಾಕ್ಷಿ



■ ತಂದೆಯ ಆಸ್ತಿಗಾಗಿ, ಹಳೆಯ ವೈಷಮ್ಯಕ್ಕೆ ಸಂಬಂಧಿಸಿದಂತೆ ಜೋಡಿ ಕೊಲೆ
■ ಕೆ.ಆರ್.ನಗರ ತಾಲೂಕಿನ ಅರ್ಜುನಹಳ್ಳಿಯಲ್ಲಿ ಘಟನೆ

ಮಕ್ಕಳಾದ ಡಿಸ್ಕವರಿ ರಾಘು ಹಾಗೂ ಹರ್ಷವರ್ಧನ್ ಇಬ್ಬರನ್ನು ಅರ್ಜುನಹಳ್ಳಿ ಗ್ರಾಮಕ್ಕೆ ಕರೆಸಿದ್ದರು ಎನ್ನಲಾಗಿದೆ. ಆಸ್ತಿ ಹಂಚಿಕೊಳ್ಳುವ ವಿಚಾರದಲ್ಲಿ ಮಾತಿನ ಚಕಮಕಿ ನಡೆದಿದ್ದು, ಏಕಾಏಕಿ ಮಚ್ಚಿನಿಂದ ರೋಹಿತ್ ಈ ಇಬ್ಬರು ಸೋಹದರರ ಮೇಲೆ ಮನಸ್ಸೊ ಇಚ್ಛೆ ಬಂದಂತೆ ತಲೆ ಹಾಗೂ ಮುಖದ ಮೇಲೆ ಕೊಚ್ಚಿದ್ದಾನೆ, ಸ್ಥಳದಲ್ಲಿ ಹರ್ಷವರ್ಧನ್ ಮೃತಪಟ್ಟನು, ತಪ್ಪಿಸಿಕೊಂಡು ಓಡಿ ಹೋಗುತ್ತಿದ್ದ ಡಿಸ್ಕವರಿ ರಾಘುನನ್ನು ಬೆನ್ನತ್ತಿದ್ದ ರೋಹಿತ್ ಕಲ್ಯಾಣಪುರ ಸಮೀಪ ರಸ್ತೆಯ ಬದಿಯಲ್ಲಿ ಮಚ್ಚಿನಿಂದ ಕೊಚ್ಚಿ ಬರ್ಬರವಾಗಿ ಹತ್ಯೆಗೈದಿದ್ದಾನೆ ಎನ್ನಲಾಗಿದೆ. ಕೆ.ಆರ್.ನಗರ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್ ಪೆಕ್ಟರ್ ಶಿವಪ್ರಕಾಶ್ ಸ್ಥಳಕ್ಕೆ ಭೇಟಿ ನೀಡಿ ಹತ್ಯೆಯಾದ ಇಬ್ಬರು ಯುವಕರ ಶವಗಳನ್ನು ಪರಿಶೀಲಿಸಿದರು. ಈ ಸಂಬಂಧ ಹತ್ಯೆಗೈದ ಆರೋಪಿ ರೋಹಿತ್ ನನ್ನು ಜಮೀನಿನ ಬಳಿ ಬಂಧಿಸಿದ ಪೊಲೀಸರು, ಆರೋಪಿ ರೋಹಿತ್ ಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಚಿಕಿತ್ಸೆಗಾಗಿ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿ ಪೊಲೀಸ್ ವಶಕ್ಕೆಪಡೆಯಲಾಗಿದೆ.

ಕಾವೇರಿ 2.0 ತಂತ್ರಾಂಶದಲ್ಲಿನ ಲೋಪದಿಂದ ಆಸ್ತಿ ಹೊಂದಿರುವವರಿಗೆ ಸಮಸ್ಯೆ: ಆರೋಪ

• **ಕನ್ನಡಪ್ರಭ ವಾರ್ತೆ** ಮೈಸೂರು

ನೋಂದಣಿ ಮತ್ತು ಮುದ್ರಾಂಕ ಇಲಾಖೆ ಜಾರಿಗೆ ತಂದಿರುವ ಕಾವೇರಿ 2.0 ತಂತ್ರಾಂಶ ಅನೇಕ ಲೋಪಗಳಿಂದ ಕೂಡಿದೆ. ಇದರಿಂದ ಆಸ್ತಿ ಹೊಂದಿರುವವರಿಗೆ ಸಮಸ್ಯೆಯಾಗುತ್ತಿದೆ ಎಂದು ಮೈಸೂರು ನಗರ ಮತ್ತು ತಾಲೂಕು ಪತ್ರ ಬರಹಗಾರರ ಒಕ್ಕೂಟದ ಅಧ್ಯಕ್ಷ ನಿಸಾರ್‌ಅಹಮದ್ ಆರೋಪಿಸಿದರು.

ಇತ್ತೀಚೆಗೆ ಅನುಷ್ಠಾನಗೊಂಡಿರುವ ಪ್ರಕ್ರಿಯೆಯಲ್ಲಿ ಪಕ್ಷಕಾರರ ಭೌತಿಕ ಸಹಿ, ಸಾಕ್ಷಿಗಳ ಭೌತಿಕ ಸಹಿ, ಉಪ ನೋಂದಣಾಧಿಕಾರಿಗಳ ಭೌತಿಕ ಸಹಿ ಹಾಗೂ ಪತ್ರ ಬರಹಗಾರರ ಭೌತಿಕ ಸಹಿ ಇಲ್ಲದಿದ್ದು, ಇದರಿಂದಾಗಿ ದಾಖಲಾತಿಗಳು ಕೇವಲ ಮುದ್ರಣ ಹೊರತುಪಡಿಸಿ ಯಾವುದೇ ವಿಶೇಷತೆ ಹೊಂದಿಲ್ಲ ಎಂದು ಅವರು ಗುರುವಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಪೇಪರ್ ಲೆಸ್ ನೋಂದಣಿ ಮೂಲಕ ನೋಂದಣಿ ಆಗುವ ದಸ್ತಾವೇಜು ಡಿಜಿಟಲ್ ರೂಪದಲ್ಲಿ ಕೇಂದ್ರಿತ ದತ್ತಾಂಶದಲ್ಲಿ ದಾಖಲಾಗುವ ಕಾರಣ ಭೌತಿಕವಾಗಿ ಲಭ್ಯವಾಗದಿದ್ದು, ಈ ನೋಂದಾಯಿತ ದಸ್ತಾವೇಜುಗಳ ಮೇಲೆ ಕಷ್ಟಕಾಲದಲ್ಲಿ ಆರ್ಥಿಕ, ಹಣಕಾಸು ಸೌಲಭ್ಯವನ್ನು ಖಾಸಗಿ ವ್ಯಕ್ತಿಗಳಿಂದ ಪಡೆಯಲು ಸಹ ಸಾಧ್ಯವಾಗುವುದಿಲ್ಲ. ಡಿಜಿಟಲ್ ರೂಪದಲ್ಲಿ ಸ್ವತ್ತಿನ ಹಕ್ಕುದಾರರು ಒಂದಕ್ಕಿಂತ ಹೆಚ್ಚು ಮುದ್ರಿತ ಪ್ರತಿ ಪಡೆಯಲು ಸಾಧ್ಯವಿದ್ದು, ಖಾಸಗಿ ವ್ಯಕ್ತಿಗಳು ಯಾವುದೇ ಅಸಲು ದಸ್ತಾವೇಜಿನ ಖಾತರಿ ಇಲ್ಲದೇ ಆರ್ಥಿಕ ಸಹಾಯ ನೀಡಲು ಹಿಂಜರಿಯುವ ಸಂಭವವಿದೆ ಎಂದರು.

ಹೀಗಾಗಿ, ಪತ್ರ ಬರಹಗಾರರ ಅವಲಂಬನೆಗೆ ಕಡಿವಾಣ ಹಾಕುವ ಯಾವುದೇ ಪ್ರವೃತ್ತಿ ಸಹಾಯಕಾರಿಯಲ್ಲ. ಇದರಿಂದ ಜನತೆಗೆ ಹೆಚ್ಚು ಅನಾನುಕೂಲವಾಗುವ ಕಾರಣ ಈ ಹಿಂದಿನ ಪದ್ಧತಿ ರದ್ದುಗೊಳಿಸುವುದು ಸರಿಯಲ್ಲ ಎಂದರು.

ಒಕ್ಕೂಟದ ಪದಾಧಿಕಾರಿಗಳಾದ ಕೆ.ಆರ್. ಉದಯ್ ಕುಮಾರ್, ಎಂ.ಎಸ್. ನರಸಿಂಹಮೂರ್ತಿ, ಎಂ. ಗಣೇಶ್, ಎ.ಎಸ್. ನಾಗಭೂಷಣ ಆರಾಧ್ಯ ಮೊದಲಾದವರು ಇದ್ದರು.

ವೀರಶೈವ ವಿದ್ಯಾರ್ಥಿಗಳಿಗೆ ವಸತಿ, ಊಟ ಸೌಲಭ್ಯ

• **ಕನ್ನಡಪ್ರಭ ವಾರ್ತೆ** ಮೈಸೂರು


ಖಿಲ್ಲೆ ಮೊಹಲ್ಲಾದ ಶ್ರೀ ಮದ್ದಾನೇಶ್ವರ ವಿದ್ಯಾರ್ಥಿನಿಲಯವು ಪಿಯುಸಿ, ಡಿಪ್ಲೋಮಾ, ಡಿಇಡಿ, ಬಿಎಡ್, ಪದವಿ, ಸ್ನಾತಕೋತ್ತರ ಪದವಿ, ಪ್ಯಾರ ಮೆಡಿಕಲ್, ಬಿಇ, ಎಂಸಿಎ ಮತ್ತು ನರ್ಸಿಂಗ್ ತರಗತಿಯಲ್ಲಿ ಓದುತ್ತಿರುವ ವೀರಶೈವ ವಿದ್ಯಾರ್ಥಿಗಳಿಗೆ ಅತ್ಯಂತ ಕಡಿಮೆ ದರದಲ್ಲಿ ತಿಂಡಿ, ಊಟ ಮತ್ತು ವಸತಿ ಸೌಲಭ್ಯ ಕಲ್ಪಿಸುತ್ತಿದೆ. ಆಸಕ್ತರು ನಿಲಯಪಾಲಕರು, ಶ್ರೀ ಮದ್ದಾನೇಶ್ವರ ವಿದ್ಯಾರ್ಥಿನಿಲಯ ಟ್ರಸ್ಟ್, ನಂ. 139/2, ಬಿಲ್ವ ಭವನ, ಹರಿಶ್ಚಂದ್ರ ರಸ್ತೆ, ಫೋರ್ಟ್ ಮೊಹಲ್ಲಾ, ಮೈಸೂರು - 04 ಇಲ್ಲಿ ಕಚೇರಿ ವೇಳೆ ಪಡೆಯಬಹುದು. ಹೆಚ್ಚಿನ ಮಾಹಿತಿಗೆ ಮೊ. 94807 34131, 88845 65185 ಸಂಪರ್ಕಿಸಬಹುದು.

ಬಿರುಗಾಳಿಗೆ ಮನೆ ಹಾನಿ: ಎಚ್.ಪಿ.ಮಂಜುನಾಥ್ ನೆರವು

• **ಕನ್ನಡಪ್ರಭ ವಾರ್ತೆ** ಹುಣಸೂರು

ಹನಗೋಡು ಹೋಬಳಿಯ ವದ್ದಿ ಮನುಗನಹಳ್ಳಿಯಲ್ಲಿ ಬಿರುಗಾಳಿ ಮಳೆಗೆ ಮನೆಯ ಮೇಲ್ಛಾವಣಿಗೆ ಹಾಕಿದ್ದ ಕಲ್ನಾರ್ ಶೀಟ್ ಹಾರಿಹೋಗಿದ್ದು, ಕುಟುಂಬ ಸಂಕಷ್ಟಕ್ಕೆ ಸಿಲುಕಿದೆ.

ಬುದ್ಧಿಮಾಂದ್ಯ ಪುಟ್ಟಸ್ವಾಮಿನಾಯಕರು ಗ್ರಾಮದ ಹೊರವಲಯದ ತಮ್ಮ ಜಮೀನಿನಲ್ಲಿ ನಿರ್ಮಿಸಿಕೊಂಡಿದ್ದ ವಾಸದ ಮನೆಯು ಬಿರುಗಾಳಿಗೆ ಸಿಲುಕಿ ಹೊಸದಾಗಿ ನಿರ್ಮಿಸಿದ್ದ ಮನೆಯ ಮೇಲ್ಛಾವಣಿಗೆ ಹಾಕಿದ್ದ ಕಲ್ನಾರ್‌ಶೀಟ್ ಸಂಪೂರ್ಣ ಹಾರಿ ಹೋಗಿದ್ದು, ಮನೆಯೊಳಗಿದ್ದ



ದವಸ-ಧಾನ್ಯ, ಬಟ್ಟೆ ಮತ್ತಿತರ ಪದಾರ್ಥಗಳಿಗೆ ಹಾನಿಯಾಗಿದೆ. ಬುದ್ಧಿಮಾಂದ್ಯ ಪುಟ್ಟಸ್ವಾಮಿನಾಯಕರ ಕುಟುಂಬಕ್ಕೆ ಸರ್ಕಾರ ಸೂಕ್ತ ನೆರವು ಕಲ್ಪಿಸುವಂತೆ ಗ್ರಾಮಸ್ಥರು ಮನವಿ ಮಾಡಿದ್ದಾರೆ.

ಕಂದಾಯ ಇಲಾಖೆಯ ಗ್ರಾಮ ಆಡಳಿತಾಧಿಕಾರಿ ಚಂದನ್ ಭೇಟಿ ನೀಡಿ ಪರಿಶೀಲಿಸಿ, ಹಿರಿಯ ಅಧಿಕಾರಿಗಳಿಗೆ ಹಾನಿ ಕುರಿತು ವರದಿ ನೀಡಿದ್ದಾರೆ.

ಮಾಜಿ ಶಾಸಕ ಭೇಟಿ, ನೆರವು: ಗ್ರಾಮಕ್ಕೆ ಭೇಟಿ ನೀಡಿದ್ದ ಮಾಜಿ ಶಾಸಕ ಎಚ್.ಪಿ. ಮಂಜುನಾಥ ಅವರು ಮನೆ ಹಾನಿಯಾಗಿರುವುದನ್ನು ವೀಕ್ಷಿಸಿ ಸಂಕಷ್ಟದಲ್ಲಿರುವ ಕುಟುಂಬಕ್ಕೆ ವೈಯಕ್ತಿಕ ನೆರವು ನೀಡಿ, ಆತ್ಮಸ್ಥೈರ್ಯ ತುಂಬಿ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವಂತೆ ಸಲಹೆ ನೀಡಿದರು.

ನಾಳೆ ನಟನ ರಜಾ-ಮಜಾ 2026ರ ಸಮಾರೋಪ ಸಮಾರಂಭ

• **ಕನ್ನಡಪ್ರಭ ವಾರ್ತೆ** ಮೈಸೂರು

ರಾಮಕೃಷ್ಣನಗರದ ನಟನ ರಂಗಶಾಲೆಯ ವತಿಯಿಂದ ನಡೆಯುತ್ತಿರುವ ನಟನ ರಜಾ-ಮಜಾ ಸಮಾರೋಪ ಸಡಗರ ಸಮಾರಂಭವು ಮೇ 9ರ ಮಧ್ಯಾಹ್ನ 3.30ಕ್ಕೆ ಕೃಷ್ಣಮೂರ್ತಿಪುರಂನಲ್ಲಿರುವ ಶಾರದಾ ವಿಲಾಸ ಶತಮಾನೋತ್ಸವ ಭವನದಲ್ಲಿ ನಡೆಯಲಿದೆ.

ಮುಖ್ಯ ಅತಿಥಿಯಾಗಿ ಕನ್ನಡಚಿತ್ರರಂಗದ ಹಿರಿಯ ಖ್ಯಾತ ನಟ ಅವಿನಾಶ್ ಯಳಂದೂರು, ಗಾಯಕಿ ಅಕ್ಕೈ ಪದ್ಮಶಾಲಿ, ನಟ, ನಿರ್ದೇಶಕ ನವೀನ್ ಕೃಷ್ಣ, ಶಿಬಿರದ ಸಂಯೋಜಕರು, ನಟನದ ಪ್ರಾಂಶುಪಾಲ ಮೇಘ ಸಮೀರ, ಶಿಬಿರದ ಸಂಚಾಲಕ ದಿಶಾ ರಮೇಶ್, ನಟನದ ಅಧ್ಯಕ್ಷ ಕೆ.ಎಸ್. ಆನಂದಕುಮಾರ್ ಭಾಗವಹಿಸುವರು.

ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ ಬೆಂಗಳೂರು ಇವರ ಸಹಯೋಗದಲ್ಲಿ ನಡೆಯಲಿರುವ ಈ ಎರಡೂ ದಿನದ ಕಾರ್ಯಕ್ರಮದಲ್ಲಿ ಮಕ್ಕಳು ಶಿಬಿರದುದ್ದಕ್ಕೂ ಅಭ್ಯಸಿಸಿದ ಎಲ್ಲ ಕಲಾ ಪ್ರಕಾರಗಳ ಪ್ರದರ್ಶನವೂ ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ ಮೊ.7259537777, 9480468327, 9845595505 ಸಂಪರ್ಕಿಸಬಹುದು.

ಶ್ರೀಗಳ ದೂರದೃಷ್ಟಿ | ಸಾರ್ವಜನಿಕರಿಗಾಗಿ ಆಯೋಜಿಸಿರುವ ಜೀವನೋತ್ಸಾಹ ಶಿಬಿರದಲ್ಲಿ ನಿವೃತ್ತ ಐಜಿಪಿ ಡಿ.ಎನ್. ಮುನಿಕೃಷ್ಣ ಅಭಿಪ್ರಾಯ

ಮಾನವೀಯ ಮೌಲ್ಯಗಳಿಂದ ಜೀವನ ಸುಂದರವಾಗಿಸಲು ಸಾಧ್ಯ

• **ಕನ್ನಡಪ್ರಭ ವಾರ್ತೆ** ಮೈಸೂರು

ಮಾನವೀಯ ಮೌಲ್ಯಗಳಿಂದ ಜೀವನವನ್ನು ಸುಂದರವಾಗಿಸಲು ಸಾಧ್ಯ ಎಂದು ನಿವೃತ್ತ ಐಜಿಪಿ ಡಿ.ಎನ್. ಮುನಿಕೃಷ್ಣ ಹೇಳಿದರು.

ಜಗದ್ಗುರು ಶ್ರೀ ವೀರಸಿಂಹಾಸನ ಮಹಾ ಸಂಸ್ಥಾನ ಮಠ, ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ ಹಾಗೂ ಜೆಎಸ್‌ಎಸ್ ಮಹಾ ವಿದ್ಯಾಪೀಠಗಳ ಸಂಯುಕ್ತಾಶ್ರಯದಲ್ಲಿ ಊಟಿಯ ತೀಟಕಲ್ ನ ಜೆಎಸ್‌ಎಸ್ ಪಬ್ಲಿಕ್ ಶಾಲಾ ಆವರಣದಲ್ಲಿ ಸಾರ್ವಜನಿಕರಿಗಾಗಿ ಆಯೋಜಿಸಿರುವ ಜೀವನೋತ್ಸಾಹ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮೊಳಗಿನ ಮಾನವೀಯತೆ ಜಾಗೃತಗೊಳ್ಳಲು ಜೀವನೋತ್ಸಾಹ ಶಿಬಿರಗಳು ಅಗತ್ಯ. ನಾವು ಜೀವನವನ್ನು ಒಳ್ಳೆಯ ರೀತಿಯಲ್ಲಿ ನಡೆಸಲು ಸದ್ಭಾವನೆ ಮುಖ್ಯ. ಪದವಿ, ಪುರಸ್ಕಾರಗಳಿಗಿಂತ ನಿಸ್ವಾರ್ಥ ಸೇವೆಯೇ ನಿಜವಾದ ಸಾಧನೆಯಾಗಿದೆ. ಆಧುನಿಕ ಯುಗದಲ್ಲಿ ಜನರು ಜೀವನೋತ್ಸಾಹ ಕಳೆದುಕೊಳ್ಳುತ್ತಿದ್ದಾರೆ. ಇಂತಹ ಶಿಬಿರಗಳಿಂದ ಉತ್ಸಾಹ



ತುಂಬಲು ಸಾಧ್ಯ. ಸುತ್ತೂರು ಶ್ರೀಗಳವರು ದೂರದೃಷ್ಟಿಯಿಂದ ಶಿಬಿರವನ್ನು ಆಯೋಜಿಸಿರುವುದು ನಿಮ್ಮೆಲ್ಲರ ಸೌಭಾಗ್ಯ ಎಂದು ಹೇಳಿದರು.ಕೆ.ಸಿ. ವಿರೂಪಾಕ್ಷ ಮಾತನಾಡಿ, ನಮ್ಮ ಬದುಕು ಪ್ರಾಮಾಣಿಕವಾಗಿರಬೇಕು. ಮಾಡುವ ಕೆಲಸಗಳಲ್ಲಿ ಆಸಕ್ತಿ ಮತ್ತು ಶ್ರದ್ಧೆ ಇರಬೇಕು. ವೈಯಕ್ತಿಕ ಬದುಕು ಆದರ್ಶವಾಗಿದ್ದು, ಎಲ್ಲರನ್ನೂ ಪ್ರೀತಿಸುವ ಗುಣವನ್ನು ಮತ್ತು ಸಹಜ ಬದುಕನ್ನು ರೂಢಿಸಿಕೊಳ್ಳಲು ಶರಣರ ಚಿಂತನೆಗಳು ಸ್ಫೂರ್ತಿಯಾಗಿವೆ ಎಂದು ತಿಳಿಸಿದರು.

ಭಾರತೀಯ ಸೇನೆಯ ಸೇನಾ ಪದಕ ಪುರಸ್ಕೃತ ಕರ್ನಲ್ ಪಿ.ಎಲ್. ರಾಘವೇಂದ್ರ ಮಾತನಾಡಿ, ಇಂದಿನ ಜನರ ಮನಸ್ಥಿತಿ ಚಂಚಲವಾಗುತ್ತಿದೆ. ಪೋಷಕರು ಮಕ್ಕಳ ಕೈಯಲ್ಲಿ ಮೊಬೈಲ್ ಫೋನ್ ಕೊಟ್ಟು ಅವರ ಬೌದ್ಧಿಕತೆಗೆ ವಿಷವನ್ನು ನೀಡಲಾಗುತ್ತಿದೆ. ಮಕ್ಕಳಲ್ಲಿ ತಾಳ್ಮೆ ಕಡಿಮೆಯಾಗುತ್ತಿದ್ದು, ಏಕಾಗ್ರತೆ ಕಳೆದುಕೊಳ್ಳುತ್ತಿದ್ದಾರೆ. ಮಕ್ಕಳಲ್ಲಿ ಧಾರ್ಮಿಕ ಮತ್ತು ಆಧ್ಯಾತ್ಮಿಕ ಪ್ರಜ್ಞೆಯನ್ನು ಬೆಳೆಸಬೇಕು.

■ ಸುತ್ತೂರು ಶ್ರೀಗಳ ದೂರದೃಷ್ಟಿಯಿಂದ ಶಿಬಿರ ಆಯೋಜನೆ ನಿಮ್ಮೆಲ್ಲರ ಸೌಭಾಗ್ಯ
■ ಯಾವುದೇ ಸಂದರ್ಭದಲ್ಲೂ ತಾಳ್ಮೆ ಕಳೆದುಕೊಳ್ಳದೆ ಬದುಕುವುದೇ ನಿಜವಾದ ಸಹನಶೀಲತೆ

ಮನುಷ್ಯ ಮತ್ತು ಪ್ರಕೃತಿ ನಡುವಿನ ಸಂಬಂಧ ಗಾಢವಾಗಿದ್ದಲ್ಲಿ ದೈವತ್ವ ಪ್ರಾಪ್ತಿಯಾಗುತ್ತದೆ ಎಂದರು.

ಶಿವಮೊಗ್ಗ ಬಸವ ಮಂದಿರದ ಅಧ್ಯಕ್ಷ ಡಾ. ಶ್ರೀ ಬಸವ ಮರುಳಸಿದ್ದ ಸ್ವಾಮಿಗಳು ಭಾರತೀಯ ತತ್ವಜ್ಞಾನ ಮತ್ತು ಯೋಗ ಪರಂಪರೆಯಲ್ಲಿ ಯೋಗಗಳ ರಾಜನೆಂದು ಶಿವಯೋಗವನ್ನು ಕರೆಯಲಾಗಿದೆ.ಇದು ಕರ್ಮಯೋಗ, ಹಠಯೋಗ ಮತ್ತು ಭಕ್ತಿಯೋಗಗಳ ಸಮನ್ವಯವಾಗಿದೆ. ಶಿವಯೋಗವು ಅಂತರಂಗದ ದೇವನನ್ನು ಇಷ್ಟಲಿಂಗದ ಮೂಲಕ ಸಾಕ್ಷಾತ್ಕರಿಸಿಕೊಳ್ಳುವ ಅತ್ಯುನ್ನತ ಯೋಗ ಮಾರ್ಗವಾಗಿದೆ ಎಂದರು.

ಶಿಕ್ಷಣ ತಜ್ಞರು ಹಾಗೂ ವಾಗ್ಮಿಗಳಾದ ಶ್ರೀ ಮಹೇಶ್ ಮಾಶಾಳರವರು ನಾವು ಕಷ್ಟದ ಸಂದರ್ಭಗಳಲ್ಲಿ, ಕೋಪ ಅಥವಾ ಅಸಮಾಧಾನವನ್ನು ತೋರಿಸಬಾರದು. ಸಮಸ್ಯೆಗಳನ್ನು ಸ್ಥಿರ ಹಾಗೂ ಶಾಂತಿಯುತ ಮನಸ್ಸಿನಿಂದ ಎದುರಿಸಬೇಕು. ಯಾವುದೇ ಸಂದರ್ಭದಲ್ಲೂ ತಾಳ್ಮೆ ಕಳೆದುಕೊಳ್ಳದೆ ಬದುಕುವುದೇ ನಿಜವಾದ ಸಹನಶೀಲತೆ ಎಂದು ತಿಳಿಸಿದರು.


ಶಿಬಿರದಲ್ಲಿ ಬೆಳಗ್ಗೆ ಸಾಮೂಹಿಕ ಪ್ರಾರ್ಥನೆ, ಯೋಗಾಭ್ಯಾಸ- ಧ್ಯಾನ ಹಾಗೂ ಸಂಜೆ ದೇಸಿ ಆಟಗಳಲ್ಲಿ ಉತ್ಸಾಹದಿಂದ ಪಾಲ್ಗೊಂಡಿದ್ದರು. ಸಂಜೆ ಪ್ರಾರ್ಥನೆ ನಂತರ ಶಿಬಿರಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮ ನೀಡಿದರು.

ಶಿಬಿರದಲ್ಲಿ ಮೈಸೂರು, ಬೆಂಗಳೂರು, ಚಾಮರಾಜನಗರ, ತುಮಕೂರು, ಚಿಕ್ಕಮಗಳೂರು, ಶಿವಮೊಗ್ಗ, ರಾಯಚೂರು, ಬಾಗಲಕೋಟೆ, ಗದಗ, ಬೆಳಗಾವಿ, ಗುಲ್ಬರ್ಗ, ಬೀದರ್ ಹಾಗೂ ವಿಜಯಪುರ ಜಿಲ್ಲೆಗಳಿಂದ 235 ಶಿಬಿರಾರ್ಥಿಗಳು ಪಾಲ್ಗೊಂಡಿದ್ದರು.

ಎಫ್‌ಆರ್‌ಪಿ ಬೆಲೆ ಕಬ್ಬು ಬೆಳೆಗಾರರಿಗೆ ನ್ಯಾಯ ಸಮ್ಮತವಲ್ಲ: ದೇವರಾಜ್

• **ಕನ್ನಡಪ್ರಭ ವಾರ್ತೆ** ಮೈಸೂರು

ಕೇಂದ್ರ ಸರ್ಕಾರ ಘೋಷಣೆ ಮಾಡಿರುವ ಕಬ್ಬಿನ ಎಫ್‌ಆರ್‌ಪಿ ಬೆಲೆ ಒಂದು ಟನ್ ಕಬ್ಬಿಗೆ 3650 ರೂ. ಬೆಲೆ ನಿಗದಿ ಪಡಿಸಿದ್ದು ಕಬ್ಬು ಬೆಳೆಗಾರ ರೈತರಿಗೆ ನ್ಯಾಯ ಸಮ್ಮತವಲ್ಲ



ಎಂದು ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಅತ್ತಹಳ್ಳಿ ದೇವರಾಜ್ ಖಂಡಿಸಿದ್ದಾರೆ.

ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಿ ಘೋಷಿಸಿರುವ 2026- 27ನೇ ಸಾಲಿಗೆ 10- 25 ಸಕ್ಕರೆ ಇಳುವರಿ ಟನ್ ಕಬ್ಬಿಗೆ 3650 ರು. ರೈತರ ಉತ್ಪಾದನ ವೆಚ್ಚಕಿಂತ ಕಡಿಮೆಯಾಗಿದೆ. ಕರ್ನಾಟಕ ಸರ್ಕಾರ ಕಬ್ಬು ಉತ್ಪಾದನಾ ವೆಚ್ಚ 4450 ರು. ನಿಗದಿ ಮಾಡಬೇಕೆಂದು ವರದಿ ನೀಡಿದೆ. ಇದನ್ನು ಗಮನಿಸಿ ಹೆಚ್ಚುವರಿ ಬೆಲೆ ನಿಗದಿ ಮಾಡಬೇಕಾಗಿತ್ತು. ಇದು ರೈತರನ್ನು ಕಬ್ಬು ಬೆಳೆಯಿಂದ ಒಕ್ಕಲೆಬ್ಬಿಸುವ ಕಾರ್ಯವಾಗಿದೆ. ಹೀಗಾಗಿ, ಕೂಡಲೇ ಎಫ್‌ಆರ್ ಪಿ ದರ ಪುನರ್‌ಪರಿಶೀಲಿಸಿ ಟನ್ ಕಬ್ಬಿಗೆ ಕನಿಷ್ಠ 4500 ರು. ಬೆಲೆ ನಿಗದಿಗೊಳಿಸಬೇಕು ಎಂದು ಆಗ್ರಹಿಸಿದ್ದಾರೆ.

ಕಬ್ಬಿನಿಂದ ಸಕ್ಕರೆ, ಎಥನಾಲ್, ವಿದ್ಯುತ್, ಕಾಂಪೋಸ್ಟ್ ಗೊಬ್ಬರ ಇನ್ನು ಇತರೆ ಉತ್ಪನ್ನಗಳನ್ನು ಉತ್ಪಾದಿಸುವ ಸಕ್ಕರೆ ಕಾರ್ಖಾನೆಗಳು ರೈತರಿಗೆ ನಿರಂತರವಾಗಿ ವಂಚನೆ ಮಾಡುತ್ತಿವೆ. ಸರ್ಕಾರದ ಆದೇಶಗಳನ್ನು ವಾಮ ಮಾರ್ಗದಲ್ಲಿ ನಿರ್ಲಕ್ಷಿಸುತ್ತಿವೆ. ಕಬ್ಬಿನ ಹಣ ಪಾವತಿ ಸಕಾಲಕ್ಕೆ ಸಮರ್ಪಕವಾಗಿ ಮಾಡುತ್ತಿಲ್ಲ. ಇಂತಹ ವಿಚಾರದಲ್ಲಿ ಕೇಂದ್ರ ಸರ್ಕಾರ ಸಕ್ಕರೆ ನಿಯಂತ್ರಣ ಕಾಯ್ದೆ 1966 ತಿದ್ದುಪಡಿ ಮಾಡಿ ಕಾನೂನು ಉಲ್ಲಂಘಿಸುವ ಸಕ್ಕರೆ ಕಾರ್ಖಾನೆ ಮಾಲೀಕರಿಗೆ ಶಿಕ್ಷೆ ವಿಧಿಸುವ ಕಠಿಣ ಕಾಯ್ದೆ ಜಾರಿಗೆ ತರಬೇಕು ಎಂದು ಅವರು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಯುವ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮ

ಮೈಸೂರು: ನಗರದ ವಿವೇಕಾನಂದ ಇನ್ ಸ್ಟಿಟ್ಯೂಟ್ಆಫ್ ಲೀಡರ್ ಶಿಪ್ ಡೆವಲಪ್ಮೆಂಟ್ ಒಂದು ತಿಂಗಳ ವಸತಿ ಆಧಾರಿತ ಯುವ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಕ್ಕೆ ಅರ್ಜಿ ಆಹ್ವಾನಿಸಿದೆ. ಜೀವನ ಕೌಶಲ್ಯ, ಸಂವಹನ ಕೌಶಲ್ಯ, ಸಮಸ್ಯೆ ನಿವಾರಣೆ, ಗಣಕೀಕೃತ ಸಾಕ್ಷರತೆ, ಎಐ ಕೌಶಲ್ಯ ಮುಂತಾದ ವಿಷಯದ ಕುರಿತು ತಿಳಿಸಿಕೊಡಲಾಗುವುದು. ಹೆಚ್ಚಿನ ಮಾಹಿತಿಗೆ ಮೊ. 97390 17311 ಸಂಪರ್ಕಿಸಬಹುದು.

ಸುದ್ದಿ ಸಿಂಚನ

ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಬನ್ನೂರಿನ ರೋಟರಿ ಶಾಲೆಗೆ ಶೇ.100ರಷ್ಟು ಫಲಿತಾಂಶ



ಬನ್ನೂರು: ಈ ಸಾಲಿನ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಬನ್ನೂರಿನ ರೋಟರಿ ಪ್ರೌಢಶಾಲೆಯು ಶೇ. 100ರಷ್ಟು ಫಲಿತಾಂಶ ಪಡೆದು, ಅತ್ಯುತ್ತಮ ಸಾಧನೆ ಮಾಡಿದೆ. ಶಾಲೆಯಿಂದ ಪರೀಕ್ಷೆಗೆ ಹಾಜರಾಗಿದ್ದ ಎಲ್ಲ ವಿದ್ಯಾರ್ಥಿಗಳು ಉತ್ತಮ ಅಂಕಗಳೊಂದಿಗೆ ತೇರ್ಗಡೆಯಾಗಿದ್ದಾರೆ. ವಿದ್ಯಾರ್ಥಿಗಳ ಈ ಅಮೋಘ ಸಾಧನೆಗೆ ಶಾಲಾ ಆಡಳಿತ ಮಂಡಳಿ, ಮುಖ್ಯೋಪಾಧ್ಯಾಯರು ಹಾಗೂ ಶಿಕ್ಷಕ ವೃಂದದವರು ಹರ್ಷ ವ್ಯಕ್ತಪಡಿಸಿದ್ದಾರೆ. ಉನ್ನತ ಶ್ರೇಣಿ - 7, ಪ್ರಥಮ ಶ್ರೇಣಿ- 19 ಹಾಗೂ ದ್ವಿತೀಯ ಶ್ರೇಣಿ - 5 ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ. ವಿದ್ಯಾರ್ಥಿನಿ ಕೆ.ಎಂ. ಸ್ನೇಹ - 582(ಶೇ. 93.12), ಎಲ್. ನಿಸರ್ಗ - 572 (ಶೇ. 91.52) ಮತ್ತು ಬಿ. ಚಂದನ - 570 (ಶೇ. 91.20) ಅಂಕಗಳನ್ನು ಪಡೆಯುವ ಮೂಲಕ ಶಾಲೆಗೆ ಕೀರ್ತಿ ತಂದಿದ್ದಾರೆ. ರೋಟರಿ ಶಾಲೆಯ ಕಾರ್ಯದರ್ಶಿ ಬಿ.ಕೆ. ವೆಂಕಟೇಶ್ ಪ್ರಸಾದ್ ಮಾತನಾಡಿ, ಶಿಕ್ಷಕರ ಶ್ರಮ, ಪೋಷಕರ ಸಹಕಾರ ಹಾಗೂ ವಿದ್ಯಾರ್ಥಿಗಳ ಕಠಿಣ ಪರಿಶ್ರಮದಿಂದ ಈ ಅದ್ಭುತ ಫಲಿತಾಂಶ ಸಾಧ್ಯವಾಗಿದೆ ಎಂದು ತಿಳಿಸಿದರು. ರೋಟರಿ ಶಾಲೆಯ ಅಧ್ಯಕ್ಷ ಬಿ.ಎನ್. ಸುರೇಶ ಆಡಳಿತ ಮಂಡಳಿ ಪರವಾಗಿ ಎಲ್ಲ ವಿದ್ಯಾರ್ಥಿಗಳಿಗೂ ಅಭಿನಂದಿಸಿದ್ದಾರೆ.

ರಸ್ತೆ, ಯುಜಿಡಿ ಸಮಸ್ಯೆ ಪರಿಹಾರಕ್ಕೆ ₹500 ಕೋಟಿಗೆ ಪ್ರಸ್ತಾವ: ಜಿಟಿಡಿ

ಚಾಮುಂಡೇಶ್ವರಿ ಕ್ಷೇತ್ರದ ವಾರ್ಡ್ ನಂಬರ್ 58ರ ಜನಸಂಪರ್ಕ ಸಭೆ | ಒಂದು ಸಾವಿರಕ್ಕೂ ಹೆಚ್ಚು ಖಾಸಗಿ ಬಡಾವಣೆ

• **ಕನ್ನಡಪ್ರಭ ವಾರ್ತೆ** ಮೈಸೂರು

ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ನಗರ ಪಾಲಿಕೆ ವಾರ್ಡ್ ಗಳು, ಖಾಸಗಿ ಬಡಾವಣೆಗಳಲ್ಲಿ ರಸ್ತೆ, ಒಳಚರಂಡಿ ಸಮಸ್ಯೆ ಪರಿಹರಿಸಲು ಚಾಮುಂಡೇಶ್ವರಿ ಕ್ಷೇತ್ರಕ್ಕೆ ಅಂದಾಜು 500 ಕೋಟಿ ರು. ಅಗತ್ಯವಿರುವ ಕಾರಣ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಹಂತ ಹಂತವಾಗಿ ಸರ್ಕಾರದಿಂದ ಬಿಡುಗಡೆ ಮಾಡಿ ಕಾಮಗಾರಿ ಆರಂಭಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಶಾಸಕ ಜಿ.ಟಿ. ದೇವೇಗೌಡ ಹೇಳಿದರು.

ರಾಮಕೃಷ್ಣನಗರ ಎಚ್. ಬ್ಲಾಕ್ ಸಾಲುಮರದ ತಿಮ್ಮಕ್ಕ ಉದ್ಯಾನವನದ ಆವರಣದಲ್ಲಿ ಗುರುವಾರ ನಡೆದ ನಗರ ಪಾಲಿಕೆಯ 58ನೇ ವಾರ್ಡಿನ ವ್ಯಾಪ್ತಿಯ ಜನಸಂಪರ್ಕ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಚಾಮುಂಡೇಶ್ವರಿ ಕ್ಷೇತ್ರ ದೊಡ್ಡ ಕ್ಷೇತ್ರವಾಗಿದ್ದು, ಅಂದಾಜು 6 ಲಕ್ಷ ಜನಸಂಖ್ಯೆ ಹೊಂದಿದೆ. ಈ ಕ್ಷೇತ್ರದಲ್ಲಿರುವ ಸಮಸ್ಯೆಗಳು ಬೇರೆ ಕ್ಷೇತ್ರಗಳಲ್ಲಿ ಕಂಡು ಬರಲ್ಲ. ಒಂದು ಸಾವಿರಕ್ಕೂ ಹೆಚ್ಚು ಖಾಸಗಿ ಬಡಾವಣೆಗಳಿವೆ. ಬಡಾವಣೆಗಳನ್ನು ನಿರ್ಮಾಣ ಮಾಡುವಾಗ ಕುಡಿಯುವ ನೀರು, ರಸ್ತೆ, ಒಳಚರಂಡಿ ಮೊದಲಾದ ಸಮಸ್ಯೆ ಪರಿಹರಿಸದೆ ಹಾಗೆಯೇ ಬಿಟ್ಟು ಹೋಗಿದ್ದಾರೆ. ಇವುಗಳಿಗೆ ಮೂಲ ಸೌಕರ್ಯ ಕಲ್ಪಿಸಬೇಕಾದರೆ ಅಂದಾಜು 500 ಕೋಟಿ ರು. ಬೇಕಾಗುತ್ತದೆ ಎಂದರು.



ಯುಜಿಡಿ ಸಮಸ್ಯೆ ಪರಿಹರಿಸಲು ಶಾಶ್ವತವಾದ ಕಾಮಗಾರಿಗೆ ಪ್ರಸ್ತಾವನೆ ಸಲ್ಲಿಸಿದ್ದು, ಶೀಘ್ರ ಅನುಮೋದನೆ ಪಡೆಯಲು ಶಕ್ತಿ ಮೀರಿ ಶ್ರಮಿಸುವೆ. ರಾಮಕೃಷ್ಣನಗರ ಸೇರಿದಂತೆ ನನ್ನ ವ್ಯಾಪ್ತಿಯ ಭಾಗದ ಐದು ವಾರ್ಡ್ ಗಳಿಗೆ 27 ಕೋಟಿ ರು. ಪ್ರಸ್ತಾವನೆ ಸಲ್ಲಿಸಿದ್ದು, ಈವರೆಗೆ ಅನುದಾನ ಬಿಡುಗಡೆ ಆಗಿಲ್ಲ. ಕುಡಿಯುವ ನೀರು, ರಸ್ತೆ, ಒಳಚರಂಡಿ ಮಾಡಿಲ್ಲದೆ ಸಾರ್ವಜನಿಕರಿಗೆ ತೊಂದರೆ ಆಗಿದೆ. ಎಲ್ಲಾ ಬಡಾವಣೆಗಳಿಗೆ ಮೂಲ ಸೌಕರ್ಯ ಕಲ್ಪಿಸಲು 500 ಕೋಟಿ ರು. ಅಗತ್ಯವಿದ್ದು, ಸರ್ಕಾರದಿಂದ ಹಂತ ಹಂತವಾಗಿ ಒದಗಿಸಲು ಕ್ರಮ ಕೈಗೊಳ್ಳುವುದಾಗಿ ಹೇಳಿದರು.

ಈಗಾಗಲೇ ಅಧಿಕಾರಿಗಳಿಗೂ ಅಗತ್ಯವಿರುವ ಪ್ರಸ್ತಾವನೆ ತಯಾರಿಸಿ ಸರ್ಕಾರಕ್ಕೆ ಸಲ್ಲಿಸಲು ಹೇಳಲಾಗಿದೆ. ಹಳೆಯ ಉಂಡುವಾಡಿ ಯೋಜನೆಯ ವರ್ಷಾಂತ್ಯದಲ್ಲಿ ಮುಗಿಯಲಿದ್ದು, ದಿನದ 24 ಗಂಟೆಗಳ ಕಾಲ ನೀರು ಕೊಡಲಾಗುವುದು. 32 ಟ್ಯಾಂಕ್ ಗಳನ್ನು ನಿರ್ಮಿಸಿದ್ದು, ಈಗ 27 ಮುಗಿದಿದೆ. ಕಬಿನಿ ನದಿ ಮೂಲದ ಯೋಜನೆಯಿಂದ 60 ಎಂ.ಎಲ್.ಡಿ ನೀರು ಬರುತ್ತಿದ್ದು, ಮತ್ತೆ 60 ಎಂ.ಎಲ್.ಡಿ ನೀರುಹರಿಸಲು ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದರು.

ಅಧಿಕಾರಿಗಳಲ್ಲಿ ಸಮನ್ವಯತೆ: ಅಧಿಕಾರಿಗಳು ಸಮನ್ವಯತೆಯಿಂದ ಕೆಲಸ ಮಾಡಬೇಕು. ಹಲವು ವರ್ಷಗಳಿಂದ ಇದ್ದ ಸಮಸ್ಯೆಗಳನ್ನು ಪರಿಹರಿಸಲು ಹೆಚ್ಚಿನ ಆದ್ಯತೆ ನೀಡಲಾಗಿದೆ. ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಕರೆಯಿಸಿ ಮನವರಿಕೆ ಮಾಡಿಸಿ ಕೊಡುವ ಕೆಲಸ ಮಾಡಲಾಗಿದೆ. ಜಿಲ್ಲಾಧಿಕಾರಿಗಳನ್ನೇ ಖುದ್ದು ಆಹ್ವಾನಿಸಿ ಜನರ ಸಮಸ್ಯೆ ಅರಿಯುವಂತೆ ಮಾಡಲಾಗಿದೆ ಎಂದರು.

ನಗರ ಪಾಲಿಕೆ, ಲೋಕೋಪಯೋಗಿ, ಸೆಸ್ಕ್, ಅರಣ್ಯ ಇಲಾಖೆ ಅಧಿಕಾರಿಗಳು ಒಟ್ಟಾಗಿ ಕೆಲಸ ಮಾಡಿದರೆ ಅನೇಕ ಸಮಸ್ಯೆ ಪರಿಹರಿಸಬಹುದು. ಜನರಿಂದ ನಿತ್ಯ ನೂರಾರು ಸಮಸ್ಯೆಗಳು ಕೇಳಿ ಬರುತ್ತಿವೆ. ರಾಮಕೃಷ್ಣನಗರ ಬಡಾವಣೆಯ ಜನರ ಕಷ್ಟಗಳನ್ನು ನಾನೇ ನೋಡಿದ್ದೇನೆ. ಲಿಂಗಾಬುದಿ ಕೆರೆಗೆ ಹರಿಯುವ ಯುಜಿಡಿ ನೀರು ಸೇರದಂತೆ ಶೀಘ್ರ ಕ್ರಮಕೈಗೊಳ್ಳಲು ನಗರ ಪಾಲಿಕೆ ಅಧಿಕಾರಿಗಳು ಗಮನಹರಿಸಲಿದ್ದಾರೆ ಎಂದರು.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈಸೂರಿನ ತಮ್ಮ ನಿವಾಸದ ಬಳಿಗೆ ಆಗಮಿಸಿದ್ದ ಜನರಿಂದ ಗುರುವಾರ ಅಹವಾಲುಗಳನ್ನು ಸ್ವೀಕರಿಸಿದರು.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈಸೂರಿನ ಮೈಲಾರಿ ಹೊಟೇಲ್‌ನಲ್ಲಿ ಗುರುವಾರ ಬೆಳಗಿನ ಉಪಾಹಾರ ಸವಿದರು. ಪಶುಸಂಗೋಪನೆ ಹಾಗೂ ರೇಷ್ಮೆ ಖಾಲೆ ಸಚಿವ ಕೆ. ವೆಂಕಟೇಶ್, ಮಾಜಿ ಸಚಿವ ಕೆ.ಎನ್.ರಾಜಣ್ಣ, ಶಾಸಕರಾದ ಸಿ. ಪುಟ್ಟರಂಗಶೆಟ್ಟಿ, ವಿಧಾನ ಪರಿಷತ್ ಸದಸ್ಯ ಡಾ.ಡಿ. ತಿಮ್ಮಯ್ಯ ಸೇರಿದಂತೆ ಇತರರು ಇದ್ದರು.

ನಾಳೆ, ನಾಡಿದ್ದು ಬುದ್ಧ ಫೆಸ್ಟ್-2026

• **ಕನ್ನಡಪ್ರಭ ವಾರ್ತೆ** ಮೈಸೂರು

ಅಂಬೇಡ್ಕರ್‌ಸಾಹಿತ್ಯ ಅಕಾಡೆಮಿ, ಗ್ರಾಮ್ಯಾಕ್ಸ್ ಡೆವಲಪರ್ಸ್ ಲಿ. ಸಹಯೋಗದಲ್ಲಿ ಮೇ 9 ಮತ್ತು 10 ರಂದು ಮೈಸೂರು ತಾಲೂಕು ಉದ್ಬೂರು ಗೇಟ್ ಬಳಿಯ ಡಾ. ವಿಷ್ಣುವರ್ಧನ್ ಸ್ಮಾರಕ ಭವನದಲ್ಲಿ ದ ಬುದ್ಧ ಫೆಸ್ಟ್- 2026 ಬುದ್ಧ ಪ್ರಜ್ಞಾ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಮಾಜಿ ಮೇಯರ್‌ಪುರುಷೋತ್ತಮ್ ತಿಳಿಸಿದರು.

ರಾಜ್ಯಾದ್ಯಂತ ಇದೇ ವಿಷಯ ಕುರಿತು ಹಮ್ಮಿಕೊಂಡಿದ್ದಆನ್‌ಲೈನ್‌ಕಾರ್ಯಕ್ರಮಗಳಲ್ಲಿ ಪಾಲ್ಗೊಂಡಿದ್ದ ನೂರಾರು ಮಕ್ಕಳು ಬುದ್ಧ ಫೆಸ್ಟ್‌ನಲ್ಲಿ ನಡೆಯಲಿರುವ ವಿವಿಧ ಸ್ಪರ್ಧೆಗಳಲ್ಲಿ ಭಾಗಿಯಾಗಲಿದ್ದಾರೆ. ಎರಡೂ ದಿನ ಬೆಳಗ್ಗೆ 7.30 ರಿಂದ ಸಂಜೆ 7.30 ರವರೆಗೆ ಈ ಕಾರ್ಯಕ್ರಮ ನಡೆಯಲಿದೆ ಎಂದು ಅವರು ಗುರುವಾರ ಸುದ್ದಿಗೋಷ್ಠಿಯಲ್ಲಿ ಹೇಳಿದರು.

ಇಂದುಮೊಬೈಲ್, ಟಿವಿಮೊದಲಾದವುಗಳಿಗೆ ದಾಸರಾಗಿ ಖಿನ್ನತೆಗೆ ದೂಡಲ್ಪಡುತ್ತಿರುವ ಮಕ್ಕಳನ್ನು ನೈತಿಕವಾಗಿ ಮೇಲೆ ತಂದು ಆರೋಗ್ಯಕರ ಮನಸ್ಸು ರೂಢಿಸಿಕೊಳ್ಳುವಂತೆ ಮಾಡುವ ಉದ್ದೇಶ ಈ ಕಾರ್ಯಕ್ರಮದ್ದಾಗಿದೆ. ಕೆಲ ತಿಂಗಳ ಹಿಂದೆ ಬುದ್ಧಪ್ರಜ್ಞೆ ಬಗ್ಗೆ ಮನೆಯಲ್ಲೇ ಮಾತನಾಡಿ, ಬುದ್ಧರ ಕಥೆ ಹೇಳಿ ಎಂಬ ಶೀರ್ಷಿಕೆಯಲ್ಲಿ ಮಕ್ಕಳಿಗೆ ಆನ್ ಲೈನ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಬೀದರ್ ನಿಂದ ಚಾಮರಾಜನಗರದವರೆಗಿನ ಮಕ್ಕಳು ಇದರಲ್ಲಿ ಪಾಲ್ಗೊಂಡಿದ್ದರು. ಈ ಕಾರ್ಯಕ್ರಮ ಸಮಾರೋಪವಾಗಿ ಮೇ 9 ಮತ್ತು 10ರ ಕಾರ್ಯಕ್ರಮ ನಡೆಯುತ್ತಿದೆ ಎಂದರು.

ವಿಜೇತ ಮಕ್ಕಳಿಗೆ ಬಹುಮಾನ ವಿತರಿಸಲಾಗುವುದು. ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಸಿ. ಮಹದೇವಪ್ಪ, ಕೋಟಗಾನಹಳ್ಳಿ ರಾಮಯ್ಯ, ಮೂಡ್ನಕೂಡು ಚಿನ್ನಸ್ವಾಮಿ, ಶ್ರೀ ಜ್ಞಾನಪ್ರಕಾಶ ಸ್ವಾಮೀಜಿ ಪಾಲ್ಗೊಂಡು ಬುದ್ಧ ಪ್ರಜ್ಞೆ ಬಗ್ಗೆ ಅರಿವು ಮೂಡಿಸಲಿದ್ದಾರೆ ಎಂದರು. ಮುಖಂಡರಾದ ಹರಕುಮಾರ್, ಸೋಮಯ್ಯ ಮಲೆಯೂರು, ಹಾರೋಹಳ್ಳಿ ಸುರೇಶ್ ಸೇರಿದಂತೆ ಇತರರು ಇದ್ದರು.

ಸಾರಿಗೆ ಸಂಸ್ಥೆಯ ಎಲ್ಲ ನೌಕರರ ಸಂಘಗಳು ಒಗ್ಗಟ್ಟಿನಿಂದ ಹೋರಾಟ ಮಾಡಿ

• **ಕನ್ನಡಪ್ರಭ ವಾರ್ತೆ** ಮೈಸೂರು

ರಾಜ್ಯ ಕಾಂಗ್ರೆಸ್ ಸರ್ಕಾರ ರಚನೆಗೂ ಮೊದಲು ಸಾರಿಗೆ ಸಂಸ್ಥೆ ನೌಕರರಿಗೆ ನೀಡಿದ್ದ ಭರವಸೆ ಅಧಿಕಾರಕ್ಕೆ ಬಂದ ಮೇಲೆ ಮರೆತಿದೆ. ಈ ಕುರಿತು ಬೇಡಿಕೆ ಸಲ್ಲಿಸಲು ಮುಂದಾಗುವ ಕಾರ್ಮಿಕ ಸಂಘಗಳ ನಡುವೆ ಒಡಕುಂಟು ಮಾಡಲು ಯತ್ನಿಸುತ್ತಿದೆ. ಹೀಗಾಗಿ, ಸಾರಿಗೆ ಸಂಸ್ಥೆಯ ಎಲ್ಲ ನೌಕರರ ಸಂಘಗಳು ಒಗ್ಗಟ್ಟಿನಿಂದ ಸರ್ಕಾರದ ಜೊತೆ ಹೋರಾಟ ಮಾಡಬೇಕಾದ ಅಗತ್ಯವಿದೆ ಎಂದು ಕೆಎಸ್ಆರ್ ಟಿಸಿ ಸಾರಿಗೆ ನೌಕರರ ಕೂಟದ ಗೌರವ ರಾಜ್ಯಾಧ್ಯಕ್ಷ ಬಿ.ಎಸ್. ಸುರೇಶ್ ತಿಳಿಸಿದರು.

ಸಾರಿಗೆ ನೌಕರರಿಗೆ ಸರ್ಕಾರಿ ನೌಕರರಿಗೆ ಸಮಾನವಾದ ವೇತನ ನೀಡುವುದಾಗಿ ಭರವಸೆ ಹಿನ್ನೆಲೆಯಲ್ಲಿ ಸಾರಿಗೆಯ ನಾಲ್ಕೂ ನಿಗಮಗಳ ನೌಕರರು, ಅವರ ಕುಟುಂಬದವರು ಹಗಲಿರುಳೂ ಶ್ರಮಿಸಿದ ಕಾರಣ ಕಾಂಗ್ರೆಸ್ ಪಕ್ಷ ನಿರೀಕ್ಷೆಗೂ ಮೀರಿ ಹೆಚ್ಚು ಬಹುಮತದೊಡನೆ ಅಧಿಕಾರಕ್ಕೆ ಬಂದಿತು. ಆದರೆ, ಸರ್ಕಾರ ಈಗ ತನ್ನ ಭರವಸೆ ಮರೆತಿದೆ ಎಂದು ಗುರುವಾರ ಸುದ್ದಿಗೋಷ್ಠಿಯಲ್ಲಿ ಕಿಡಿಕಾರಿದರು.

2020 ರಿಂದ ಜಾರಿಯಾಗಬೇಕಾಗಿದ್ದ ವೇತನ ವಿಮರ್ಶೆಯನ್ನು 2023 ರಲ್ಲಿ ಮಾಡಿದ್ದು, ಇದರಿಂದಾಗಿ ಸಾರಿಗೆ ನೌಕರರಿಗೆ 38 ತಿಂಗಳುಗಳಿಂದ ನೀಡಬೇಕಾಗಿದ್ದ ಹಿಂಬಾಕಿ ಬದಲಾಗಿ 12 ತಿಂಗಳ ಸಂಬಳ ಕಡಿತಗೊಳಿಸಿ ಕೇವಲ 26 ತಿಂಗಳ ಹಿಂಬಾಕಿ ಪಡೆಯುವಂತೆ ಒತ್ತಡ ಹೇರಲಾಗುತ್ತಿದೆ. ಈ ಕುರಿತು ಪದೇ ಪದೇ ಮಾತುಕತೆಗೆ ಹೋದಲ್ಲಿ ನೌಕರರ ಸಂಘಗಳಲ್ಲಿ ಒಡಕುಂಟು ಮಾಡಲು ಯತ್ನಿಸಲಾಗುತ್ತಿದೆ. ಹೀಗಾಗಿ, ಎಲ್ಲ ನೌಕರರ ಸಂಘಟನೆಗಳು ಒಗ್ಗೂಡಿ ಮಾತುಕತೆಗೆ ಹೋಗಿ ಬೇಡಿಕೆ ಈಡೇರಿಕೆಗೆ ಹೋರಾಡಬೇಕು ಎಂದರು.

ಪುರುಷೋತ್ತಮ್, ಕೂಟದ ಸಿ.ಡಿ. ವಿಶ್ವನಾಥ್, ನಾಗರಾಜ್, ಪರಶುರಾಮ್ ಇತರರು ಇದ್ದರು.